ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 61
19-8-2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 61

## ಗಣೇಶ ಚತುರ್ಥಿ, ಈದ್ ಮಿಲಾದ್ ಹಬ್ಬ ಆಚರಣೆ

# ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಮೆರವಣಿಗೆ ಸಾಂಪ್ರದಾಯಿಕ, ಸೌಹಾರ್ದತೆಯಿಂದ ಕೂಡಿರಲಿ

## ನಾಗರೀಕ ಸೌಹಾರ್ದತಾ ಸಭೆಯಲ್ಲಿ ಡಿಸಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ

**ದಾವಣಗೆರೆ:** ಕಲೆ ಸಾಂಸ್ಕೃತಿಕತೆಗೆ ಹೆಸರುವಾಸಿಯಾದ ದೇಶದಲ್ಲಿ ಪರಿಸರ ಸ್ನೇಹಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪರಿಸರ ಉಳಿವಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಸಹಯೋಗದಲ್ಲಿ ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಹಬ್ಬದ ಪ್ರಯುಕ್ತ ಆಯೋಜಿಸಲಾದ ನಾಗರೀಕ ಸೌಹಾರ್ದತಾ ಸಭೆಯ ಅಧ್ಯಕ್ಷತೆ ವಹಸಿ ಅವರು ಮಾತನಾಡಿದರು.

ವಿವಿಧತೆಯಲ್ಲಿ ಏಕತೆಯನ್ನು ಹೊಂದಿರುವ ಈ ದೇಶದಲ್ಲಿ ಹಬ್ಬಗಳು ಸಂಭ್ರಮ ಸಡಗರದಿಂದ ಆಚರಣೆ ಮಾಡಬೇಕು. ಆದರೆ ಆ ಸಡಗರ ನಮಗೆ ಶೋಕಾಚರಣೆಯಾಗಬಾರದು. ಆದ್ದರಿಂದ ಹಿಂದೂ ಹಾಗೂ ಮುಸ್ಲೀಂ ಸಮುದಾಯದ ಜನತೆ ಯಾವುದೇ ರೀತಿಯ ಕೋಮು ಗಲಭೆ, ಶಾಂತಿ ಕದಡುವ ಕೆಲಸ ಮಾಡದಂತೆ ವ್ಯವಸ್ಥಿತವಾಗಿ ಆಚರಣೆ ಮಾಡಬೇಕು ಎಂದರು.

ಸಾಮಾಜಿಕ ಜಾಲತಾಣಗಳಲ್ಲಿ ಬೇರೆ ಯಾರಿಗೆ ಆಗಲೀ ಅಥವಾ ಅನ್ಯ ಜಾತಿ, ಕೋಮುಗಳ ಶಾಂತಿ ಕದಡುವಂಥವರನ್ನು ಭಾವನೆಗಳಿಗೆ ಧಕ್ಕೆ ಉಂಟು ಮಾಡುವಂತಹ ವೀಡಿಯೋ, ಆಡಿಯೋಗಳನ್ನು



ಹಂಚಿಕೊಳ್ಳುವಂತಿಲ್ಲ. ಜಿಲ್ಲೆಯಲ್ಲಿ ಈಗಾಗಲೇ ಅಂತಹವರನ್ನು ಗುರುತಿಸಿ 28 ಗಡೀಪಾರು ಮಾಡಲಾಗಿದೆ. ಇಂತಹವರ ಬಗ್ಗೆ ಮಾಹಿತಿ ಇದ್ದಲ್ಲಿ ಹಾಗೂ ಮಧ್ಯ, ಮಾಧಕ ವಸ್ತುಗಳ ಬಳಕೆ ಮತ್ತು ಮಾರಾಟ ಕುರಿತು ಮಾಹಿತಿ ಇದ್ದಲ್ಲಿ ಮಾಹಿತಿ ನೀಡಿದಲ್ಲಿ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಮೆರವಣಿಗೆಗೆ ಡಿಜೆ ನಿಷೇಧ: ಗಣೇಶಮೂರ್ತಿ ವಿಸರ್ಜನೆ ಹಾಗೂ ಈದ್ ಮಿಲಾದ್ ಹಬ್ಬಗಳ ಆಚರಣೆ ಮತ್ತು ವಿಸರ್ಜನೆ ವೇಳೆ ಪೊಲೀಸ್ ಇಲಾಖೆ ನಮಗೆ ರಕ್ಷಣೆ ನೀಡಲು ಹಗಲಿರಲು ಶ್ರಮಿಸುತ್ತಾರೆ. ಈ ಬಾರಿ ಹಬ್ಬಗಳ ಆಚರಣೆ, ವಿಸರ್ಜನೆಗೆ ಡಿಜೆಗಳಿಗೆ ಅನುಮತಿ ನಿಷೇಧಿಸಲಾಗಿದೆ. ಇದರಿಂದ ಶಬ್ದ ಮಾಲಿನ್ಯ ಉಂಟಾಗುವುದಲ್ಲದೇ ಹಲವು ಘರ್ಷಣೆಗಳಿಗೆ ಎಡೆ ಮಾಡಿಕೊಡುತ್ತದೆ. ಆದ್ದರಿಂದ ಸಾರ್ವಜನಿಕರು ನಮ್ಮ ದೇಶದ ಕಲೆ, ಸಂಸ್ಕೃತಿ ಸಾಂಸ್ಕೃತಿಕತೆಗೆ ಹೆಸರಾದ ಸ್ಥಳೀಯ ಜಾನಪದ ಪ್ರಕಾರಗಳು, ಡೋಲು, ಮುಂತಾದವುಗಳನ್ನು ಮೆರವಣಿಗೆಗೆ ಬಳಸಿಕೊಂಡಲ್ಲಿ ಕಲಾವಿದರ ಹೊಟ್ಟೆಯು ತುಂಬಲಿದೆ. ನಮ್ಮ ಕಲೆ, ಸಂಸ್ಕೃತಿ ಉಳಿಸಬೇಕಾದರೆ, ಅವುಗಳನ್ನು ಪ್ರೋತ್ಸಾಹಿಸಿ ಪೋಷಿಸಬೇಕು. ಡಿಜೆಗಳಿಗೆ ಪರ್ಯಾಯವಾಗಿ ಡೋಲು, ತಮಟೆ, ಜಾನಪದ ನೃತ್ಯ, ಸಾಂಸ್ಕೃತಿಕ ರಸದೌತಣ ನೀಡುವುದರೊಂದಿಗೆ ಸನಾತನ ಸಂಸ್ಕೃತಿಯನ್ನು ಮತ್ತಷ್ಟು ಶ್ರೀಮಂತಗೊಳಿಸಬೇಕು. ಅಲ್ಲದೇ ಕಲೆ, ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯಬೇಕಿದೆ ಎಂದು ತಿಳಿಹೇಳಿದರು.

ಪರಿಸರ ಸ್ನೇಹಿ ಗಣೇಶ ಮೂರ್ತಿ ಬಳಸಿ:

ಪರಿಸರ ಮಾಲಿನ್ಯ ತಡೆಗಟ್ಟಲು ಜಿಲ್ಲಾಡಳಿತ ವತಿಯಿಂದ ಹಲವಾರು ಅಗತ್ಯಕ್ರಮ ಕೈಗೊಳ್ಳಲಾಗಿದೆ. ಇದರಿಂದ ನಮ್ಮ ಜೀವ ಜಲವಾದ ತುಂಗಾಭದ್ರಾ ನದಿ ಮೂಲವನ್ನು ಉಳಿಸಬೇಕು. ಪರಿಸರ ಸ್ನೇಹಿ ಗಣೇಶಮೂರ್ತಿ ಪ್ರತಿಷ್ಠಾಪನೆ ಮಾಡಿ ಪರಿಸರ ಉಳಿವಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಸಾರ್ವಜನಿಕರು ಹಬ್ಬದ ಪ್ರಯುಕ್ತ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್ ಅಳವಡಿಸಲು ಸಂಬಂಧಪಟ್ಟ ಇಲಾಖೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಮಾರ್ಗಗಳನ್ನು ಬದಲಾವಣೆ ಮಾಡದೆ ಜಿಲ್ಲಾಡಳಿತ ಸೂಚನೆಯಂತೆ ಪಾಲನೆ ಮಾಡಬೇಕು. ಮದ್ಯಪಾನ ಮಾಡಿ ಮೆರವಣಿಗೆಯಲ್ಲಿ ಭಾಗವಹಿಸುವುದರಿಂದ ನಮ್ಮ ಸಂಸ್ಕೃತಿಯನ್ನು ಹಾಳುಮಾಡಿದಂತಾಗುತ್ತದೆ. ಗಣೇಶಮೂರ್ತಿ ಪ್ರತಿಷ್ಠಾಪನೆ, ವಿಸರ್ಜನೆ ವೇಳೆ ವಿದ್ಯುತ್ ಅವಘಡಗಳು ಸಂಭವಿಸದಂತೆ ಅತ್ಯಂತ ಜಾಗೃತೆ ವಹಿಸಬೇಕು. ನಿಮ್ಮ ಶ್ರೇಯೋಭಿಲಾಷೆಗಾಗಿ ಜಿಲ್ಲಾಡಳಿತ ಶ್ರಮಿಸುತ್ತಿದೆ. ಅದಕ್ಕಾಗಿ ತಾವೆಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

## ಲೋಕಾಯುಕ್ತ ಬಲೆಗೆ ಪಿಡಿಓ ಶಶಿಧರ್ ಪಾಟೀಲ್

**ದಾವಣಗೆರೆ :** ಜಗಳೂರು ತಾಲ್ಲೂಕು ಪಲಾಗಟ್ಟೆ



ಗ್ರಾಮ ಪಂಚಾಯತ್ ಪಿಡಿಒ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದು ಜೈಲು ಪಲಾಗಿದ್ದಾರೆ.

ಶಶಿಧರ್ ಪಾಟೀಲ್ ಬಂಧಿತ. ಈತ ಸುರಗೂಡನಹಳ್ಳಿಯ ಅಶೋಕ್ ಎಂಬುವರಿಗೆ ಇ ಖಾತಾ ಮಾಡಿಕೊಡಲು ಹತ್ತು ಸಾವಿರ ರು ಲಂಚ ಪಡೆಯುವಾಗ ಸಿಕ್ಕಿದ್ದಾನೆ.

ಲೋಕಾಯುಕ್ತ ಎಸ್ ಪಿ ಕೌಳಂಪುರ ಹಾಗೂ ಸಿಬ್ಬಂದಿ ದಾಳಿಯಲ್ಲಿ ಭಾಗವಹಿಸಿದ್ದರು.

## ಧರ್ಮಸ್ಥಳ ಪರ ಪ್ರತಿಭಟನೆಗೆ ರೈತ ಸಂಘ ಬೆಂಬಲ

**ದಾವಣಗೆರೆ:** ವಿಶ್ವ ಪ್ರಸಿದ್ಧಿ ಹೊಂದಿರುವ ಹಿಂದೂಗಳ ಪವಿತ್ರ ಕ್ಷೇತ್ರವಾಗಿರುವ ಧರ್ಮಸ್ಥಳ ಮತ್ತು ಕ್ಷೇತ್ರದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಕುಟುಂಬಕ್ಕೆ ದಕ್ಕೆತರುವ ದುರುದ್ದೇಶದಿಂದ ಕೆಲವರು ಧರ್ಮಸ್ಥಳದ ಪರಂಪರೆಯ ನಾಶಕ್ಕೆ ಹುನ್ನಾರ ನಡೆಸಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆರೋಪಿಸಿದೆ.

ಅನಾಮಿಕ ಮುಸುಕುಧಾರಿಯನ್ನು ಮುಂದೆಬಿಟ್ಟಿರುವ ಕಾಣದ ಕೈಗಳು ಧರ್ಮಸ್ಥಳದ ಹೆಸರನ್ನು ಹಾಳು ಮಾಡಲು ಹುನ್ನಾರ ನಡೆಸಿದ್ದಾರೆ. ಇಂಥ ಆರೋಪಿಗಳಿಗೆ ತಕ್ಕ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿ ಧರ್ಮಸ್ಥಳದ ಭಕ್ತರು ಆ.20 ದಾವಣಗೆರೆಯಲ್ಲಿ ಹಮ್ಮಿಕೊಂಡಿರುವ ಪ್ರತಿಭಟನೆಗೆ ಸಂಘಟನೆ ಬೆಂಬಲಿಸಿದೆ ಎಂದು ಸಂಘಟನೆಯ ದಾವಣಗೆರೆ ತಾಲ್ಲೂಕು ಅಧ್ಯಕ್ಷ ಮಂಡಲೂರು ವಿಶ್ವನಾಥ್ ತಿಳಿಸಿದ್ದಾರೆ.

## ನಾಳೆಯಿಂದ ಬಿಐಇಟಿಯಲ್ಲಿ ಕಾರ್ಯಾಗಾರ

**ದಾವಣಗೆರೆ:** ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ ಹಾಗೂ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಮಂಡಳಿ, ನವದೆಹಲಿ ಇವರ ಸಹಯೋಗದಲ್ಲಿ 'ನಾವಿನ್ಯತೆಗಳ ಮೂಲಕ ಕೃತಕ ಬುದ್ಧಿಮತ್ತೆ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್ನಲ್ಲಿ ಸುಸ್ಥಿರ ಅಭಿವೃದ್ಧಿ ಮತ್ತು ಭವಿಷ್ಯದ ಪ್ರವೃತ್ತಿಗಳು' ಎಂಬ ಮೂರು ದಿನಗಳ ಕನ್ನಡದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಕಾರ್ಯಗಾರವನ್ನು ಆ.20 ರಿಂದ 22 ರವರೆಗೆ ಕಾಲೇಜಿನ ಯಾಂತ್ರಿಕ ವಿಭಾಗದ ಶ್ರೀ ಬಸವೇಶ್ವರ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಆ.20ರಂದು ಬೆಳಿಗ್ಗ 10:30ಕ್ಕೆ ನಡೆಯುವ ಕಾರ್ಯಕ್ರಮದ ಉದ್ಘಾಟನೆಯನ್ನು ಪಾಲಿಕೆ ಆಯುಕ್ತೆ ರೇಣುಕಾ ನೆರವೇರಿಸಲಿದ್ದು, ಎಎಸ್ಪಿ ಹೆಚ್. ಪರಮೇಶ್ವರಪ್ಪ ಮತ್ತು ದಾವಣಗೆರೆಯ ಸ್ಮಾರ್ಟ್ ಸಿಟಿ ಲಿಮಿಟೆಡ್ನ ಮಾಹಿತಿ ತಂತ್ರಜ್ಞಾನದ ಉಪಪ್ರಧಾನ ವ್ಯವಸ್ಥಾಪಕರಾದ ಜಿ.ಆರ್. ಮಮತ ಅತಿಥಿಯಾಗಿ, ಬಿಐಇಟಿ ಕಾಲೇಜು ಪ್ರಾಂಶುಪಾಲ ಡಾ. ಹೆಚ್.ಬಿ. ಅರವಿಂದ, ಪ್ರೊ. ವೈ. ವೃಷಭೇಂದ್ರಪ್ಪ, ಕಾರ್ಯಾಗಾರದ ಸಂಯೋಜಕರುಗಳಾದ ಡಾ. ಬಿ. ಸುರೇಶ್ ಮತ್ತು ಡಾ. ಟಿ.ಕೆ ಕೃಷ್ಣಕುಮಾರ್ ಮತ್ತು ವಿವಿಧ ವಿಭಾಗಗಳ ಮುಖ್ಯಸ್ಥರು, ಕಾಲೇಜಿನ ಅಧ್ಯಾಪಕರುಗಳು, ಕಾರ್ಯಾಗಾರಕ್ಕೆ ನೋಂದಾಯಿತ ರಾಜ್ಯದ ವಿವಿಧ ತಾಂತ್ರಿಕ ವಿದ್ಯಾಲಯ ಹಾಗು ವಿವಿಧ ವಿಶ್ವವಿದ್ಯಾಲಯದ ಅಧ್ಯಾಪಕರು ಭಾಗವಹಿಸಲಿದ್ದಾರೆ.

## ಡಿ. ದೇವರಾಜ ಅರಸು ರವರ 110ನೇ ಜನ್ಮ ದಿನಾಚರಣೆ

**ದಾವಣಗೆರೆ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ. ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಪಿ.ಬಿ.ರಸ್ತೆಯಲ್ಲಿರುವ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಲ್ಲಿರುವ ಡಿ.ದೇವರಾಜು ಅರಸು ಪ್ರತಿಮೆಗೆ ಮಾಲಾರ್ಪಣೆ ಮಾಡಲಾಗುತ್ತದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ ಮತ್ತಿತರರು ಭಾಗವಹಿಸುವರು.

# ಅಜ್ಞಾನ ಹೋಗಲಾಡಿಸಲು ಜ್ಞಾನ ಅತ್ಯಗತ್ಯ

## ಅನ್ನದಾನ ಮಹಾಶಿವಯೋಗಿಗಳ ಪುಣ್ಯಾರಾಧನೆಯಲ್ಲಿ ಮುಪ್ಪಿನ ಬಸವಲಿಂಗ ಶ್ರೀ

**ದಾವಣಗೆರೆ:** ಮನುಷ್ಯನ ಜೀವನ ಸಾರ್ಥಕವಾಗಲು ಜ್ಞಾನ ಪಡೆಯುವುದು ಅತಿ ಮುಖ್ಯ ಎಂದು ಹಾಲಕೆರೆ ಶ್ರೀ ಅನ್ನದಾನೀಶ್ವರ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಪ್ರತಿಪಾದಿಸಿದರು.

ಇಲ್ಲಿನ ದೇವರಾಜ ಅರಸು ಬಡಾವಣೆಯ ಶ್ರೀ ಅನ್ನದಾನೀಶ್ವರ ಶಾಖಾಮಠದಲ್ಲಿ ನಡೆದ ಲಿಂಗೈಕ್ಯ ಶ್ರೀ ಅನ್ನದಾನ ಮಹಾಶಿವಯೋಗಿಗಳ 49ನೇ ಹಾಗೂ ಲಿಂಗೈಕ್ಯ ಡಾ. ಅಭಿನವ ಅನ್ನದಾನ ಸ್ವಾಮೀಜಿ ಅವರ 4ನೇ ವರ್ಷದ ಪುಣ್ಯಾರಾಧನೆ ಸಮಾರಂಭದಲ್ಲಿ ಅವರು ಮಾತನಾಡಿದರು.

ನಮ್ಮ ಬಳಿ ಇರುವ ಆಸ್ತಿ ಅಥವಾ ವಸ್ತುವನ್ನು ಸರಿಯಾಗಿ ಉಪಯೋಗಿಸಿಕೊಳ್ಳಲು ಜ್ಞಾನ ಬೇಕು. ಜ್ಞಾನವಿಲ್ಲದಿದ್ದರೆ ನಮ್ಮ ಬಳಿ ಎಷ್ಟೇ ಆಸ್ತಿ ಇದ್ದರೂ ಅದು ಪ್ರಯೋಜನಕ್ಕೆ ಬರುವುದಿಲ್ಲ. ಆದ್ದರಿಂದ, ಅನ್ನದಾನ ಮಹಾಶಿವಯೋಗಿಗಳು ಅಂದರೆ ಬೆತ್ತದಜ್ಜನವರ ಆಧ್ಯಾತ್ಮಿಕ ಚಿಂತನೆಗಳನ್ನು ಅರಿತು ಜೀವನ ಸಾರ್ಥಕಗೊಳಿಸಿಕೊಳ್ಳಬೇಕು ಎಂದು ಸ್ವಾಮೀಜಿಗಳು ಕರೆ ನೀಡಿದರು.

ಅನ್ನದಾನ ಮಹಾಶಿವಯೋಗಿಗಳು ಗುಡಿ



ಸಲುಗಳಿಗೂ ತೆರಳಿ ಅಜ್ಞಾನದ ಕತ್ತಲನ್ನು ಹೋಗಲಾಡಿಸಿದರು. ಅವರು ಯಾವುದೇ ಸರ್ಕಾರಿ ಅನುದಾನ ಪಡೆಯದೆ ಸ್ವಾತಂತ್ರ್ಯ ಪೂರ್ವದಲ್ಲೇ 12 ಉಚಿತ ಪ್ರಸಾದ ನಿಲಯಗಳನ್ನು ಆರಂಭಿಸಿ ಜ್ಞಾನ ಮತ್ತು ಅನ್ನದಾನ ದಾಸೋಹವನ್ನು ನಡೆಸಿದರು ಎಂದು ಅವರು ವಿವರಿಸಿದರು.

ಶ್ರೀ ಅನ್ನದಾನೀಶ್ವರ ಸಾರ್ವಜನಿಕ ಸೇವಾ ಟ್ರಸ್ಟ್‌ನ ಅಧ್ಯಕ್ಷ ಡಾ. ಅಥಣಿ ಎಸ್. ವೀರಣ್ಣ ಮಾತನಾಡಿ, ಮಠಕ್ಕೆ ಜಾಗ ನೀಡಿ ಕಲ್ಯಾಣ ಮಂಟಪ ನಿರ್ಮಿಸಲು ಸಹಕರಿಸಿದ ಅಥಣಿ ಕೊಟ್ರೇಶ್ ಅವರನ್ನು ಸ್ಮರಿಸಿಕೊಂಡರು. ಈಗ ಅತ್ಯಾಧುನಿಕ ಕಲ್ಯಾಣ ಮಂಟಪ ನಿರ್ಮಿಸಲು ನಿರ್ಧರಿಸಲಾಗಿದೆ. ಇದಕ್ಕೆ ಸುಮಾರು 2 ಕೋಟಿ ರೂ. ಅಗತ್ಯವಿದೆ. ಭಕ್ತರು ಈಗಾಗಲೇ ದೇಣಿಗೆ ನೀಡುವ ಭರವಸೆ ನೀಡಿದ್ದು, ಶಾಸಕ ಶಾಮನೂರು ಶಿವಶಂಕರಪ್ಪ ಅವರ ಬಳಿಯೂ ಅನುದಾನಕ್ಕೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಆವರಗೊಳ್ಳದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು. ಕಲ್ಲೂರು ಹಿರೇಮಠದ ಮಹಾಂತೇಶ್ ಶಾಸ್ತ್ರಿ ಉಪನ್ಯಾಸ ನೀಡಿದರು.

ಇದೇ ವೇಳೆ ಎಸ್.ಜಿ. ಉಳುವಯ್ಯನವರಿಗೆ ವಾಣಿಜ್ಯ ಸಿರಿ, ದೂಡಾ ಸದಸ್ಯೆ ವಾಣಿ ಬಕ್ಕೇಶ್‌ಗೆ ಕಾಯಕ ಸೌರಭ, ಪತ್ರಕರ್ತ ಎಂ.ಬಿ. ನವೀನ್‌ಗೆ ಪತ್ರಿಕೋದ್ಯಮ ಸಿರಿ, ನಾಗನೂರು ಆದಪ್ಪ ಹುಚನೂರುಗೆ ಕಾಯಕ ಯೋಗಿ, ಎಸ್. ನಾಗರಾಜ ಮಳಗಿ ಯರಗಲ್‌ಗೆ ಸಮಾಜ ಸೇವಾ ರತ್ನ ಹಾಗೂ ಎ.ವಿ. ರಮೇಶ್‌ಗೆ ಕಾಯಕ ಜೀವಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

## ವಿಜ್ಞಾನ ಮತ್ತು ತಂತ್ರಜ್ಞಾನಗಳ ವಸ್ತು ಪ್ರದರ್ಶನ– ಅನ್ವೇಷಣೋತ್ಸವ –2025

# ವಿಜ್ಞಾನ ಸದಾ ಚಲನೆಯಲ್ಲಿರುವ ಅನ್ವೇಷಣೆ

**ಶಿವಮೊಗ್ಗ :** ವಿಜ್ಞಾನ ನಿಂತ ನೀರಲ್ಲ. ಸದಾ ಚಲನೆಯಲ್ಲಿರುವ ಅನ್ವೇಷಣೆಯಾಗಿದ್ದು ಇತ್ತೀಚಿನ ದಿನಗಳಲ್ಲಿ ನಮ್ಮ ಮನೆ–ಮನಗಳಿಗೆ ವಿಜ್ಞಾನವೇ ಬರುತ್ತಿದ್ದು ಅದನ್ನು ಬಳಸಿಕೊಳ್ಳುವ ಮನಸ್ಥಿತಿ ನಮ್ಮದಾಗಬೇಕು ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಅಧ್ಯಕ್ಷರು ಹಾಗೂ ಕೆಎಸ್‌ಟಿಎ ಸದಸ್ಯರಾದ ಡಾ.ಹುಲಿಕಲ್ ನಟರಾಜ್ ನುಡಿದರು.

ವಿಜ್ಞಾನ ತಂತ್ರಜ್ಞಾನ ಸಂಶೋಧನೆ ಮತ್ತು ಕಲಾ ಪ್ರಗತಿ ಸಂಸ್ಥೆ ಹಾಗು ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್ತಿನ ವತಿಯಿಂದ ಕೆಳದಿ ಶಿವಪ್ಪನಾಯಕ ಕೃಷಿ ತೋಟಗಾರಿಗೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ಇವರ ಸಹಯೋಗದಲ್ಲಿ ನವುಲೆಯ ಕೃಷಿ ಮಹಾವಿದ್ಯಾಲಯದಲ್ಲಿ ಸೋಮವಾರದಿಂದ ಏರ್ಪಡಿಸಲಾಗಿರುವ ಐದು ದಿನಗಳ ವಿಜ್ಞಾನ ಮತ್ತು ತಂತ್ರಜ್ಞಾನಗಳ ವಸ್ತು ಪ್ರದರ್ಶನ – ಅನ್ವೇಷಣೋತ್ಸವ2025



ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಯ, ಆತಂಕ, ದುಗುಡ, ದುರಾಸೆಯಿಂದ ವಿಜ್ಞಾನ ದೂರವಾಗುತ್ತದೆ. ಆದರೆ ನಾವು ಇವನ್ನೆಲ್ಲ ಮೀರಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಅಭಿವೃದ್ಧಿಯೆಡೆ ಹೆಜ್ಜೆ ಹಾಕಬೇಕು. ವಿಜ್ಞಾನಕ್ಕೆ ಸಂಬಂಧಿಸಿದಂತೆ ಸದಾ ಕುತೂಹಲಿಗಳಾಗಿದ್ದು ಪ್ರತಿ ವಿಷಯಗಳ ಬಗ್ಗೆ ಮಾಹಿತಿ ಪಡೆದು, ವಿಚಾರಿಸಿ ಅದರಲ್ಲಿ ತೊಡಗಿಕೊಳ್ಳಬೇಕೆಂದರು.

ಅನ್ವೇಷಣೋತ್ಸವದಲ್ಲಿ ದೇಶದ ಪ್ರತಿಷ್ಠಿತ 8 ಸಂಸ್ಥೆಗಳು ಪಾಲ್ಗೊಂಡಿದ್ದು ವಿದ್ಯಾರ್ಥಿಗಳಲ್ಲಿನ ಚೈತನ್ಯವನ್ನು ಪುಟಿದೇಳಿಸುವ ಉದ್ದೇಶ ಹೊಂದಿವೆ. ಡಿಆರ್‌ಡಿಒ, ಇಸ್ರೋ, ಪ್ಲಾಸ್ಮಾ ಸಂಶೋಧನಾ ಸಂಸ್ಥೆಗಳಿಗೆ ಸಾಮಾನ್ಯರಿಗೆ ಪ್ರವೇಶ ಕಷ್ಟವಾಗಿದೆ. ಆದರೆ ಈ ಸಂಸ್ಥೆಗಳು ಈಗ ನಿಮ್ಮ ಮನೆ ಬಾಗಿಲಿಗೆ ಬಂದಿದ್ದು ವಿದ್ಯಾರ್ಥಿಗಳು, ಸಾರ್ವಜನಿಕರು ಈ ಪ್ರದರ್ಶನದ ಸದುಪಯೋಗ ಪಡೆಯಬೇಕು. ಪ್ರತಿ ವಿದ್ಯಾರ್ಥಿಗಳು ವಿಜ್ಞಾನಿಗಳಾಗಬೇಕು. ಹೊಸ ಅನ್ವೇಷಣೆಗಳನ್ನು ಮಾಡಬೇಕು. 24/7 ಅನ್ವೇಷಣೆಯಲ್ಲಿ ತೊಡಗಿದಾಗ ಮಾತ್ರ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯ ಎಂದರು. ಡಿಸಿಎಫ್ ಡಾ.ಅಜ್ಜಯ್ಯ ಜಿ.ಆರ್ ಮಾತನಾಡಿ, ಅನ್ವೇಷಣೆಗಳನ್ನು ಸಂಭ್ರಮಿಸುತ್ತಾ ಯುವನತೆಯಲ್ಲಿ ಹೊಸ ಹೊಸ ವೈಜ್ಞಾನಿಕ ಅನ್ವೇಷಣೆಗಳ ಬಗ್ಗೆ ಪ್ರೇರೇಪಣೆ, ವಿಜ್ಞಾನದ ಬಗ್ಗೆ ಕುತೂಹಲ ಮೂಡಿಸುತ್ತಿರುವ ಇಂತಹ ಕಾರ್ಯಕ್ರಮ ಶ್ಲಾಘನೀಯ. 2047 ರ ಹೊತ್ತಿಗೆ ನಮ್ಮ ದೇಶ ಅಭಿವೃದ್ಧಿ ಹೊಂದಿದ ದೇಶ ಆಗಬೇಕಾದರೆ ಈ ರೀತಿಯ ಕಾರ್ಯಕ್ರಮಗಳು ಬಹು ಮುಖ್ಯ ಎಂದು ಅಭಿಪ್ರಾಯಪಟ್ಟರು. ಎಸ್‌ಎಎಸ್‌ಟಿಆರ್‌ಎ ಅಧ್ಯಕ್ಷ ಡಾ.ಓಂಕಾರ್ ನಾಯ್ಕ್ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮೀಣ ವಿದ್ಯಾರ್ಥಿಗಳಿಗೆ ವಿಜ್ಞಾನವನ್ನು ತಲುಪಿಸುವ ಉದ್ದೇಶದಿಂದ ಹಾಗೂ ಯುವ ಮನಸ್ಸಿನಲ್ಲಿ ವಿಜ್ಞಾನ–ತಂತ್ರಜ್ಞಾನ ಕುತೂಹಲ ಮೂಡಿಸುವುದು, ಭಾರತವು ರಕ್ಷಣಾ ಕ್ಷೇತ್ರದಲ್ಲಿ ಸಾಧಿಸಿರುವ ತಾಂತ್ರಿಕ ಶಕ್ತಿ ಮತ್ತು ಸ್ವಾವಲಂಬನೆ ಪರಿಚಯಿಸುವುದು ಹಾಗೂ ವಿಜ್ಞಾನ ಮತ್ತು ಇಂಜಿನಿಯರಿಂಗ್ ವೃತ್ತಿಗೆ ವಿದ್ಯಾರ್ಥಿಗಳನ್ನು ಪ್ರೇರೇಪಿಸುವುದು, ವಿದ್ಯಾರ್ಥಿಗಳಲ್ಲಿ ಬಾಹ್ಯಾಕಾಶದ ಬಗ್ಗೆ ಕುತೂಹಲ ಬೆಳೆಸುವುದು, ಭಾರತವು ಬಾಹ್ಯಾಕಾಶ ಕ್ಷೇತ್ರದಲ್ಲಿ ಸಾಧಿಸಿದ ಹೆಜ್ಜೆಗುರುತುಗಳನ್ನು ಪರಿಚಯಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಎಂದರು.

# ಮಕ್ಕಳ ಹಕ್ಕು ಕಾವಲು ಸಮಿತಿ ಸಮರ್ಥವಾಗಿ ಕಾರ್ಯ ನಿರ್ವಹಿಸಲಿ : ಕೀರ್ತನಾ

**ಚಿಕ್ಕಮಗಳೂರು, ಆ.18:** 'ಭದ್ರ ಬಾಲ್ಯ' ಯೋಜನೆಯಡಿ ಪ್ರತೀ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಹಕ್ಕು ಕಾವಲು ಸಮಿತಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದರೆ ಮಾತ್ರ ಮಕ್ಕಳ ಮೇಲಿನ ದೌರ್ಜನ್ಯಗಳಿಗೆ ಕಡಿವಾಣ ಬೀಳಲಿದೆ ಎಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಬೆಂಗಳೂರಿನ ಕೆ.ಹೆಚ್.ಪಿ.ಟಿ. ಸಂಯುಕ್ತಾಶ್ರಯದಲ್ಲಿ ಇಂದು ನಗರದ ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಭದ್ರ ಬಾಲ್ಯದ ಪ್ರಧಾನ ಆಶಯಗಳಲ್ಲಿ ಒಂದಾದ ಗ್ರಾಮ ಪಂಚಾಯಿತಿ ಮಟ್ಟದ ಕಾವಲು ಸಮಿತಿ ಸದಸ್ಯರಿಗೆ ಆಯೋಜಿಸಿದ್ದ ತರಬೇತಿ



ಕಾರ್ಯಾಗಾರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

15 ಮಂದಿಯ ಮಹಿಳಾ ಮತ್ತು ಮಕ್ಕಳ ಹಕ್ಕು ಕಾವಲು ಸಮಿತಿಗೆ ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ನಿರ್ವಹಿಸುವ ಸಾಮರ್ಥ್ಯ ಮತ್ತು ಅಧಿಕಾರ ಇದೆ. ಈ ಸಮಿತಿಗೆ ಮಗುವಿನ ಅಪೌಷ್ಟಿಕತೆ, ಹಸಿವಿನ ಸಮಸ್ಯೆ, ಲೈಂಗಿಕ ಶೋಷಣೆ, ಕೌಟುಂಬಿಕ ಹಿಂಸೆ, ಶಾಲೆಗೆ ಹೋಗದೆ ಇರುವುದು ಇತ್ಯಾದಿ ಸಮಸ್ಯೆಗಳನ್ನು ನಿರ್ವಹಿಸುವ ಸಾಮರ್ಥ್ಯದ ಜೊತೆಗೆ ಅಧಿಕಾರವೂ ಇದೆ. ಈ ಸಮಿತಿಯಲ್ಲಿ ಪೊಲೀಸ್ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತೆಯರು, ಮುಖ್ಯಶಿಕ್ಷಕರು, ಸ್ವಸಹಾಯ ಸಂಘದ ಅಧ್ಯಕ್ಷರು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ. ಒಂದು ವೇಳೆ ಆ ಗ್ರಾ.ಪಂ. ಅಧ್ಯಕ್ಷರು ಮಹಿಳೆಯಾಗಿದ್ದರೆ ಅವರೇ ಈ ಸಮಿತಿಯ ಅಧ್ಯಕ್ಷರೂ ಆಗಿರುತ್ತಾರೆ ಎಂದು ತಿಳಿಸಿದರು. ಬಾಲ್ಯವಿವಾಹದಂತಹ ಸಂದರ್ಭದಲ್ಲಿ ಈ ಸಮಿತಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ತಿಳಿಸಿದ ಅವರು, ಇಂತಹ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಅಥವಾ ಮೇಲ್ವಿಚಾರಕರನ್ನು ಹೊಣೆ ಮಾಡಲಾಗುತ್ತಿದೆ. ಬಾಲ್ಯವಿವಾಹ ನಡೆಯುತ್ತಿರುವ ವೇಳೆ ಈ ಬಗ್ಗೆ ದೂರು ನೀಡಬೇಕಾಗುತ್ತದೆ. ಒಂದು ವೇಳೆ ಬಾಲ್ಯ ವಿವಾಹ ನಡೆಸಿದ ಕುಟುಂಬದವರು ಪ್ರಭಾವಿಗಳಾಗಿದ್ದರೆ, ದೂರು ನೀಡಿದ ಕಾರಣಕ್ಕೆ ಊರಿನಿಂದ ಹೊರ ಹಾಕುವುದು, ಬೆದರಿಕೆ ಹಾಕುವಂತಹ ಸಂದರ್ಭಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸಮಿತಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿದರೆ ಈ ಸಮಸ್ಯೆ ಉದ್ಭವಿಸುವುದಿಲ್ಲ ಎಂದು ತಿಳಿಸಿದರು. ಬೆಳೆಯುವ ಮಗುವಿಗೆ ಸುರಕ್ಷಿತ ವಾತಾವರಣ ಕಲ್ಪಿಸಿ ಕೊಡಬೇಕು ಎನ್ನುವುದು 'ಭದ್ರ ಬಾಲ್ಯ' ಯೋಜನೆಯ ಮುಖ್ಯ ಉದ್ದೇಶ. ನಮ್ಮ ಜಿಲ್ಲೆಯಲ್ಲಿ ಪೋಕ್ಸೋ, ಬಾಲ ಗರ್ಭಿಣಿ, ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚುತ್ತಲೇ ಹೋಗುತ್ತಿವೆ. ಇದು ಇಡೀ ಕುಟುಂಬದ ಪ್ರಶ್ನೆಯಾಗಿದೆ. ಚಿಕ್ಕ ವಯಸ್ಸಿನಲ್ಲಿ ಹೆಣ್ಣು ಮಕ್ಕಳು ಗರ್ಭಿಣಿಯಾದಲ್ಲಿ, ಮಾನಸಿಕವಾಗಿ, ದೈಹಿಕವಾಗಿ ಸಾಮರ್ಥ್ಯವಿಲ್ಲದಿರುವ ಸಂದರ್ಭದಲ್ಲಿ ಗರ್ಭಿಣಿಯಾಗಿ ತಾಯ್ತನಕ್ಕೆ ಒಳಗಾಗುವುದರಿಂದ ಆರೀತಿಹುಟ್ಟಿದಮಗುವೂಸಮರ್ಥವಾಗಿರುವುದಿಲ್ಲ. ಬಾಲ್ಯ ವಿವಾಹವಾದ ಬಗ್ಗೆ ಪ್ರಕರಣ ದಾಖಲಿಸುವುದರಿಂದ ಹುಡುಗನ ಕುಟುಂಬದ ಕೆಂಗಣ್ಣಿಗೆ ಗುರಿಯಾಗಿ ನಿನ್ನನ್ನು ಮದುವೆಯಾದ ಕಾರಣದಿಂದಾಗಿ ಮನೆ ಮಗ ಜೈಲು ಸೇರಬೇಕಾಯಿತು ಎನ್ನುವ ನಿಂದನೆಗೂ ಒಳಗಾಗಬೇಕಾಗುತ್ತದೆ. ಹೀಗಾದಾಗ ಆಗತಾನೇ ಹುಟ್ಟಿದ ಮಗುವಿನ ಗತಿಯೇನು? ಈ ಹಿನ್ನೆಲೆಯಲ್ಲಿ ಹೆಣ್ಣು ಮಕ್ಕಳು ಅಕಾಲಿಕ ಗರ್ಭಧಾರಣೆಗೆ ಒಳಗಾಗುವಂತಹ ಪರಿಸ್ಥಿತಿ ನಿರ್ಮಾಣವಾಗದಂತೆ, ಶೋಷಣೆಗೆ ಒಳಗಾಗದಂತೆ ಮುಂಜಾಗ್ರತೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ವೃಷಭ ರಾಶಿ

ಯಶಸ್ಸು ಹತ್ತಿರವಿರುವಂತೆ ತೋರಿದರೂ ಸಹ ಶಕ್ತಿ ಕುಂಠಿತವಾಗುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ಮಿಥುನ ರಾಶಿ

ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

### ಕರ್ಕ ರಾಶಿ

ಅನಿರೀಕ್ಷಿತ ಪ್ರಯಾಣದಿಂದ ಸುಸ್ತಾಗಬಹುದು ಹಾಗೂ ಇದು ನಿಮ್ಮನ್ನು ಕರಿಕಿರಿಗೊಳ್ಳುವಂತೆ ಮಾಡಬಹುದು. ಸ್ನಾಯುಗಳಿಗೆ ಆರಾಮ ನೀಡಲು ನಿಮ್ಮ ದೇಹವನ್ನು ತೈಲದಿಂದ ಮಸಾಜ್ ಮಾಡಿ ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ 'ಯೋಜನೆಗಳಲ್ಲಿ ಹೂಡಿಕೆ ಮಾಡಿ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೋಲೇಟ್‌ನ ರುಚಿ ಸವಿಯುತ್ತೀರಿ.

### ಸಿಂಹ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು- ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಕೌಟುಂಬಿಕ ಕಾರ್ಯಗಳು ಮತ್ತು ಪ್ರಮುಖ ಸಮಾರಂಭಗಳಿಗೆ ಪವಿತ್ರವಾದ ದಿನ. ಪ್ರೀತಿಪಾತ್ರರು ಪ್ರಣಯದ ಮೂಡ್‌ನಲ್ಲಿರುತ್ತಾರೆ. ಇಂದು ನಿಮ್ಮ ಮನಸ್ಸಿನಲ್ಲಿ ಉದ್ಭವವಾಗುವ ಹೊಸ ಹಣಗಳಿಕೆಯು ವಿಚಾರಗಳ ಲಾಭ ತೆಗೆದುಕೊಳ್ಳಿ.

### ಕನ್ಯಾ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ - ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ.

### ವೃಶ್ಚಿಕ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ - ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

### ಧನು ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ. ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಮಕರ ರಾಶಿ

ಯಾರಾದರೂ ನಿಮಗೆ ಅಸಮಾಧಾನವುಂಟುಮಾಡಬಹುದ ಾದರೂ ಈ ಕಿರಿಕಿರಿಗಳು ನಿಮ್ಮನ್ನು ಆವರಿಸಲು ಬಿಡಬೇಡಿ. ಈ ಅನಾವಶ್ಯಕವಾದ ಚಿಂತೆಗಳು ಮತ್ತು ಉದ್ವೇಗಗಳು ದೇಹದ ಮೇಲೆ ಖಿನ್ನತೆಯ ಪರಿಣಾವ ಬೀರಬಹುದು ಮತ್ತು ಚರ್ಮದ ಸಮಸ್ಯೆ ಉಂಟುಮಾಡಬಹುದು. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.

### ಕುಂಭ ರಾಶಿ

ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

### ಮೀನ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

# ಸಂವಿಧಾನವನ್ನು ಕಾಪಾಡುವ ಮಹಾಯಾನ ಮಾಡುವುದಕ್ಕಾಗಿ ಸಂವಿಧಾನ ಸಂರಕ್ಷಣಾ ಪಡೆ ಕತ್ತಲೆಗೆರೆ ಡಿ.ತಿಪ್ಪಣ್ಣ

**ದಾವಣಗೆರೆ:** ನಗರದ ಪ್ರವಾಸಿ ಮಂದಿರದಲ್ಲಿ ಸಂವಿಧಾನ ಸಂರಕ್ಷಕರ ಪಡೆಯ ಸದಸ್ಯರು ಸಭೆ ಸೇರಿ ಚರ್ಚೆ ನಡೆಸಿ ಸ್ವಾತಂತ್ರೋತ್ಯವ ದಿನಾಚರಣೆಯ ಆಚರಿಸಲಾಯಿತು.

ಈ ಸಭೆಯಲ್ಲಿ ಕತ್ತಲೆಗೆರೆ ಡಿ. ತಿಪ್ಪಣ್ಣ ಮಾತನಾಡಿದ ಅವರು

ಆಳುವವರನ್ನು ಪ್ರಶ್ನಿಸುವ, ಜನಹಿತವನ್ನು ಮತ್ತು ಸಂವಿಧಾನವನ್ನು ಕಾಪಾಡುವ ಮಹಾಯಾನ ಮಾಡುವುದಕ್ಕಾಗಿ ಸಂವಿಧಾನ ಸಂರಕ್ಷಣಾ ಪಡೆ ಸಂಘಟಿಸುತ್ತಿದ್ದೆ ಎಂದು ಹೇಳಿದರು.

ಸ್ವಾತಂತ್ರ್ಯ ಸಂಗ್ರಾಮದ ಬಗ್ಗೆ , ದೇಶದ ಈಗಿನ ಪರಿಸ್ಥಿತಿಗಳು ಮತ್ತು ಸ್ವಾತಂತ್ರ್ಯದ ಮೌಲ್ಯಗಳ ಬಗ್ಗೆ ಸುಧೀರ್ಘವಾದ ಚರ್ಚೆ ನಡೆಸಿದರು . ಅಲ್ಲದೆ ಸಂವಿಧಾನ ಸಂರಕ್ಷಕರ ಪಡೆಯನ್ನ ಜಿಲ್ಲೆಯಾದ್ಯಂತ ತಾಲೂಕು ಮತ್ತು ಗ್ರಾಮ ಮಟ್ಟಗಳಲ್ಲಿ ರಚನೆ ಮಾಡುವ ಸಂಘಟನೆ ಮಾಡುವ ಬಗ್ಗೆ ಚರ್ಚಿಸಲಾಯಿತು .

ನಿವೃತ್ತ ವರಿಷ್ಠಾಧಿಕಾರಿ ಗಳಾದ ರವಿ ನಾರಾಯಣ ,ಮಾತನಾಡಿ ಹೊಸಸಂದರ್ಭ



ಹೊಸದಿಟ್ಟ ಹೆಜ್ಜೆಯನ್ನು ನಾಗರೀಕರಾದ ನಮ್ಮೆಲ್ಲರಿಂದ ಅಪೇಕ್ಷಿಸುತ್ತಿದೆ. ಈ ದೇಶವನ್ನು ಈ ಬಲಾಢ್ಯ ಪಕ್ಷಗಳು ರಕ್ಷಿಸುತ್ತವೆ ಎಂದು ಕಾಯುತ್ತಾ ಕೂರಲು ಸಾಧ್ಯವಿಲ್ಲ. ನಾಗರೀಕರಾದ ನಾವೇ ಒಂದು ಪ್ರಬಲ ಸಾಮಾಜಿಕ ಶಕ್ತಿಯಾಗಿ ರೂಪಗೊಳ್ಳಬೇಕಿದೆ. ಸಾಮಾಜಿಕ ಸ್ವಾಸ್ಥವನ್ನು ಕಾಪಾಡಿಕೊಳ್ಳಬಲ್ಲ, ಆಳುವವರನ್ನು ಪ್ರಶ್ನಿಸಬಲ್ಲ ಅಳ್ವಿಕೆಯನ್ನು ಬದಲಿಸಬಲ್ಲ ನಾಗರೀಕ ಶಕ್ತಿಯಾಗಿ ತಳಮಟ್ಟದಿಂದ ದೇಶಮಟ್ಟದ ತನಕ ನಮ್ಮನ್ನು ನಾವು ಕಟ್ಟಿಕೊಳ್ಳಬೇಕಿದೆ.ಎಂದು ಹೇಳಿದರು.

ಹಿರಿಯವಕೀಲರಾದ ಅನಿಸ್ ಪಾಷಾ,ಮಾತನಾಡಿ 'ಯಾವ ರಾಜಕೀಯ ಪಕ್ಷವೂ ಸಂವಿಧಾನ ಉಳಿಸಿಕೊಳ್ಳುವ

ಆಸಕ್ತಿ ತೋರಿಲ್ಲ. ಸಂವಿಧಾನ ರಕ್ಷಣೆ ಮಾಡಿಕೊಳ್ಳುವಹೊಣೆಗಾರಿಕೆ ದೇಶದ ಪ್ರತಿಯೊಬ್ಬ ಪ್ರಜ್ಞಾವಂತ ನಾಗರಿಕನ

ಮೇಲಿದೆ. ಸಂವಿಧಾನ ಉಳಿದರೆ ದೇಶ ಹಾಗೂ ಜನರುಉಳಿಯುತ್ತಾರೆ' ಎಂದರು.ಸಂವಿಧಾನದ ಆಶಯ ಉಳಿಸಿಕೊಳ್ಳುವುದು ಪ್ರತಿಯೊಬ್ಬರಕರ್ತವ್ಯ. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಕನಸಿಭಾರತವನ್ನು ರಕ್ಷಿಸಿಕೊಳ್ಳುವ ತುರ್ತು ಎದುರಾಗಿದೆ. ಹೀಗಾಗಿ,ಸಂವಿಧಾನ ಸಂರಕ್ಷಣಾ ಪಡೆ ಕಟ್ಟುವ ಪ್ರಯತ್ನ ಮಾಡಬೇಕಾಗಿದೆ ಎಂದರು ಅಂಜುಮನ್ ಸಂಸ್ಥೆಯ ಅಧ್ಯಕ್ಷರಾದ ದಾದು ಸೇಟ್, ಚಿತ್ರದುರ್ಗದ ಯಾದವ್ ರೆಡ್ಡಿ, ಮಲ್ಲಿಕಾರ್ಜುನಪ್ಪ, ಮರುಡಪ್ಪ, ಫೈರೋಜ್, ಲೋಕಪ್ಪ, ಅಂಜಿನಪ್ಪ, ಝಬಿವುಲ್ಲಾ, ಇಮ್ರಾನ್ ಸೇರಿದಂತೆ ಮತ್ತಿತರರು ಹಾಜರಿದ್ದರು

# ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಕೃಷ್ಣ ವೇಷ ಧರಿಸಿದ ಮಕ್ಕಳು



**ಚನ್ನಗಿರಿ :** ಸತ್ಯ ಮತ್ತು ಧರ್ಮದ ಉಳಿವಿಗಾಗಿ ಶ್ರೀ ಕೃಷ್ಣನು ಧರ್ಮದ ರಕ್ಷಕನಾಗಿ ಕಾರ್ಯ ನಿರ್ವಹಿಸಿದ್ದು ನಮಗೆ ಮಾರ್ಗದರ್ಶಕರಾಗಿದ್ದ ಶ್ರೀ ಕೃಷ್ಣ ಜನ್ಮಾಷ್ಟಮಿಯಂದು ಸನಾತನ ಹಿಂದೂಗಳ ಪವಿತ್ರ ಹಬ್ಬವಾಗಿದೆ ಎಂದು ಬಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಜಿ.ಪಿ. ರವಿಕುಮಾರ್ ಹೇಲಿದರು.

ಶನಿವಾರ ಸಂಜೆ ಪಟ್ಟಣದ ಬಾವಸಾರ ಕ್ಷತ್ರೀಯ ಮಹಿಳಾ ಮಂಡಳಿಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಶ್ರೀ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಭಗವಾನ್ ಶ್ರೀ ಕೃಷ್ಣ ಎಲ್ಲರನ್ನೂ ಆಕರ್ಷಿಸುವ ವಿಶೇಷ ಗುಣವನ್ನು ಹೊಂದಿದ್ದು ಅವತಾರಿಯಾಗಿದ್ದು ಈ ದಿವಸದ ಕೃಷ್ಣನ ಉಪಾಸನೆಯ ಆಚರಣೆಯಿಂದ ಎಲ್ಲರಿಗೂ ಪುಣ್ಯ ಲಭಿಸುತ್ತದೆ. ಮಹಿಳಾ ಮಂಡಳಿಯಿಂದ ಕಳೆದ 10 ವರ್ಷಗಳಿಂದ ಈ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮವನ್ನು ನಿರಂತರವಾಗಿ ಆಚರಣೆ ಮಾಡಿಕೊಂಡು ಬರುತ್ತಿದ್ದು ಈ ಬಾರಿಯೂ ಆಚರಣೆ ಮಾಡಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ವಿಶೇಷವಾಗಿ ಸಮಾಜದ ಮಹಿಳೆಯರು ತಮ್ಮ ಮಕ್ಕಳಿಗೆ ಕೃಷ್ಣ ಮತ್ತು ರಾಧೆಯರ ವೇಷಭೂಷಣಗಳನ್ನು ತೊಡಿಸಿ ಕರೆದುಕೊಂಡು ಬರುವ ಮೂಲಕ ಮಕ್ಕಳಿಗೆ ಒಂದು ವೇದಿಕೆಯನ್ನು ಸಹ ಕಲ್ಪಿಸಿಕೊಡಲಾಗಿದೆ ಎಂದರು. ಸಮಾಜದ ವತಿಯಿಂದ ಪಾಂಡುರಂಗ ವಿಠ್ಠಲ ದೇಗುಲವನ್ನು ನಿರ್ಮಾಣ ಮಾಡಲಾಗುತ್ತಿದ್ದು ಶೀಘ್ರವೇ ಲೋಕಾರ್ಪಣೆ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ಬಾವಸಾರ ಕ್ಷತ್ರೀಯ ಸಮಾಜದ ಮಹಿಳಾ ಘಟಕದ ಅಧ್ಯಕ್ಷೆ ಗೀತಾ, ಮಹಿಳಾ ಪದಾಧಿಕಾರಿಗಳು ಹಾಜರಿದ್ದರು.ಮಕ್ಕಳು ಕೃಷ್ಣ ಮತ್ತು ರಾಧೆಯರ ವೇಷಭೂಷಣಗಳನ್ನು ತೊಟ್ಟು ವೇಧಿಕೆ ಮೇಲೆ ನಡೆದರು. ಸಮಾಜದ ವತಿಯಿಂದ ವೇಷಭೂಷಣಗಳನ್ನು ತೊಟ್ಟ ಮಕ್ಕಳಿಗೆ ಪಾರಿತೋಷಕಗಳನ್ನು ವಿತರಿಸಲಾಯಿತು.

# ಸೆ.1ಕ್ಕೆ ರೈತರ ಬೃಹತ್ ಸಮಾವೇಶ

**ಹೊನ್ನಾಳಿ :** ಸರ್ಕಾರದ ತಪ್ಪು ಒಪ್ಪುಗಳನ್ನು ಎತ್ತಿ ಹಿಡಿದು ಜನತೆಯ ಮುಂದಿಡುವ ಕೆಲಸವನ್ನು ಪ್ರತಿಪಕ್ಷ ಮಾಡಬೇಕು. ಆ ಕೆಲಸವನ್ನು ವಿರೋಧ ಪಕ್ಷದವನಾಗಿ ನಾನು ಮಾಡುತ್ತಿದ್ದೇನೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಶನಿವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು. ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕ ಡಿ.ಜಿ. ಶಾಂತನಗೌಡ ಅಧಿಕಾರಕ್ಕೆ ಬಂದು ಎರಡು ವರ್ಷ ಕಳೆದಿದೆ. ಇದುವರೆಗೆ ನಾನು ಕಾಂಗ್ರೆಸ್ ಪಕ್ಷದ ಆಡಳಿತದ ವೈಖರಿ ಬಗ್ಗೆ ಟೀಕಿಸಿದ್ದೇನೆಯೇ ಹೊರತು ಸ್ಥಳೀಯ ಶಾಸಕರ ವಿರುದ್ಧ ಮಾತನಾಡಿಲ್ಲ. ಆದರೆ ಅವರು ನನ್ನ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದರು.

ಪರಿಸ್ಥಿತಿ ಭದ್ರಾ ಜಲಾಶಯ ನಾಲಾ ನೀರು ಹರಿಸುವ, ಯೂರಿಯಾ ಗೊಬ್ಬರದ ವಾಸ್ತವಿಕ ಹಾಗೂ ಹೊನ್ನಾಳಿ-ನ್ಯಾಮತಿ ತಾಲೂಕುಗಳ ಅಭಿವೃದ್ಧಿ ಶೂನ್ಯ ಆಡಳಿತ ಕುರಿತು ರೈತ ಒಕ್ಕೂಟದ ವತಿಯಿಂದ ಸೆ.1ರ ಸೋಮವಾರ ತಾಲೂಕಿನ ಕುಂದೂರು ಗ್ರಾಮದಲ್ಲಿ ದಾವಣಗೆರೆ ಜಿಲ್ಲೆಯ ವಿವಿಧ ತಾಲೂಕುಗಳ ರೈತರ ಬೃಹತ್ ಸಮಾವೇಶ ನಡೆಸಲಾಗುವುದು.

ಶಾಸಕರ ಆರೋಪಗಳಿಗೆ ಉತ್ತರ ನೀಡುತ್ತೇನೆ ಎಂದರು. ಕ್ಷೇತ್ರದ ಶಾಸಕರು 367.64 ಕೋಟಿ ರೂ. ಅನುದಾನದಲ್ಲಿ ತಾಲೂಕಿನ ಅಭಿವೃದ್ಧಿ ಮಾಡಿಸಿರುವುದಾಗಿ ಹೇಳುತ್ತಿದ್ದಾರೆ. ಈ ಬಗ್ಗೆ ಅವರು ದಾಖಲೆ ಸಹಿತ ಸಾಬೀತುಪಡಿಸಲಿ ಎಂದು ಹೇಳಿದರು.ನನ್ನ ಅಧಿಕಾರಾವಧಿಯಲ್ಲಿ ಅಂದಿನ ಇಂಧನ ಸಚಿವರಾಗಿದ್ದ ಸುನಿಲ್ ಕುಮಾರ್ ಅವರಿಗೆ ಮನವಿ ಮಾಡಿ ವಿದ್ಯುತ್ ಅಕ್ರಮ- ಸಕ್ರಮಕ್ಕೆ ಹೊನ್ನಾಳಿಗೆ 25.70 ಕೋಟಿ ರೂ. ಹಾಗೂ ನ್ಯಾಮತಿಗೆ 23.79 ಕೋಟಿ ರೂ. ಅನುದಾನವನ್ನು 202200 ಮಂಜೂರು ಮಾಡಿಸಿದ್ದೆ. ಈ



**. ಸೆ.1ರ ಸೋಮವಾರ ತಾಲೂಕಿನ ಕುಂದೂರು ಗ್ರಾಮದಲ್ಲಿ ದಾವಣಗೆರೆ ಜಿಲ್ಲೆಯ ವಿವಿಧ ತಾಲೂಕುಗಳ ರೈತರ ಬೃಹತ್ ಸಮಾವೇಶ ನಡೆಸಲಾಗುವುದು**

ವಿಷಯವಾಗಿ ಬಹಿರಂಗ ಚರ್ಚೆಗೆ ಸಿದ್ಧ ಎಂದರು. ಹೊನ್ನಾಳಿ, ನ್ಯಾಮತಿ ತಾಲೂಕುಗಳಲ್ಲಿ ಇಂದಿಗೂ ಯೂರಿಯಾ ಗೊಬ್ಬರದ ಅಭಾವವಿದೆ ಹಾಗೂ ಹೆಚ್ಚುವರಿ ದರಕ್ಕೆ ಗೊಬ್ಬರ ಮಾರಾಟ ವಾಗುತ್ತಿದೆ. ಆದರೆ ಶಾಸಕರು ಗೊಬ್ಬರದ ಕೊರತೆ ಇಲ್ಲ ಎಂದು ಹೇಳುತ್ತಿದ್ದಾರೆ ಎಂದರು.ಸುದ್ದಿಗೋಷ್ಠಿಯಲ್ಲಿ ಬಿಜೆಪಿ ತಾಲೂಕಾಧ್ಯಕ್ಷ ಅರಕೆರೆ ನಾಗರಾಜ್, ಮಾಜಿ ಅಧ್ಯಕ್ಷ ಜೆ.ಕೆ. ಸುರೇಶ್ ಮತ್ತು ದೊಡ್ಡರಿ ಡಿ.ಜಿ. ರಾಜಪ್ಪ, ಮುಖಂಡರಾದ ಮಾರುತಿ ನಾಯ್ಕ, ನೆಲಹೊನ್ನೆ ಮಂಜುನಾಥ್ ಇದ್ದರು.


# ಮಡಿವಾಳ ಸಮುದಾಯವನ್ನು ಪರಿಶಿಷ್ಠರ ಪಟ್ಟಿಗೆ ಸೇರಿಸಲು ಹೇಳುವೆ

**ದಾವಣಗೆರೆ:** ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದ ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸಲು ನಾನು ಕೂಡ ಸರ್ಕಾರಕ್ಕೆ, ಮುಖ್ಯಮಂತ್ರಿಗಳಿಗೆ ಹೇಳುವೆ ಎಂದು ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಚಿತ್ರದುರ್ಗದ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಪೀಠಾಧಿಪತಿ ಡಾ.ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು, ವಿನೋಬಾನಗರದ ಶ್ರೀ ಜಡೆಸಿದ್ಧ ಶಿವಯೋಗಿಶ್ವರ ಮಠದ ಶ್ರೀಶಿವಾನಂದ ಸ್ವಾಮೀಜಿಗಳ ಸಾನಿಧ್ಯದಲ್ಲಿ

ನಗರದ ವಿನೋಬನಗರದಲ್ಲಿರುವ ಮಾಚಿದೇವ ಸಮುದಾಯ ಭವನದಲ್ಲಿ ದಾವಣಗೆರೆ ಶ್ರೀಮಡಿವಾಳ ಮಾಚಿದೇವ ಸಂಘ ಮತ್ತು ಮಹಿಳಾ ಸಂಘ ಹಾಗೂ ಮಡಿಕಟ್ಟೆ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಶ್ರೀ ಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಮಗೆ ಏನೇ ಸಿಗಲಿ ಅದನ್ನು ಹಂಚಿ ತಿನ್ನಬೇಕು ಎನ್ನಬೇಕೆ ವಿನಹ: ಎಲ್ಲವೂ ನಮಗೆ ಇರಲಿ ಎನ್ನುವ ಮನೋಭಾವ




ಇರಬಾರದು. ಆಗ ಮಾತ್ರ ನಾವು ಮಾನವರಾಗುತ್ತೇವೆ. ಡಾ.ಬಿ.ಆರ್.ಅಂಬೇಡ್ಕರ್ ಅವರ ಆಶಯದಂತೆ ಸಾಮಾಜಿಕವಾಗಿ ತೀರಾ ಹಿಂದುಳಿದ ಸಮಾಜಗಳಿಗೆ ಸಮಾನತೆ ದೊರೆಯಬೇಕೆನ್ನುವುದು. ಪಾಲಿಕೆಯ ಮಾಜಿ ಸದಸ್ಯ ಎ.ನಾಗರಾಜ್ ಮಾತನಾಡಿ, ನಾವುಗಳು ಹಿಂದುಳಿದಿದ್ದೇವೆ ಎನ್ನುವ ಕೀಳರಿಮೆ ಇಟ್ಟುಕೊಂಡು ಹಿಂದೆ ಇರಬಾರದು. ನಮ್ಮಲ್ಲಿನ ಸಂಕೀರ್ಣತೆಯನ್ನು ಬಿಟ್ಟು ಮುಂದೆ ಬರಬೇಕು. ಉತ್ತಮ ಶಿಕ್ಷಣ ಪಡೆದರೆ ಉತ್ತಮ ಹುದ್ದೆಗಳನ್ನು ಪಡೆದು ಸ್ಥಿತಿವಂತರಾಗುತ್ತೇವೆ. ಇದರೊಂದಿಗೆ ಆಧುನಿಕತೆ ಜೊತೆ ಸವಲತ್ತುಗಳನ್ನು ಪಡೆದುಕೊಂಡು ಸಾಗಬೇಕಿದೆ ಎಂದರು.


ಸಂಘದ ಜಿಲ್ಲಾಧ್ಯಕ್ಷ ಎಂ ನಾಗೇಂದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಹರಿಹರ ನಗರಸಭೆಯ ಪೌರಾಯುಕ್ತ ನಾಗಣ್ಣ ಮನೋಹರ್ ಪರಿಟ್, ಆಹಾರ ನಿರೀಕ್ಷಕ ಟಿ.ಮಂಜುನಾಥ್, ಜೈನ್ ಇಂಜಿನಿಯರಿಂಗ್ ಕಾಲೇಜು ಸಹಾಯಕ ಪ್ರಾಧ್ಯಾಪಕ ಗಣೇಶ್ ಎನ್.ವೈ.ಪೂಜಾರಯ್ಯ, ಜಿಲ್ಲಾ ವರದಿಗಾರರು ಕೂಟದ ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ್, ಕಾರ್ಮಿಕ ಮುಖಂಡ ಆವರಗೆರೆ ಹೆಚ್.ಜಿ.ಉಮೇಶ್, ಆರ್.ಎನ್.ಧನಂಜಯ, ಎನ್.ಓಂಕಾರಪ್ಪ, ಪಿ.ಮಂಜುನಾಥ್, ರವಿಚಿಕ್ಕಣ್ಣ, ಡೈಮಂಡ್ ಮಂಜುನಾಥ್, ಅಂಜಿನಪ್ಪ ಪೂಜಾರ್, ಜಿ.ವಿಜಯ್‌ಕುಮಾರ್, ದುಗ್ಗಪ್ಪ, ಸುಭಾಶ್, ಡಾ.ಎನ್.ಪರುಶರಾಮ್, ಅಜೇಯ, ಬಾತಿ ಶಂಕರ್, ಮಂಜುನಾಥ್ ಕಕ್ಕರಗೊಳ್ಳ, ಬಸವರಾಜ್ ಪೂಜಾರ್, ಪ್ರಕಾಶ್ ಮಡಿಕಟ್ಟೆಯ ಹನುಮಂತಪ್ಪ, ಹರಿಹರದ ಭೀಮಣ್ಣ, ಬಸವರಾಜಯ್ಯ, ಮಲ್ಲಪ್ಪ, ರೇವಣ್ಣ, ಹುಲಿಕಟ್ಟೆ ರಾಮಚಂದ್ರಪ್ಪ ಇತರರು ಇದ್ದರು.

# ಸೌರ ವಿದ್ಯುತ್ ಬಳಸಿ ಪರಿಸರ ಸಂರಕ್ಷಿಸಿ: ಸುರೇಶ್ ಶಣೈ

**ಶಿವಮೊಗ್ಗ:** ನೈಸರ್ಗಿಕವಾಗಿ ದೊರೆಯುವ ಸೌರಶಕ್ತಿಯು ನವೀಕರಿಸಬಹುದಾದ ಸಂಪನ್ಮೂಲವಾಗಿದೆ. ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ವಿದ್ಯುತ್ ಉತ್ಪಾದನೆಗೆ ಕಲ್ಲಿದ್ದಲು ಬಳಕೆಯನ್ನು ನಿಯಂತ್ರಿಸಲು ಸೌರಶಕ್ತಿಯ ಉತ್ಪಾದನೆ ಹೆಚ್ಚಳವಾಗಬೇಕಿದೆ. ಸೌರ ವಿದ್ಯುತ್ ಬಳಸುವ ಮೂಲಕ ಪರಿಸರವನ್ನು ಸಂರಕ್ಷಿಸಬಹುದಾಗಿದೆ ಎಂದು ಟಾಟಾ ಪವರ್ ಸೋಲಾರ್‌ನ ಎಸ್.ಎಸ್. ಏಜೆನ್ಸಿಯ ವ್ಯವಸ್ಥಾಪಕ ನಿರ್ದೇಶಕ ಸುರೇಶ್ ಶಣೈ ಅವರು ತಿಳಿಸಿದರು.

ಕೇಂದ್ರ ಸರ್ಕಾರವು 2027ರ ಒಳಗೆ ಪ್ರಧಾನ ಮಂತ್ರಿ ಸೂರ್ಯಘರ್ ಸೋಲಾರ್ ರೂಫ್ ಟಾಪ್ ಸಬ್ಸಿಡಿ ಯೋಜನೆ ಅಡಿ ಒಂದು ಕೋಟಿ ಮನೆಗಳಿಗೆ ಸೋಲಾರ್ ರೂಫ್ ಟಾಪ್ ಅಳವಡಿಸುವ ಗುರಿ ಹೊಂದಿದ್ದು, ಗ್ರಾಹಕರಿಗೆ ಸಬ್ಸಿಡಿ ಸಹ ದೊರೆಯಲಿದೆ. ಗ್ರಾಹಕರು ನಿಗಧಿತ ಬ್ಯಾಂಕಿನ ಮೂಲಕ ಈ ಯೋಜನೆಯ ಪ್ರಯೋಜನ ಪಡೆಯಬಹುದೆಂದು ಹೇಳಿದರು.

ಸೂರ್ಯಘರ್ ಸೋಲಾರ್ ರೂಫ್



ಟಾಪ್ ಯೋಜನೆಯಿಂದ ಜಾಗತಿಕ ತಾಪಮಾನ ಕಡಿಮೆ ಮಾಡಬಹುದು. ಅಲ್ಲದೆ ಪ್ರತಿ ಮನೆಗೆ ಅಗತ್ಯ ಇರುವ ವಿದ್ಯುತ್ತನ್ನು ತಾವೇ ಉತ್ಪಾದಿಸಿಕೊಳ್ಳುವ ಮೂಲಕ ವಿದ್ಯುತ್ ಬಳಕೆಯಲ್ಲಿ ಸ್ವಾವಲಂಬಿಗಳಾಗಬಹುದೆಂದರು.

ಮಲೆನಾಡಿನಲ್ಲಿ 23 ವರ್ಷಗಳಿಂದ ಟಾಟಾ ಪವರ್ ಸೋಲಾರ್‌ನ ಮಾರಾಟ ಹಾಗೂ ಸೇವಾಕೇಂದ್ರ ಹೊಂದಿರುವ ಎಸ್‌ಎಸ್ ಏಜೆನ್ಸಿಯು ಪ್ರಧಾನಮಂತ್ರಿ ಸೂರ್ಯಘರ್ ಸೋಲಾರ ಸಬ್ಸಿಡಿ ಯೋಜನೆ ಅಡಿ ಸೋಲಾರ್ ಘಟಕಗಳನ್ನು ಗ್ರಾಹಕರಿಗೆ ತ್ವರಿತ ಗತಿಯಲ್ಲಿ ಅಳವಡಿಸುತ್ತಿದೆ ಎಂದರು.

ಎಸ್‌ಬಿಐ ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕ ಎಂ. ಗಂಗಾಧರಪ್ಪ, ಮನರೇಗಾ ಓಂಬಡ್ಸ್‌ಮನ್ ಪಿ.ಡಿ. ಗಣಪತಿ, 90 ಬಾರಿ ರಕ್ತದಾನ ಮಾಡಿರುವ ಛೇಂಬರ್ ಆಫ್ ಕಾಮರ್ಸ್‌ನ ಕಾರ್ಯದರ್ಶಿ ಎ.ಎಂ. ಸುರೇಶ್, ತರುಣೋದಯ ಸಂಸ್ಕೃತ ಸೇವಾ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಅ.ನಾ. ವಿಜಯೇಂದ್ರ ರಾವ್, ಭಾರತ ಸ್ಕೌಟ್ ಅಂಡ್ ಗೈಡ್ಸ್ ಮಲ್ನಾಡ್ ಓಪನ್ ಗ್ರೂಪ್‌ನ ಸ್ಥಾಪಕ ಸದಸ್ಯ ಹೆಚ್. ಪರಮೇಶ್ವರಪ್ಪ ಇವರನ್ನು ಸನ್ಮಾನಿಸಲಾಯಿತು. ಎಸ್‌ಎಸ್ ಏಜೆನ್ಸಿಯ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಆ.23 ರಂದು ಜಪ್ತಿ ವಾಹನಗಳ ಹರಾಜು

**ಚಿತ್ರದುರ್ಗ:** ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆ ವತಿಯಿಂದ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ವಾರಸುದಾರರು ಇಲ್ಲದ 11 ಮೋಟಾರು ಬೈಕುಗಳ ಹರಾಜಿಗೆ ಜೆ.ಎಂ.ಎಫ್.ಸಿ ಹಿರಿಯ ಸಿವಿಲ್ ನ್ಯಾಯಾಲಯ ಅನುಮತಿ ನೀಡಿದೆ. ಈ ಹಿನ್ನಲೆಯಲ್ಲಿ ಆಗಸ್ಟ್ 23 ರಂದು ಬೆಳಿಗ್ಗೆ 11 ಗಂಟೆಗೆ ಕೋಟೆ ಪೊಲೀಸ್ ಠಾಣೆ ಆವರಣದಲ್ಲಿ ಹರಾಜು ನಡೆಯಲಿದ್ದು, ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೋಟೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194-222933 ಹಾಗೂ ಮೊಬೈಲ್ ಸಂಖ್ಯೆ 9480803145 ಕರೆ ಮಾಡುವಂತೆ ಪ್ರಕಟಣೆ ತಿಳಿಸಿದೆ.

# ವೈಜ್ಞಾನಿಕ ಅಣಬೆ ಬೇಸಾಯ" ತರಬೇತಿ ಕಾರ್ಯಕ್ರಮ

**ಚಿತ್ರದುರ್ಗ:** ಹಿರಿಯೂರು ಬಬ್ಬೂರು ಫಾರಂನ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇದೇ ಆಗಸ್ಟ್ 21ರಂದು "ವೈಜ್ಞಾನಿಕ ಅಣಬೆ ಬೇಸಾಯ ಹಾಗೂ ಅಣಬೆಯ ಮೌಲ್ಯವರ್ಧಿತ ಉತ್ಪನ್ನಗಳ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ತರಬೇತಿಯಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ತರಬೇತಿ ಶುಲ್ಕ ಒಟ್ಟು ರೂ.250/-ಗಳನ್ನು ಪಾವತಿಸಿ ಇದೇ ಆಗಸ್ಟ್ 19ರೊಳಗೆ ದೂರವಾಣಿ ಮುಖಾಂತರ ಅಥವಾ ಖುದ್ದಾಗಿ ಡಾ.ಸರಸ್ವತಿ ಜೆ.ಎಂ.,(ಗೃಹ ವಿಜ್ಞಾನಿ), ಕೃಷಿ ವಿಜ್ಞಾನ ಕೇಂದ್ರ, ಬಬ್ಬೂರು ಫಾರಂ, ಹಿರಿಯೂರು, ಮೊಬೈಲ್ ಸಂಖ್ಯೆ9986647124 ಗೆ ಸಂಪರ್ಕಿಸಿ ತಮ್ಮ ಹೆಸರು ನೋಂದಾಯಿಸಬಹುದಾಗಿದೆ. ಮೊದಲು ನೋಂದಾಯಿಸಿದವರಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ನಿಧನ ಸುದ್ದಿಗಳು

### ಬಂಗೇರ ಬಸವರಾಜಪ್ಪ ನಿಧನ

**ಹೊನ್ನಾಳಿ:** ಪಟ್ಟಣದ ದುರ್ಗಿಗುಡಿ ನಿವಾಸಿ ಬಂಗೇರ ಬಸವರಾಜಪ್ಪ (63) ಶನಿವಾರ ರಾತ್ರಿ ನಿಧನರಾದರು. ಇವರಿಗೆ ಪತ್ನಿ ಹಾಗೂ ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಭಾನುವಾರ ನಡೆಯಿತು.

### ಸರೋಜಮ್ಮ ನಿಧನ

**ನ್ಯಾಮತಿ:** ಸಮೀಪದ ಸುರಹೊನ್ನೆ ಮೂಲದ ಸರೋಜಮ್ಮ (77) ಅನಾರೋಗ್ಯದಿಂದ ಭಾನುವಾರ ಶಿವಮೊಗ್ಗದಲ್ಲಿ ನಿಧನರಾದರು. ಇವರಿಗೆ ಇಬ್ಬರು ಪುತ್ರರು, ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಭಾನುವಾರ ನೆರವೇರಿತು.

# ಸಮಾಜವು ಸಂಘಟಿತರಾದರೆ ಮಾತ್ರ ಅಭಿವೃದ್ಧಿ ಸಾಧ್ಯ : ಸ್ವಾಮೀಜಿ



**ಚಿಕ್ಕಮಗಳೂರು:** ಮಡಿವಾಳ ಸಮಾಜವು ಎಲ್ಲಾ ಸಮಾಜಕ್ಕಿಂತ ಚಿಕ್ಕ ಜನಾಂಗವಾಗಿದೆ. ಸಮಾಜ ಬಾಂಧವರು ಒಂದುಗೂಡಿ ಸರ್ಕಾರದ ಯೋಜನೆಗಳನ್ನು ಪಡೆದುಕೊಂಡು ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಬೇಕು ಎಂದು ಚಿತ್ರದುರ್ಗದ ಮಹಾಸಂಸ್ಥಾನ ಮಠದ ಶ್ರೀ ಬಸವ ಮಾಚಿದೇವ ಮಹಾ ಸ್ವಾಮೀಜಿ ಹೇಳಿದರು.

ನಗರದ ಬಸವನಹಳ್ಳಿ ಸಮೀಪದ ಜಿಲ್ಲಾ ಮಡಿವಾಳ ಸಂಘದ ಭವನದಲ್ಲಿ ಏರ್ಪಡಿಸಿದ್ದ 'ಮನ ಮನೆಗೆ ಮಾಚಿದೇವ' ಶ್ರಾವಣ ಮಾಸದ ನಿಮಿತ್ಯ ವಿಶೇಷ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಆರ್ಶೀವಚನ ನೀಡಿದರು.

ಸಮಾಜ ಮತ್ತು ಸಮುದಾಯದ ಒಳಿತಿಗಾಗಿ ಮಾಚಿದೇವರ ಆದೇಶ ಮಾಡುತ್ತಾರೋ ಅಂತಹ ಕಾರ್ಯವನ್ನು ನಾವು ಪ್ರಾಮಾಣಿಕವಾಗಿ ಮಾಡುತ್ತೇವೆ. ಸಮುದಾಯದವರು ಸಂಘಟಿತರಾದರೆ ಮಾತ್ರ ಸಮಾಜವು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಮುನ್ನೆಲೆಗೆ ಬರಲು ಸಾಧ್ಯ ಎಂಬುದು ಅರಿತುಕೊಳ್ಳಬೇಕು ಎಂದರು.

ಮಡಿವಾಳ ಸಮಾಜದ ಮುಂದಿನ ಪೀಳಿಗೆ ಉಳಿಸಿ ಬೆಳೆಸಲು ಇಂದಿನಿಂದಲೇ ಜನಾಂಗದ ಮುಖಂಡರು ಪ್ರಜ್ಞಾವಂತರಾಗಬೇಕು. ರಾಜ್ಯದ ಪ್ರತಿ ಜಿಲ್ಲೆ ಹಾಗೂ ತಾಲ್ಲೂಕಿನ ಮಡಿವಾಳ ಸಂಘದ ಅರಿವನ್ನು ಮೂಡಿಸುವುದು ಜಿಲ್ಲಾ ಮುಖಂಡರುಗಳ ಕರ್ತವ್ಯವಾಗಿದ್ದು, ಆಗ ಮಾತ್ರ ಮಡಿವಾಳ ಜೀವನ ಉದ್ಧಾರವಾಗಲು ಸಾಧ್ಯ ಎಂದು ತಿಳಿಸಿದರು.

ರಾಜಕೀಯವಾಗಿ ಜನಾಂಗದ ಯಾವುದೇ ಮುಖಂಡರುಗಳು ಜನಪ್ರತಿನಿಧಿಗಳಾಗಿಲ್ಲ. ಆ ನಿಟ್ಟಿನಲ್ಲಿ ಜಿಲ್ಲಾವಾರು ಮುಖಂಡರುಗಳೇ ಒಟ್ಟಾಗಿ ಕೈಜೋಡಿಸಬೇಕು. ಪ್ರತಿ ಜಿಲ್ಲೆಗಳಲ್ಲಿ ಸರ್ಕಾರದ ಸೌಲಭ್ಯ ಹಾಗೂ ದಾನಿಗಳ ಸಹಕಾರದಲ್ಲಿ ಒಂದೊಂದು ಭವನವನ್ನು ನಿರ್ಮಿಸಿಕೊಂಡಲ್ಲಿ ಆರ್ಥಿಕ ಏಳಿಗೆ ಹೊಂದುವ ಜೊತೆಗೆ ಸಮಾಜವು ಅಭಿವೃದ್ಧಿ ಹೊಂದಲಿದೆ ಎಂದರು.

ಚಿಕ್ಕಮಗಳೂರಿನ ಭವ್ಯವಾದ ಸಮುದಾಯಭವನ ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿದೆ. ಈ ಕಟ್ಟಡದ ಅಭಿವೃದ್ಧಿಗೂ ಮಠದಿಂದ ಮುಖ್ಯಮಂತ್ರಿಗಳಿಗೆ ಅನುದಾನಕ್ಕೆ ಕೋರಿ ಪತ್ರವು ಬರೆಯಲಾಗಿದೆ ಎಂದ ಅವರು, ಮುಂದಿನ ಶ್ರಾವಣ ಮಾಸದ ಆರಂಭದೊಳಗೆ ಕಟ್ಟಡವನ್ನು ಸಂಪೂರ್ಣಗೊಳಿಸಿ ಉದ್ಘಾಟಿಸಲು ಜನಾಂಗವು ಮುಂದಾಗಬೇಕಿದೆ ಎಂದು ತಿಳಿಸಿದರು.

ಜಿಲ್ಲಾ ಮಡಿವಾಳ ಸಂಘದ ಅಧ್ಯಕ್ಷ ಲಕ್ಷ್ಮಣ್ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಸಮಾಜದವರು ನೆಲೆಸಿದ್ದಾರೆ. ಆರ್ಥಿಕವಾಗಿ ಹಿಂದುಳಿದಿರುವ ಸಮಾಜದ ಏಳಿಗೆಗೆ ಸರ್ವರು ಒಗಟ್ಟಿನಿಂದ ಕೈಜೋಡಿಸಿದಾಗ ಮಾತ್ರ ಭವನದ ಕಟ್ಟಡವನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲು ಸಾಧ್ಯವಾಗಲಿದೆ ಎಂದರು.

ಈಗಾಗಲೇ ಸರ್ಕಾರದಿಂದ ಅನುದಾನವು ಹಂತ ಹಂತವಾಗಿ ಬಿಡುಗಡೆಗೊಂಡು ಶೇ.85ರಷ್ಟು ಕಟ್ಟಡ ಪೂರ್ಣಗೊಂಡಿದೆ. ಇನ್ನಷ್ಟು ಸಣ್ಣಪುಟ್ಟ ಕೆಲಸಗಳು ಬಾಕಿಯಿರುವ ಹಿನ್ನಲೆಯಲ್ಲಿ ಜನಾಂಗದ ಮುಖಂಡರು ಕಟ್ಟಡಕ್ಕೆ ಅವಶ್ಯವಿರುವ ವಸ್ತುಗಳನ್ನು ಖರೀದಿಸಿಕೊಟ್ಟಲ್ಲಿ ಸಹಾಯವಾಗಲಿದೆ ಎಂದರು.

ಕಾರ್ಯಕ್ರಮಕ್ಕೂ ಮುನ್ನ ಶ್ರೀ ಬಸವ ಮಾಚಿದೇವ ಮಹಾಸ್ವಾಮೀಜಿಯವರಿಗೆ ಭಕ್ತಾದಿಗಳು ಪಾದಪೂಜೆ ನೆರವೇರಿಸಿದರು. ಇದೇ ವೇಳೆ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ಯಲ್ಲಿ ಅತಿಹೆಚ್ಚು ಅಂಕ ಗಳಿಸಿದ ಸಮಾಜದ ಮುಖಂಡರುಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಪ್ರಸನ್ನ ದೇವನೂರು, ಕಾರ್ಯದರ್ಶಿ ರಾಮಚಂದ್ರ, ಸಮಾಜದ ಮುಖಂಡರಗಳಾದ ಷಡಕ್ಷರಿ, ಜಗದೀಶ್, ಸತೀಶ್, ಗುರುತಮೂರ್ತಿ, ನವೀನ್‌ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

## ಅತಿಥಿ ಉಪನ್ಯಾಸಕರ ನೇಮಕ; ಅರ್ಜಿ ಆಹ್ವಾನ

**ಬಳ್ಳಾರಿ :** ಸಂಡೂರು ತಾಲ್ಲೂಕಿನ ವಡ್ಡಿನಕಟ್ಟೆ ಗ್ರಾಮದ ಕಿತ್ತೂರುರಾಣಿ ಚೆನ್ನಮ್ಮ ಪದವಿಪೂರ್ವ ಕಾಲೇಜಿನಲ್ಲಿ ನೂತನವಾಗಿ ಆರಂಭಿಸಿರುವ ವಿಜ್ಞಾನ ವಿಭಾಗಕ್ಕೆ ಅತಿಥಿ ಉಪನ್ಯಾಸಕರನ್ನು ಗೌರವಧನ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಿತ್ತೂರುರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ಪದವಿಪೂರ್ವ ಕಾಲೇಜನ್ನಾಗಿ ಉನ್ನತೀಕರಿಸಲಾಗಿದ್ದು, ಪ್ರಸ್ತಕ ಶೈಕ್ಷಣಿಕ ಸಾಲಿನಲ್ಲಿ ವಿಜ್ಞಾನ ವಿಭಾಗ ಪ್ರಾರಂಭಿಸಲಾಗಿದೆ.

*ಹುದ್ದೆಗಳು:*

ಕನ್ನಡ ಉಪನ್ಯಾಸಕರು-01, ಆಂಗ್ಲ ಉಪನ್ಯಾಸಕರು-01, ಭೌತಶಾಸ್ತ್ರ ಉಪನ್ಯಾಸಕರು-01, ರಸಾಯನಶಾಸ್ತ್ರ-01, ಗಣಿತ-01, ಜೀವಶಾಸ್ತ್ರ-01.

ಅರ್ಹ ಅಭ್ಯರ್ಥಿಗಳು ಆಯಾ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಮತ್ತು ಬಿ.ಇಡಿ ಪೂರ್ಣಗೊಳಿಸಿರಬೇಕು. ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ರೂ.18,150/- ಗೌರವಧನ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಪ್ರಾಂಶುಪಾಲರು, ಕಿತ್ತೂರುರಾಣಿ ಚನ್ನಮ್ಮ ವಸತಿ ಶಾಲೆ (ಪ.ಪಂ)-485, ವಡ್ಡಿನಕಟ್ಟೆ, ಸಂಡೂರು (ತಾ), ಬಳ್ಳಾರಿ (ಜಿ) ಇಲ್ಲಿಗೆ ಆಗಸ್ಟ್ 20 ರೊಳಗಾಗಿ ಸಲ್ಲಿಸಬೇಕು.

# ರಸ್ತೆ ದುರಸ್ಥಿಗೆ ಆಗ್ರಹಿಸಿ ಬಿಜೆಪಿ-ಜೆಡಿಎಸ್ ಪ್ರತಿಭಟನೆಗೆ ನಿರ್ಧಾರ



**ಚಿಕ್ಕಮಗಳೂರು:** ಮಲೆನಾಡು ಭಾಗದಲ್ಲಿ ಕಳೆದ ಮೂರು ವರ್ಷಗಳಿಂದ ಅತೀ ಹೆಚ್ಚು ಮಳೆಯಾಗುತ್ತಿರುವ ಪರಿಣಾಮ ರಸ್ತೆಗಳು ಗುಂಡಿ ಗೊಟರುಗಳಿಂದ ಕೂಡಿದ್ದು, ವಾಹನ ಸವಾರಿಗೆ ತೊಂದರೆಯಾಗುತ್ತಿರುವ ಕಾರಣದಿಂದ ಕೂಡಲೇ ರಸ್ತೆ ದುರಸ್ತಿಪಡಿಸುವಂತೆ ಒತ್ತಾಯಿಸಿ ಆ.13 ರಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಜೋಳದಾಳ್ ವೃತ್ತದಲ್ಲಿ ಬೀದಿಗಿಳಿದು ರಸ್ತೆ ತಡೆ ನಡೆಸಲು ನಿರ್ಧರಿಸಿದ್ದಾರೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಹಾಗೂ ಪರಾಜಿತ ಅಭ್ಯರ್ಥಿ ದೀಪಕ್ ದೊಡ್ಡಯ್ಯ ಮಾತನಾಡಿ, ಚಿಕ್ಕಮಗಳೂರು-ಮಲ್ಲಂದೂರು ರಸ್ತೆ, ವಸ್ತಾರೆ-ಆಲ್ದೂರು-ಬಾಳೆಹೊನ್ನೂರು ರಸ್ತೆ, ಹಾಂದಿ-ಬಸ್ಕಲ್-ಗೆಂಡೇಹಳ್ಳಿ ರಸ್ತೆ ಮಾರ್ಗವಾಗಿ ಹೋಬಳಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಎಲ್ಲಾ ರಸ್ತೆಗಳು ಮೃತ್ಯುಗುಂಡಿಗಳಾಗಿ ಮಾರ್ಪಾಡಾಗಿವೆ ಎಂದು ಆರೋಪಿಸಿದರು.

ರಾಜ್ಯಸರ್ಕಾರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಪಂಚ ಗ್ಯಾರಂಟಿಗಳಿಗೆ ಬಳಸುತ್ತಿರುವ ಕಾರಣದಿಂದಾಗಿ ಅಧಿಕಾರಕ್ಕೆ ಬಂದ ಈವರೆಗೆ ಜನಪರವಾದ ಅಭಿವೃದ್ಧಿ ಕಾಮಗಾರಿಗಳನ್ನು ಸ್ಥಗಿತಗೊಳಿಸಿದೆ ಎಂದು ಟೀಕಿಸಿದರು.

ಕೃಷಿ ಮತ್ತು ತೋಟಗಾರಿಕೆ ಇಲಾಖೆ ವ್ಯಾಪ್ತಿಗೆ ಬರುವ ಅನುದಾನವನ್ನು ಕಡಿತಗೊಳಿಸಿರುವುದರಿಂದ ರೈತರು ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಅತಿವೃಷ್ಟಿ ಹಾನಿಯಿಂದಾಗಿ ಕಾಫಿ, ಕಾಳುಮೆಣಸು, ಅಡಿಕೆ, ಏಲಕ್ಕಿ ಮುಂತಾದ ಬೆಳೆಗಳು ಕೊಳೆರೋಗಕ್ಕೆ ತುತ್ತಾಗಿ ಹಾನಿಯಾಗಿದ್ದು, ಕೂಡಲೇ ಸೂಕ್ತ ಪರಿಹಾರ ನೀಡಬೇಕೆಂದು ಅಂದು ರಸ್ತೆ ತಡೆ ನಡೆಸುವ ಮೂಲಕ ಸಾವಿರಾರು ಕಾರ್ಯಕರ್ತರು ಸರ್ಕಾರದ ಗಮನ ಸೆಳೆಯಲಿದ್ದಾರೆ ಎಂದರು.

ಕಾಡುಪ್ರಾಣಿಗಳು ಮತ್ತು ಮಾನವ ಸಂಘರ್ಷ ಇತ್ತೀಚೆಗೆ ಮಿತಿಮೀರಿದ್ದು, ಕಾಡಾನೆ, ಕಾಡುಕೋಣ, ಹುಲಿ ಚಿರತೆಗಳು ಮಾನವನ ಸಾವಿಗೆ ಕಾರಣವಾಗಿದ್ದು, ಜನಸಾಮಾನ್ಯರ ಜೀವನದ ಜೊತೆ ಚೆಲ್ಲಾಟವಾಡುತ್ತಿರುವ ಸರ್ಕಾರದ ವಿರುದ್ಧ ಆಲ್ದೂರು ಮಂಡಲ ಬಿಜೆಪಿ-ಜೆಡಿಎಸ್ ಒಂದಾಗಿ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಆಲ್ದೂರು ಮಂಡಲ ಅಧ್ಯಕ್ಷ ರವಿ ಬಸರವಳ್ಳಿ, ಕೆರಮಕ್ಕಿ ಮಹೇಶ್, ಜೆಡಿಎಸ್ ನ ಟಿ.ಡಿ. ಮಲ್ಲೇಶ್, ಹೆಚ್.ಎನ್ ಕೃಷ್ಣೇಗೌಡ ಮತ್ತಿತರರು ಉಪಸ್ಥಿತರಿದ್ದರು.

# ಈಡೇರದ ಬೇಡಿಕೆ; ಶಿಕ್ಷಕರ ದಿನಾಚರಣೆ ಬಹಿಷ್ಕರಿಸಲು ಪ್ರಾಥಮಿಕ ಶಾಲಾ ಶಿಕ್ಷಕರು ನಿರ್ಧಾರ



**ಚಿತ್ರದುರ್ಗ:** ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಬೇಡಿಕೆಯನ್ನು ಸರ್ಕಾರ ಈಡೇರದಿದ್ದರೆ ಸೆಪ್ಟೆಂಬರ್ 5ರ ಶಿಕ್ಷಕರ ದಿನಾಚರಣೆಯನ್ನು ಬಹಿಷ್ಕಾರ ಮಾಡುವುದಾಗಿ ಶಿಕ್ಷಕರ ಸಂಘ ಸರ್ಕಾರಕ್ಕೆ ಎಚ್ಚರಿಕೆ ನೀಡಿ-ದ್ದಾರೆ.

ಇಲ್ಲಿನ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚಿತ್ರದುರ್ಗ ಜಿಲ್ಲಾ ಸಂಘದ ಅಧ್ಯಕ್ಷ ಜಿ.ಬಿ.ಮಹಾಂತೇಶ್ ಮಾತನಾಡಿ, ಸರ್ಕಾರ 2017ರವರೆಗೆ ನೇಮಕವಾದ ಶಿಕ್ಷಕರನ್ನು 1 ರಿಂದ 7ಕ್ಕೆ ನೇಮಕವಾದ ಶಿಕ್ಷಕರೆಂದು ಪರಿಗಣಿಸಿ. 2017 ರವರೆಗೆ ನೇಮಕವಾದ ಶಿಕ್ಷಕರನ್ನು 1 ರಿಂದ 7ಕ್ಕೆ ನೇಮಕವಾದ ಶಿಕ್ಷಕರ ಉಲ್ಲೇಖ (1)ರ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳು, 2017ರ ನಂತರ ನೇಮಕವಾದ ಶಿಕ್ಷಕರಿಗೆ ಅನ್ವಯಿಸಬೇಕು ಹಾಗೂ ಯಾವುದೇ ಕಾರಣಕ್ಕೂ 2016ಕ್ಕಿಂತ ಮೊದಲು ನೇಮಕಾತಿಯಾದವರಿಗೆ ಪೂರ್ವಾನ್ವಯಗೊಳಿಸಬಾರ ಪದವೀಧರ ಶಿಕ್ಷಕರೆಂದು ಹಾಗೂ ಪದವಿ ಪೂರೈಸಿದ ಎಲ್ಲರಿಗೂ ಸೇವಾ ಜೇಷ್ಠತೆಯೊಂದಿಗೆ ಪದನಾಮೀ ಕರಿಸುವುದು.

ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಈ ಪೂರ್ವದಂತೆ ಮುಖ್ಯಗುರುಗಳ ಹಾಗೂ ಹಿರಿಯ ಮುಖ್ಯ ಗುರುಗಳ ಹುದ್ದೆಗೆ ಸೇವಾ ಜೇಷ್ಠತೆಯ ಆಧಾರದ ಮೇಲೆ ಬಡ್ತಿ ನೀಡಬೇಕು.

ಅನ್ಯ ಕಾರ್ಯಗಳಿಂದ ಹಾಗೂ ಆನ್‌ಲೈನ್ ಕೆಲಸಗಳಿಂದ ಶಿಕ್ಷಕರ ಮೇಲೆ ಆಗುತ್ತಿರುವ ಒತ್ತಡ ಕಡಿಮೆ ಮಾಡುವುದು. ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರತಿದಿನ ದಿನಚರಿ ಬರೆಯುವ ಪದ್ಧತಿ ಕೈಬಿಡುವಂತೆ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕಿದೆ ಎಂದು ಆಗ್ರಹಿಸಿದರು.

ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಟಿ.ಹನುಮಂತಪ್ಪ ಮಾತನಾಡಿ, ಮುಖ್ಯಮಂತ್ರಿಗಳು ಹಾಗೂ ಶಿಕ್ಷಣ ಸಚಿವರು ಸುಧೀರ್ಘವಾದ ಸಭೆಯನ್ನು ದಿನಾಂಕ: 04-09-2024 ನಡೆಸಿ ಒಂದು ಸಮಿತಿಯನ್ನು ರಚಿಸಿ 30 ದಿನಗಳಲ್ಲಿ ಸಮಿತಿಯಿಂದ ವರದಿಯನ್ನು ಪಡೆದು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸುವುದಾಗಿ ಸ್ಪಷ್ಟವಾದ ಭರವಸೆಯನ್ನು ನೀಡಲಾಗಿತ್ತು.

ಆದರೆ ಇಲ್ಲಿಯವರೆಗೂ ಭರವಸೆ ಈಡೇರದೇ ಇರುವುದರಿಂದ ಶಿಕ್ಷಕರಿಗೆ ತೀವ್ರನೋವಾಗಿದ್ದು, ಶಿಕ್ಷಕರಿಗೆ ಆಗಿರುವ ಹಾಗೂ ಕಳೆದ ವರ್ಷ ಅನ್ಯಾಯಕ್ಕೆ ನ್ಯಾಯ ದೊರಕಿಸುವಂತೆ ಆಗ್ರಹಿಸಿ ಫ್ರೀಡಂ ಪಾರ್ಕನಲ್ಲಿ ಹೋರಾಟವನ್ನು ನಡೆಸಲಾಗಿತ್ತು.

ಜಿಲ್ಲಾ ಮಟ್ಟದಲ್ಲಿ ದಿನಾಂಕ:12-08-2024ರ ಐತಿಹಾಸಿಕ ಹೋರಾಟವನ್ನು ಸರ್ಕಾರಕ್ಕೆ ನೆನಪಿಸುವ ಮತ್ತು ಮುಂದಿನ ಹೋರಾಟದ ಬಗ್ಗೆ ಎಚ್ಚರಿಕೆ ನೀಡಲು ಪ್ರತಿ ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಹಾಗೂ ತಾಲ್ಲೂಕಿನ ಎಲ್ಲಾ ಚುನಾಯಿತ ಪದಾಧಿಕಾರಿಗಳು, ಪ್ರತಿನಿಧಿಗಳು, ನಾಮನಿರ್ದೇಶಿತ ಪದಾಧಿಕಾರಿಗಳ ಉಪಸ್ಥಿತಿಯಲ್ಲಿ ಆ.12 ರಂದು ಉಸ್ತುವಾರಿ ಸಚಿವರ, ಜಿಲ್ಲಾಧಿಕಾರಿಗಳ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಹಾಗೂ ಉಪನಿರ್ದೇಶಕರ ಮೂಲಕ ಮುಖ್ಯಮಂತ್ರಿಗಳಿಗೆ, ಶಿಕ್ಷಣ ಸಚಿವರಿಗೆ, ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಇಲಾಖೆ ಇವರಿಗೆ ಬೇಡಿಕೆ ಈಡೇರಿಸುವಂತೆ ಹಕ್ಕೊತ್ತಾಯ ಹಾಗೂ ಹೋರಾಟ ನಡೆಸುವ ಕುರಿತು ಪತ್ರ ಸಲ್ಲಿಸಲಾಗುವುದು.

ಆ.25 ರೊಳಗೆ ಬೇಡಿಕೆ ಈಡೇರಿಸುವಂತೆ ಒತ್ತಾಯಿಸುವುದು. ಆ.26 ರಂದು ಸರ್ಕಾರ-ಕ್ಕೆ ಮತ್ತು ಇಲಾಖೆಗೆ ಹೋರಾಟದ ಕುರಿತು ಪತ್ರ ರವಾನಿಸಲಾಗುವುದು ದಿನಾಂಕ: 27ರೊಳಗಾಗಿ ಬೇಡಿಕೆ ಈಡೇರದಿದ್ದಲ್ಲಿ ದಿನಾಂಕ: 03-09-2025ರಂದು ರಾಜ್ಯದ ಶಿಕ್ಷಕರೊಡಗೂಡಿ ಎಲ್ಲಾ ತಾಲ್ಲೂಕು, ಜಿಲ್ಲಾ, ರಾಜ್ಯ ಮಟ್ಟದ ಚುನಾಯಿತ ಪದಾಧಿಕಾರಿ, ಪ್ರತಿನಿಧಿಗಳು, ನಾಮನಿರ್ದೇಶನ ಸದಸ್ಯರನ್ನೊಳಗೊಂಡು ಎಲ್ಲಾ ಶಿಕ್ಷಕರು ಸಾಂದರ್ಭಿಕ ರಜೆ ಹಾಕಿ ರಾಜ್ಯ ಮಟ್ಟದ ಬೃಹತ್ ಅಂತಿಮ ಹೋರಾಟ ಮಾಡಲು ಫ್ರೀಡಂಪಾರ್ಕ್ ಚಲೋ, ಅದೇ ದಿನ 6 ರಿಂದ 8ನೇ ತರಗತಿಗಳ ಪಾಠ ಬೋಧನೆ ಬಹಿಷ್ಕಾರ ಮಾಡಿ, 1 ರಿಂದ 5ನೇ ತರಗತಿಯವರೆಗೆ ಮಾತ್ರ ಪಾಠ ಬೋಧನೆ ಮಾಡಲು ತೀರ್ಮಾನಿಸಲಾಗುವುದು.

ದಿನಾಂಕ: 03-09-2025ರಂದು ಯಾವುದೇ ನಿರ್ಣಯ ಬರದಿದ್ದಲ್ಲಿ ರಾಜ್ಯಾದ್ಯಂತ ಇರುವ ಎಲ್ಲಾ ತಾಲ್ಲೂಕು, ಜಿಲ್ಲಾ, ರಾಜ್ಯ ಮಟ್ಟದ ಚುನಾಯಿತ ಪದಾಧಿಕಾರಿ, ಪ್ರತಿನಿಧಿಗಳು, ನಾಮನಿರ್ದೇಶಿತ ಸದಸ್ಯರೊಡಗೂಡಿ ದಿನಾಂಕ: 04-09-2025 ರಿಂದ 05-09-2025ರವರೆಗೆ ಅಹೋರಾತ್ರಿ ಧರಣಿ ನಡೆಸುವುದು.

ಹೋರಾಟದ ಭಾಗವಾಗಿ ಫ್ರೀಡಂಪಾರ್ಕ್‌ನಲ್ಲಿಯೇ ಎಲ್ಲಾ ಪದಾಧಿಕಾರಿಗಳ, ಪ್ರತಿನಿಧಿಗಳ ನೇತೃತ್ವದಲ್ಲಿ ಶಿಕ್ಷಕರ ದಿನಾಚರಣೆಯನ್ನು ಆಚರಿಸುವುದು ಹಾಗೆಯೇ ಬೇಡಿಕೆ ಈಡೇರುವವರೆಗೆ ಹೋರಾಟವನ್ನು ಮುಂದುವರೆಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಗೌರವಾಧ್ಯಕ್ಷ ಕೆ.ವೀರಣ್ಣ, ಕಾರ್ಯಾಧ್ಯಕ್ಷ ಆರ್.ಕೃಷ್ಣಪ್ಪ, ಖಂಜಾಚಿ ಎ. ಮಲ್ಲಿಕಾರ್ಜನಪ್ಪ, ತಾಲ್ಲೂಕು ಅಧ್ಯಕ್ಷ ಕೆಂಚಪ್ಪ ಉಪಸ್ಥಿತರಿದ್ದರು.

## ಕರ್ನಾಟಕ ಅತಿ ಹೆಚ್ಚು ಬಿಪಿಎಲ್ ಕಾರ್ಡ್ ಹೊಂದಿರುವ ರಾಜ್ಯ

**ಬೆಂಗಳೂರು,ಆ.11:** ದಕ್ಷಿಣ ಭಾರತದಲ್ಲಿ ಅತಿ ಹೆಚ್ಚು ಬಿಪಿಎಲ್ ಕಾರ್ಡ್ ಇರೋದು ಕರ್ನಾಟಕದಲ್ಲಿ. ಕರ್ನಾಟಕದಲ್ಲೇ 75%. ಬಿಪಿಎಲ್ ಕಾರ್ಡ್ ಇವೆ. 1.28 ಕೋಟಿ ಬಿಪಿಎಲ್ ಕಾರ್ಡ್‌ಗಳಿದ್ದು, 4 ಕೋಟಿ ಜನ ಇದ್ದಾರೆ. ಈ ಹಿಂದೆ ಎಪಿಎಲ್ ಅರ್ಹತೆ ಇರೋರು ಬಿಪಿಎಲ್‌ನಲ್ಲಿ ಇದ್ದರು. ಅದನ್ನ ಸರಿ ಮಾಡೋಕೆ ಮುಂದಾಗಿದ್ದೆವು, ಆಗ ಗಲಾಟೆ ಆಯ್ತು. ಈಗ ಮತ್ತೆ ಅದನ್ನ ಪರಿಷ್ಕರಣೆ ಮಾಡ್ತೀವಿ. ಇದಕ್ಕೆ ಎಲ್ಲಾ ಸದಸ್ಯರ ಸಹಕಾರ ಬೇಕು ಎಂದು ಆಹಾರ ಮಂತ್ರಿ ಕೆ ಎಚ್ ಮುನಿಯಪ್ಪ ಹೇಳಿದ್ದಾರೆ.

ವಿಧಾನಪರಿಷತ್ ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ಎನ್.ನಾಗರಾಜ್ ಯಾದವ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಹಿಂದೆ ಬಿಪಿಎಲ್ ಕಾರ್ಡ್‌ನಲ್ಲಿದ್ದ ಫಲಾನುಭವಿಗಳನ್ನು ಎಪಿಎಲ್‌ಗೆ ವರ್ಗಾವಣೆ ಮಾಡಲು ಇಲಾಖೆ ಮುಂದಾದಾಗ ದೊಡ್ಡ ವಿವಾದವೇ ಸೃಷ್ಟಿಯಾಯಿತು ಎಂದು ಹೇಳಿದರು.

ಸದನದ ಸದಸ್ಯರೆಲ್ಲರೂ ಒಪ್ಪಿಗೆಯನ್ನು ಸೂಚಿಸಿದರೆ ಎಪಿಎಲ್‌ನಿಂದ ಬಿಪಿಎಲ್‌ಗೆ ಅನರ್ಹ ಫಲಾನುಭವಿಗಳನ್ನು ವರ್ಗಾವಣೆ ಮಾಡಲಾಗುವುದು.ನಮ್ಮ ಇಲಾಖೆ ನಡೆಸಿರುವ ಸಮೀಕ್ಷೆ ಪ್ರಕಾರ ಇಂತಹ 15 ಲಕ್ಷ ಫಲಾನುಭವಿಗಳು ಬಿಪಿಎಲ್‌ಗೆ ಸೇರ್ಪಡೆಯಾಗಿದ್ದಾರೆ. ಅಂದಾಜು 50 ರಿಂದ 60 ಲಕ್ಷ ಫಲಾನುಭವಿಗಳು ಲಾಭ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಸುಸ್ಥಿತಿಯಲ್ಲಿರುವ ಬಹಳಷ್ಟು ಫಲಾನುಭವಿಗಳು ಬಿಪಿಎಲ್


ಪಡಿತರ ಆಹಾರಧಾನ್ಯಗಳನ್ನು ಪಡೆಯುತ್ತಿರುವ ಪರಿಣಾಮ ಸರ್ಕಾರದ ಬೊಕ್ಕಸಕ್ಕೂ ಹೊರೆಯಾಗುತ್ತದೆ. ಇದನ್ನು ಮಾಡುವಾಗ ಕೆಲವು ಸಮಸ್ಯೆಗಳು ಎದುರಾಗುತ್ತವೆ. ಕೆಲವರು ಅರ್ಹ ಫಲಾನುಭವಿಗಳನ್ನೇ ತೆಗೆದುಹಾಕುತ್ತಾರೆ ಎಂದು ಅಪಪ್ರಚಾರ ನಡೆಸುತ್ತಾರೆ. ಇದಕ್ಕೆ ಸದಸ್ಯರು ಅವಕಾಶ ಮಾಡಿಕೊಡಬಾರದು. ನಿಮ ಒಪ್ಪಿಗೆ ಇದ್ದರೆ ಅನರ್ಹರನ್ನು ತೆಗೆದುಹಾಕಲು ಸರ್ಕಾರ ಸಿದ್ಧವಿದೆ ಎಂದು ಘೋಷಿಸಿದರು.

ದಕ್ಷಿಣ ಭಾರತದ ರಾಜ್ಯಗಳ ಪೈಕಿ ಕರ್ನಾಟಕದಲ್ಲೇ ಅತೀ ಹೆಚ್ಚು ಬಿಪಿಎಲ್ ಫಲಾನುಭವಿಗಳಿದ್ದಾರೆ. ತಮಿಳುನಾಡು ಶೇ.50, ಕೇರಳ ಶೇ.45, ತೆಲಂಗಾಣ ಶೇ.50, ಆಂಧ್ರಪ್ರದೇಶ ಶೇ.50, ನಮಲ್ಲಿ ಮಾತ್ರ ಶೇ. 70 ರಿಂದ 75 ರಷ್ಟು ಬಿಪಿಎಲ್ ಫಲಾನುಭವಿಗಳು ಇದ್ದಾರೆ ಎಂದು ಅಂಕಿ ಸಂಖ್ಯೆಗಳ ವಿವರಣೆ ನೀಡಿದರು. ಓರ್ವ ಬಿಪಿಎಲ್ ಫಲಾನುಭವಿ ಎಂದು ಗುರುತಿಸಬೇಕಾದರೆ ಕೇಂದ್ರ ಸರ್ಕಾರ 11 ಹಾಗೂ ರಾಜ್ಯಸರ್ಕಾರ 5 ಮಾನದಂಡಗಳನ್ನು ನಿಗದಿಪಡಿಸಿದೆ. ಈ ಮಾನದಂಡವನ್ನು ನಾವು ಪಾಲನೆ ಮಾಡಿದರೆ ಬಿಪಿಎಲ್ ಫಲಾನುಭವಿಗಳ ಸಂಖ್ಯೆ 35ಕ್ಕೆ ಇಳಿಕೆಯಾಗುತ್ತದೆ ಎಂದರು.

ರಾಜ್ಯದಲ್ಲಿ ಪಡಿತರ ದಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವವರ ಮೇಲೆ ಇಲಾಖೆ ಹಲವು ದಿಟ್ಟ ಕ್ರಮಗಳನ್ನು ತೆಗೆದುಕೊಂಡಿದೆ. 2023-24ರಲ್ಲಿ 404 ಪ್ರಕರಣಗಳು- 20 ಕೋಟಿ ರೂ.ದಂಡ, 2024-25 ರಲ್ಲಿ 505 ಪ್ರಕರಣಗಳು-10 ಕೋಟಿ ರೂ. ದಂಡ, ಪ್ರಸಕ್ತ ವರ್ಷ 287 ಪ್ರಕರಣಗಳು-4 ಕೋಟಿ ರೂ. ದಂಡವನ್ನು ವಸೂಲಿ ಮಾಡಲಾಗಿದೆ.

ಪಡಿತರ ಆಹಾರಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮಾಹಿತಿ ಬಂದ ತಕ್ಷಣ ನಮ ಅಧಿಕಾರಿಗಳು ಕೂಡ ತಕ್ಷಣ ದಾಳಿ ನಡೆಸಿ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ತೆಗೆದುಕೊಂಡಿದ್ದಾರೆ.

## ಚಿತ್ರದುರ್ಗದಲ್ಲಿ ಎಸ್‌ಬಿಐ ಪ್ರಾದೇಶಿಕ ಕಚೇರಿ ಉದ್ಘಾಟನೆ



ಚಿತ್ರದುರ್ಗ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಬಿ.ಡಿ. ರಸ್ತೆ ಶಾಖೆಯ ಮೇಲ್ಭಾಗದಲ್ಲಿ ಚಿತ್ರದುರ್ಗ ಪ್ರಾದೇಶಿಕ ವ್ಯವಹಾರ ಕಚೇರಿಯನ್ನು ಇಂದು ಬೆಂಗಳೂರು ವೃತ್ತದ ಸಿಜಿಎಂ ಜೂಹಿ ಸ್ಮಿತಾ ಸಿನ್ಹಾ ಉದ್ಘಾಟನೆ ನೆರವೇರಿಸಿದರು.

ಇದುವರೆಗೂ ದಾವಣಗೆರೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕಚೇರಿ, ದೀರ್ಘಕಾಲದ ನಿರೀಕ್ಷೆಯ ನಂತರ ಚಿತ್ರದುರ್ಗಕ್ಕೆ ಸ್ಥಳಾಂತರಗೊಂಡಿದೆ. ಗ್ರಾಹಕರಿಗೆ ಉತ್ತಮ ಹಾಗೂ ತ್ವರಿತ ಬ್ಯಾಂಕಿಂಗ್ ಸೇವೆಯನ್ನು ಒದಗಿಸಲು ನೆರವಾಗಲಿದೆ.

ಈ ಸಂದರ್ಭದಲ್ಲಿ ಸಿಜಿಎಂ ಜೂಹಿ ಸ್ಮಿತಾ ಸಿನ್ಹಾ ಅವರು ಚಿತ್ರದುರ್ಗ ಪ್ರದೇಶದ ಪ್ರಮುಖ ಗ್ರಾಹಕರನ್ನು ಭೇಟಿಯಾಗಿ, ಅಭಿನಂದನೆಯ ಸಂಕೇತವಾಗಿ ಸಸಿಗಳನ್ನು ನೀಡಿ ಗೌರವಿಸಿದರು.

ಈ ವೇಳೆ ಜಿಎಂ ನೆಟ್‌ವರ್ಕ್ -2 ಜಿ.ಲೇಖಾ ಮೆನನ್, ಬಳ್ಳಾರಿ ಎಒ, ಡಿಜಿಪಿ ಆಲೋಕ್ ಚಂದ್ರ ಅವರು ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸಿದ್ದರು.

## ಅಧಿವೇಶನದ ಮೊದಲ ದಿನವೇ ಸರ್ಕಾರದ ವಿರುದ್ಧ ಪ್ರತಿಪಕ್ಷಗಳ ಸಮರ

**ಬೆಂಗಳೂರು,ಆ.11:** ರಾಜ್ಯ ವಿಧಾನ ಮಂಡಲದ ಮುಂಗಾರು ಅಧಿವೇಶನದ ಮೊದಲ ದಿನವೇ ರಾಜ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷ ಸದಸ್ಯರು ವಿಧಾನಸೌಧದ ಆವರಣದಲ್ಲಿರುವ ಗಾಂಧಿ ಪ್ರತಿಮೆ ಮುಂದೆ ಧರಣಿ ನಡೆಸಿದರು.

ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಸಂಭವಿಸಿದ ಕಾಲ್ತುಳಿತ ದುರಂತದ ನೈತಿಕ ಹೊಣೆಯನ್ನು ರಾಜ್ಯಸರ್ಕಾರ ಹೊರಬೇಕು ಎಂದು ಆಗ್ರಹಿಸಿ ಬಿಜೆಪಿ, ಜೆಡಿಎಸ್ ಶಾಸಕರು ಗಾಂಧಿ ಪ್ರತಿಮೆ ಬಳಿ ಸರ್ಕಾರದ ವಿರುದ್ಧ ಘೋಷಣೆಯುಳ್ಳ ಫಲಕಗಳನ್ನು ಪ್ರದರ್ಶಿಸಿ ಪ್ರತಿಭಟನೆ ಮಾಡಿದರು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ, ಜೆಡಿಎಸ್ ಜಂಟಿ ಪ್ರತಿಭಟನೆ ನಡೆಸಿದ್ದು, ಸದನದಲ್ಲೂ ಸರ್ಕಾರದ ವಿರುದ್ಧ ಹೋರಾಟ ನಡೆಸುವುದಾಗಿ ಉಭಯ ಪಕ್ಷಗಳ ನಾಯಕರು ಘೋಷಿಸಿದರು.

ಪ್ರತಿಭಟನೆ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ, ಜೆಡಿಎಸ್ ಮತ್ತು ಬಿಜೆಪಿ ಶಾಸಕರು ಅಧಿವೇಶನದ ಮೊದಲ ದಿನವೇ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದೇವೆ. ಸದನದಲ್ಲೂ ನಾವು ಹೋರಾಟ ಮಾಡುತ್ತೇವೆ ಎಂದರು.

ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದ ಪ್ರಕರಣದ ಜವಾಬ್ದಾರಿಯನ್ನು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹೊರಬೇಕು. ಜವಾಬ್ದಾರಿಯಿಂದ ನುಣಚಿಕೊಳ್ಳಲು ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡಿ-ದ್ದಾರೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಉಂಟಾಗಿದ್ದು ರೈತರು ಪ್ರತಿಭಟನೆ ನಡೆಸಿ ಹೋರಾಟ ಮಾಡುತ್ತಿದ್ದಾರೆ, ಉತ್ತರ ಕರ್ನಾಟಕದ ನೀರಾವರಿ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತಿಲ್ಲ, ಪೊಲೀಸ್ ಸಬ್‌ಇನ್?ಸಪೆಕ್ಟರ್ ನೇಮಕಾತಿ ಪೂರ್ಣಗೊಂಡಿದ್ದರೂ ನೇಮಕಾತಿ ಆದೇಶ ನೀಡುತ್ತಿಲ್ಲ, ರಾಜ್ಯದಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇವೆ, ಆದರೂ ನೇಮಕಾತಿ ಮಾಡುತ್ತಿಲ್ಲ, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಸದನದ ಒಳ-ಹೊರಗು ಉಭಯಪಕ್ಷಗಳಿಂದ ಹೋರಾಟ ಮಾಡುತ್ತೇವೆ. ಇಂದು ಸಾಂಕೇತಿಕವಾಗಿ ಗಾಂಧಿಪ್ರತಿಮೆ ಬಳಿ ಪ್ರತಿಭಟನೆ ಮಾಡಿದ್ದೇವೆ ಎಂದು ಅವರು ತಿಳಿಸಿದರು.

## ಧರ್ಮಸ್ಥಳ : ಮೂರು ದಶಕಗಳ ಹಿಂದೆ ಕೊಲೆಯಾಗಿದ್ದ ಪದ್ಮಲತಾ ಪ್ರಕರಣಕ್ಕೆ ಮರುಜೀವ

**ಬೆಂಗಳೂರು,ಆ.11:** ಅಸಹಜ ಸಾವುಗಳ ಆರೋಪದ ಹಿನ್ನಲೆಯಲ್ಲಿ ಸುದ್ದಿಯಾಗಿರುವ ಧರ್ಮಸ್ಥಳ ಗ್ರಾಮದಲ್ಲಿ ಮೂರು ದಶಕಗಳಿಗೂ ಹಿಂದೆ ಅತ್ಯಾಚಾರಕ್ಕೀಡಾಗಿ ಕೊಲೆಯಾದ ಪದ್ಮಲತಾ ಪ್ರಕರಣಕ್ಕೆ ಇದೀಗ ಮರು ಜೀವ ಬಂದಿದೆ.

ಪದ್ಮಲತಾ ಅವರ ಸಹೋದರಿ ಇಂದ್ರಾವತಿ ಅವರು ಪದ್ಮಲತಾ ಅಪಹರಣ ಮತ್ತು ಪ್ರಕರಣದ ಬಗ್ಗೆ ಮರುತನಿಖೆ ನಡೆಸುವಂತೆ ಕೋರಿ ಎಸ್‌ಐಟಿಗೆ ದೂರು ನೀಡಿದ್ದಾರೆ

ಪದ್ಮಲತಾ ಮೃತದೇಹವನ್ನು ದಹಿಸಿಲ್ಲ, ಬದಲಾಗಿ ಹೂತಿದ್ದೇವೆ. ಈ ಕ್ಷಣವೂ ಬೇಕಿದ್ದ-ರೆ ಎಸ್‌ಐಟಿ ಅಗೆದು ಪದ್ಮಲತಾ ಸಾವಿನ ಕಾರಣ ಪತ್ತೆ ಹಚ್ಚಬೇಕು ಎಂದು ಹೇಳಿದ್ದಾರೆ .

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ಸಹೋದರಿ ಕಾಲೇಜಿಗೆ ಹೋಗಿದ್ದವಳು, ವಾಪಸ್ ಧರ್ಮಸ್ಥಳ ಬಸ್ ಸ್ಟಾಂಡ್ ವರೆಗೆ ಬಂದಿದ್ದಳು. ನಂತರ ಏನಾಗಿದೆ ಗೊತ್ತಿಲ್ಲ. ಅವಳು ಹಾಕಿದ ಬಟ್ಟೆ, ಕೈನಲ್ಲಿದ್ದ ವಾಚ್ ನೋಡಿದ ಆಧಾರದಲ್ಲಿ ಅವಳೆಂದು ಗುರುತಿಸಿದ್ದೆವು. ಅವಳ ಕೈಕಾಲನ್ನು ಕಟ್ಟಲಾಗಿತ್ತು. ದೇಹ ಕೊಳೆತುಹೋಗಿತ್ತು. ಅವಳನ್ನು ಯಾರೋ ಕಿಡ್ನಾಪ್ ಮಾಡಿ ಕೊಲೆ ಮಾಡಿದ್ದ ಅನುಮಾನ ಇತ್ತು. ಆಗ ತನಿಖೆ ಮಾಡಿ, ಪತ್ತೆಯಾಗದ ಪ್ರಕರಣ ಅಂದಿದ್ರು. ಆದ್ರೆ ಈಗ ಎಸ್ ಐಟಿ ಯವರು ತನಿಖೆ ಮಾಡಿದ್ರೆ ಸತ್ಯ ಹೊರಬರಬಹುದು. ಅಗತ್ಯಬಿದ್ರೆ ಮೃತದೇಹವನ್ನು ಹೂತಿದ್ದ ಜಾಗದಿಂದ ತೆಗೆದು ಬೇಕಾದರೆ ತನಿಖೆ ಮಾಡಲಿ. ನಾನೂ ಸಾಕ್ಷಿದಾರಳಾಗಿ ಬರುತ್ತೇನೆ ಎಂದು ತಿಳಿಸಿದರು.

ಈಗಿನ ಪ್ರಭಾವಿಗಳೇ ಆಗಿನ ತನಿಖೆಯ ದಿಕ್ಕುತಪ್ಪಿಸಿದ್ದಾರೆ. ಅವರ ಹಣ ಬಲದಲ್ಲಿ ಆಗ ಪತ್ತೆಯಾಗದ ಪ್ರಕರಣ ಎಂದು ತನಿಖೆಯನ್ನು ಮುಚ್ಚಿಹಾಕಲಾಗಿತ್ತು, ಈಗ ಎಸ್‌ಐಟಿ ತನಿಖೆಯಲ್ಲಿ ನ್ಯಾಯ ಸಿಗುವ ಭರವಸೆ ಇದೆ ಎಂದು ಹೇಳಿದರು.

ಮತ್ತೊಂದು ದೂರು:

15 ವರ್ಷ ಆಸುಪಾಸಿನ ಬಾಲಕಿಯ ಶವ ಕಾನೂನುಬಾಹಿರವಾಗಿ ಹೂತಿದ್ದಾಗಿ ಮೊದಲು ಎಸ್‌ಐಟಿಗೆ ದೂರು ಕೊಟ್ಟಿದ್ದ ವಕೀಲ ಜಯಂತ್ ಇದೀಗ "ಅಪಹರಣ ಹಾಗೂ ಕೊಲೆ" ಪ್ರಕರಣದ ಎರಡನೇ ದೂರು ನೀಡಿದ್ದಾರೆ.

ಈ ಬಗ್ಗೆ ಮಾತನಾಡಿದ ಜಯಂತ್, 'ಪದ್ಮಲತಾ ಅಪಹರಣ ಆಗಿರುವುದು ಸತ್ಯ. ಈ ಬಗ್ಗೆ ಯಾರು ತನಿಖೆ ನಡೆಸಿದ್ದರು, ಯಾರು ಅಪಹರಣ ಮತ್ತು ಕೊಲೆ ಮಾಡಿದ್ದರು ಎಂಬುದನ್ನು ಎಸ್‌ಐಟಿ ತನಿಖೆ ನಡೆಸಬೇಕು. ನಾನು ಈ ಪ್ರಕರಣದ ಎರಡನೇ ದೂರುದಾರನಾಗಿದ್ದೇನೆ. ದೂರು ನೀಡಿದಾಗಿನಿಂದಲೂ ನನ್ನನ್ನು ಹಲವರು ಹಿಂಬಾಲಿಸುತ್ತಿದ್ದು, ನನಗೆ ಜೀವಭಯವಿದೆ. ಆದರೆ ನಾನು ಹೆದರುವುದಿಲ್ಲ, ಹೋರಾಟ ಮುಂದುವರಿಸುತ್ತೇನೆ" ಎಂದು ಹೇಳಿದರು.

ಸಿಐಡಿ ತನಿಖೆ ಸರಿಯಾಗಿ ನಡೆದಿಲ್ಲ: 'ಪದ್ಮಲತಾ ಅವರ ಪ್ರಕರಣ ಆಗ ಸರಿಯಾಗಿ ತನಿಖೆಯಾಗಿಲ್ಲ. ಸಿಐಡಿ ಸರಿಯಾಗಿ ತನಿಖೆ ನಡೆಸಿಲ್ಲ. ಪದ್ಮಲತಾ ನಮ್ಮ ಸಂಬಂಧಿಯೇ. ಈಗಾಗಲೇ ಪದ್ಮಾವತಿ ಅವರ ಅಕ್ಕ ಕೂಡ ಎಸ್‌ಐಟಿ ಗೆ ದೂರು ನೀಡಲಿದ್ದಾರೆ. ಎಸ್‌ಐಟಿ ಮೇಲೆ ನಮಗೆ ನಂಬಿಕೆ ಇದೆ ಮತ್ತು ಸತ್ಯ ಹೊರಬರುತ್ತದೆ ಎಂಬ ವಿಶ್ವಾಸವೂ ಇದೆ' ಎಂದು ಜಯಂತ್ ತಿಳಿಸಿದರು.

ಸಾಕ್ಷ್ಯಗಳನ್ನು ನೀಡಲು ಸಿದ್ಧ:

ತಮ್ಮ ದೂರಿಗೆ ಸಂಬಂಧಿಸಿದಂತೆ ದಾಖಲೆಗಳು ತಮ್ಮ ಬಳಿ ಇವೆ ಎಂದು ಹೇಳಿದ ಜಯಂತ್, 'ನನ್ನ ಬಳಿ ದೂರಿನ ಸಾಕ್ಷ್ಯ ಇವತ್ತಿಗೂ ಇದೆ. ಅದನ್ನು ನಾನು ಎಸ್‌ಐಟಿ ಗೆ ನೀಡುತ್ತೇನೆ. ಅವರು ಅದನ್ನು ಮಾಧ್ಯಮದವರಿಗೆ ಕೊಡಲಿ ಎಂದು ಅವರು ಹೇಳಿದರೆ ನಾನು ಕೊಡುತ್ತೇನೆ. ನನ್ನ ಆರೋಪ ಸುಳ್ಳು ಎಂದು ಯಾರಾದರೂ ಹೇಳಿದರೆ ನನ್ನ ಮೇಲೆ ಕೇಸ್ ಹಾಕಲಿ. ನಾನು ಯಾವುದೇ ಮುಖವಾಡ ಹಾಕುವುದಿಲ್ಲ, ಯಾವುದಕ್ಕೂ ಭಯಪಡುವುದಿಲ್ಲ' ಎಂದು ಸವಾಲು ಹಾಕಿದರು.

ಹಿನ್ನೆಲೆ:

ಡಿಸೆಂಬರ್ 22, 1986. ಎಸ್.ಡಿ.ಎಂ. ಕಾಲೇಜು ಉಜಿರೆಯಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದ ಪದ್ಮಲತಾ ಮರಳಿ ಮನೆಗೆ ಬರಲೇ ಇಲ್ಲ. ನಾಪತ್ತೆಯಾದ ಸುಮಾರು 56 ದಿನಗಳ ನಂತರ ನೇತ್ರಾವತಿ ನದಿ ದಡದಲ್ಲಿ ಕೊಳೆತುಹೋದ ಶವವಾಗಿ ಪತ್ತೆಯಾಗಿದ್ದಳು. ನಂತರ ಎಷ್ಟೇ ಹೋರಾಟ ನಡೆಸಿದರೂ, ಆಕೆಯ ಸಾವಿಗೆ ಕಾರಣ ಏನೆಂಬುದು "ಪತ್ತೆಯಾಗದ ಪ್ರಕರಣವಾಗಿ" ಸಿಐಡಿ ಯು ಪ್ರಕರಣವನ್ನು ಮುಕ್ತಾಯ ಮಾಡಿತ್ತು.

# ಅಡಿಕೆ ಬದಲು ಪರ್ಯಾಯ ಬೆಳೆಗೆ ಪ್ರೋತ್ಸಾಹಿಸಿ

## ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಸೂಚನೆ

**ದಾವಣಗೆರೆ, ಜು. 23–** ಜಿಲ್ಲೆಯಲ್ಲಿ ಅಂತರ್ಜಲ ಮಟ್ಟದ ತೀವ್ರ ಕುಸಿತದ ಬಗ್ಗೆ ಕಳವಳ ವ್ಯಕ್ತಪಡಿಸಿದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಬೋರ್‌ವೆಲ್ ಆಧಾರಿತ ಅಡಿಕೆ ಕೃಷಿ ಬದಲಿಗೆ, ಅರೆ ನೀರಾವರಿ ಬೆಳೆಗಳನ್ನು ಉತ್ತೇಜಿಸಲು ತಕ್ಷಣ ಯೋಜನೆ ರೂಪಿಸುವಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕೃಷಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಹರಿಹರ ಮತ್ತು ನ್ಯಾಮತಿ ಹೊರತುಪಡಿಸಿ, ದಾವಣಗೆರೆ, ಹೊನ್ನಾಳಿ ತಾಲ್ಲೂಕುಗಳು ಅಂತರ್ಜಲ ಮಟ್ಟದಲ್ಲಿ 'ನಿರ್ಣಾಯಕ ಹಂತ' ತಲುಪಿವೆ. ಇನ್ನು ಜಗಳೂರು ಮತ್ತು ಚನ್ನಗಿರಿ ತಾಲ್ಲೂಕುಗಳು 'ಬಳಕೆಯ ಮೀರಿದ ಹಂತ'ವನ್ನು ತಲುಪಿವೆ. ಈ ಹಿನ್ನೆಲೆಯಲ್ಲಿ, ಅಡಿಕೆಗೆ ಪರ್ಯಾಯವಾಗಿ ಮೆಕೆಡೋಮಿಯಾ, ಸೀತಾಫಲದಂತಹ ಬೆಳೆಗಳನ್ನು ಹಾಗೂ ಅಂತರ ಬೆಳೆಯಾಗಿ ಕೋ–ಕೋ, ಪೆಪ್ಪರ್ ಬೆಳೆಯಲು ರೈತರಿಗೆ ಪ್ರೋತ್ಸಾಹಿಸುವ ಯೋಜನೆಗಳನ್ನು ರೂಪಿಸುವಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಟ್ರ್ಯಾಕ್ಟರ್ ಸಹಾಯ ಧನ: ರೈತರಿಗೆ 30 ಹೆಚ್.ಪಿ. ವರೆಗಿನ ಟ್ರ್ಯಾಕ್ಟರ್‌ಗಳನ್ನು ಸರ್ಕಾರದ ಸಹಾಯ ಧನದಡಿ ನೀಡಲು ಯೋಜನೆ ರೂಪಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ತೋಟಗಾರಿಕೆ ಇಲಾಖೆಯಿಂದ ಈ ವರ್ಷ 30 ಹೆಚ್.ಪಿ.ವರೆಗಿನ 90 ಟ್ರ್ಯಾಕ್ಟರ್‌ಗಳನ್ನು ನೀಡಲಾಗುತ್ತಿದ್ದು, ಸಾಮಾನ್ಯ ವರ್ಗದವರಿಗೆ 75,000 ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ 2.50 ಲಕ್ಷ ಸಹಾಯಧನ ನೀಡಲಾಗುತ್ತದೆ ಎಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಬೆಳೆ ವಿಮೆ ನೊಂದಣಿ ಹೆಚ್ಚಳ: ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಈವರೆಗೆ ಮುಂಗಾರಿನಲ್ಲಿ 40,265 ರೈತರು ಬೆಳೆ ವಿಮೆಗೆ ನೋಂದಾಯಿಸಿದ್ದಾರೆ. ಬೆಳೆ ವಿಮೆ ಜೊತೆಗೆ, ಬೆಳೆ ಕಟಾವು ಪ್ರಯೋಗವನ್ನು ಕರಾರುವಾಕ್ಕಾಗಿ ಮಾಡಬೇಕು. ಅಲ್ಲದೆ, ಬೆಳೆ ಸಮೀಕ್ಷೆಯ ವೇಳೆ ಯಾವುದೇ ವ್ಯತ್ಯಾಸವಾಗದಂತೆ ಸಮೀಕ್ಷೆ ನಡೆಸಬೇಕು ಎಂದು ಸೂಚಿಸಿದರು.

ರೈತ ಉತ್ಪಾದಕ ಕಂಪನಿಗಳ ಹೆಚ್ಚಳ: ರೈತ ಉತ್ಪಾದಕ ಕಂಪನಿಗಳನ್ನು ಹೆಚ್ಚಿಸುವುದರಿಂದ ರೈತರಿಗೆ ಅನುಕೂಲವಾಗಲಿದೆ. ಜಿಲ್ಲೆಯಲ್ಲಿ ನಬಾರ್ಡ್‌ನಿಂದ 3, ಕೃಷಿ ಇಲಾಖೆಯಿಂದ 16, ತೋಟಗಾರಿಕೆ ಇಲಾಖೆಯಿಂದ 7, ಮೀನುಗಾರಿಕೆ ಇಲಾಖೆಯಿಂದ 1, ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ 1 ಸೇರಿದಂತೆ ಒಟ್ಟು 28 ರೈತ ಉತ್ಪಾದಕ ಕಂಪನಿಗಳಿವೆ. ಮಾಯಕೊಂಡ ಹೋಬಳಿಯಲ್ಲಿ ಮತ್ತೊಂದು ಎಫ್‌ಪಿಒ ಸೇರಿದಂತೆ ಅಗತ್ಯವಿರುವ ಕಡೆ ರೈತ ಉತ್ಪಾದಕ ಕಂಪನಿಗಳನ್ನು ಹೆಚ್ಚಿಸಲು ಸೂಚನೆ ನೀಡಿದರು.

ಸ್ತ್ರೀ ಶಕ್ತಿ ಸಂಘಗಳ ಆಹಾರ ಉತ್ಪನ್ನಗಳಿಗೆ ಉತ್ತೇಜನ: ಸರ್ಕಾರದಿಂದ ಆಯೋಜಿಸುವ ಸಭೆ, ಸಮಾರಂಭಗಳಲ್ಲಿ ನೀಡಲಾಗುವ ಆಹಾರ ತಿನಿಸುಗಳನ್ನು ಸ್ತ್ರೀ ಶಕ್ತಿ ಸಂಘ ಮತ್ತು ಸ್ವಸಹಾಯ ಸಂಘದ ಮಹಿಳೆಯರು ತಯಾರಿಸಿದ ಉತ್ಪನ್ನಗಳನ್ನು ವಿತರಣೆ ಮಾಡಲು ಎಲ್ಲಾ ಇಲಾಖಾ ಮುಖ್ಯಸ್ಥರು ಅನುಸರಿಸಲು ಜಂಟಿ ಸುತ್ತೋಲೆ ಹೊರಡಿಸುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು. ಇದ–ರಿಂದ ಮಾರುಕಟ್ಟೆಯನ್ನು ಹೆಚ್ಚಿಸುವ ಜೊತೆಗೆ ಗುಣಮಟ್ಟದ ಆಹಾರದ ವಿತರಣೆಯಾಗಲಿದೆ ಎಂದರು.

# ಗರ್ಭಿಣಿ ಪತ್ನಿಯ ಕೊಂದು, ಶವದೊಂದಿಗೆ 2 ದಿನ ಕಳೆದ ಹಂತಕ ಬಂಧನ

**ಬೆಂಗಳೂರು:** ಗರ್ಭಿಣಿ ಪತ್ನಿಯ ಕೊಂದ ಆರೋಪದ ಮೇಲೆ ಉತ್ತರಪ್ರದೇಶ ಮೂಲಕ ವ್ಯಕ್ತಿಯೊಬ್ಬನನ್ನು ಪೊಲೀಸರು ಗುರುವಾರ ಬಂಧನಕ್ಕೊಳಪಡಿಸಿದ್ದಾರೆ.

ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯ ಥಣಿಸಂದ್ರದಲ್ಲಿ ಘಟನೆ ನಡೆದಿದೆ. ಮೃತ ಮಹಿಳೆಯನ್ನು ಸುಮನ್ ಎಂದು ಗುರ್ತಿಸಲಾಗಿದೆ. ಪತ್ನಿ ಕೊಂದ ಆರೋಪದ ಮೇಲೆ ಶಿವಂ ಸಹಾನೆ ಎಂಬಾತನನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಆರೋಪಿ ಶಿವಂ ಉತ್ತರ ಪ್ರದೇಶದ ಕುಶಿನಗರದ ಮೂಲದವನರಾಗಿದ್ದು, ಆರು ತಿಂಗಳ ಹಿಂದಷ್ಟೇ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದ. ಮದ್ಯವ್ಯಸನಿಯಾಗಿದ್ದ ಶಿವಂ ಆಗಾಗ್ಗೆ ಪತ್ನಿಯೊಂದಿಗೆ ಜಗಳವಾಡುತ್ತಿದ್ದ ಎಂದು ತಿಳಿದುಂದಿದೆ.

ಸೋಮವಾರ ನಡೆದ ಜಗಳದ ಸಮಯದಲ್ಲಿ, ಶಿವಂ, ಸುಮನ್‌ಗೆ ಕಪಾಳಕ್ಕೆ ಹೊಡೆದಿದ್ದು, ನಂತರ ಪತ್ನಿಯಿಂದ ಶಿವಂ ಪ್ರತ್ಯೇಕವಾಗಿ ಮಲಗಿದ್ದಾನೆ. ರಾತ್ರಿ ಮಹಿಳೆ ಸಾವನ್ನಪ್ಪಿದ್ದು, ಇದನ್ನು ಅರಿಯದ ಶಿವಂ ಮಂಗಳವಾರ ಬೆಳಿಗ್ಗೆ ಕೆಲಸಕ್ಕೆ ಹೋಗಿದ್ದಾನೆ. ಮನೆಗೆ ಹಿಂದಿರುಗಿದಾಗ ಆಕೆ ಸಾವನ್ನಪ್ಪಿರುವುದು ತಿಳಿದುಬಂದಿದೆ. ಆದರೆ, ಪೊಲೀಸರಿಗೆ ಈ ಬಗ್ಗೆ ಮಾಹಿತಿ ನೀಡುವ ಬದಲು ಶವದೊಂದಿಗೆ 2 ದಿನ ಕಾಲ ಕಳೆದಿದ್ದಾನೆ.

ಬಳಿಕ ಮೃತದೇಹವನ್ನು ವಿಲೇವಾರಿ ಮಾಡಲು ಯೋಚಿಸಿದ್ದಾನೆ. ಆದರೆ, ಸಿಕ್ಕಿಬೀಳುವ ಭಯದಿಂದ ಆಲೋಚನೆನಯ್ನು ಕೈಬಿಟ್ಟಿದ್ದಾನೆ. ಬುಧವಾರ ಬೆಳಿಗ್ಗೆ ಮನೆಯಿಂದ ದುರ್ವಾಸನೆ ಬರುವುದನ್ನು ಕಂಡ ಮನೆ ಮಾಲೀಕ ಮಹೇಶ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮಹಿಳೆ ಮೂರು ದಿನಗಳ ಹಿಂದೆ ಸಾವನ್ನಪ್ಪಿದ್ದು, ದೇಹದ ಮೇಲೆ ಯಾವುದೇ ಬಾಹ್ಯಗಾಯಗಳಿಲ್ಲ. ಆದರೆ, ಮೂಗಿನಿಂದ ರಕ್ತಸ್ರಾವವಾಗಿದ್ದು, ಬಲವಾದ ಹೊಡೆತದಿಂದಾಗಿರಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ. ಪ್ರಕರಣ ಸಂಬಂಧ ಶಿವಂ ವಿರುದ್ಧ ಬಿಎನ್‌ಎಸ್ 103(1) ಅಡಿಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

# ರಾಜ್ಯದ ಅಭಿವೃದ್ಧಿಗೆ ಬಿಜೆಪಿ ಸಂಸದರು 10 ರೂ. ಅನುದಾನ ತಂದಿಲ್ಲ

**ಬೆಂಗಳೂರು :** ಬೆಂಗಳೂರು ಸೇರಿದಂತೆ ಕರ್ನಾಟಕದ



ಅಭಿವೃದ್ಧಿಗೆ ಬಿಜೆಪಿಯ ಯಾವೊಬ್ಬ ಸಂಸದರು 10 ರೂ. ಅನುದಾನ ತಂದಿಲ್ಲ. ಇವರಿಗೆ ನಾಚಿಕೆಯಾಗಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಆಕ್ರೋಶ ಹೊರ ಹಾಕಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಮೆಟ್ರೊದ ಹಳದಿ ಮಾರ್ಗ ಉದ್ಘಾಟನೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿಯ ಯಾವೊಬ್ಬ ಸಂಸದರು ಕರ್ನಾಟಕಕ್ಕೆ, ಬೆಂಗಳೂರಿಗೆ ಅನುದಾನ ಕೊಡಿಸಿಲ್ಲ. ಕೇಂದ್ರದ ಯಾವುದೇ ಸಚಿವರನ್ನೂ ಭೇಟಿ ಮಾಡಿಲ್ಲ. ಕರ್ನಾಟಕದ ಪರ ದನಿ ಎತ್ತಿಲ್ಲ ಎಂದರು.

ನರೇಗಾದಲ್ಲೂ ನಮಗೆ ಬರಬೇಕಾದ ಹಣ ಬಂದಿಲ್ಲ. ನಾನು ರಾಜಕಾರಣ ಮಾಡಲು ಹೋಗುವುದಿಲ್ಲ. ಎಲೆಕ್ಟ್ರಾನಿಕ್ ಸಿಟಿ ಫ್ಲೈಓವರ್ ನಿರ್ಮಾಣವಾಗಿದ್ದು ಮನಮೋಹನ್‌ಸಿಂಗ್‌ರವರು ಪ್ರಧಾನಿಯಾಗಿದ್ದಾಗ ಎಂದರು.

ಬಿಜೆಪಿ ಸಂಸದರು ಇನ್ನಾದರೂ ಕರ್ನಾಟಕಕ್ಕೆ ಹೆಚ್ಚಿನ ಅನುದಾನ ಕೊಡಿಸುವತ್ತ ಗಮನ ಕೊಡಲಿ, ಟ್ವಿಟರ್‌ನಲ್ಲಿ, ಮಾಧ್ಯಮಗಳಲ್ಲಿ ಫೋಟೋ–ಸುದ್ದಿ ಹಾಕಿಸಿಕೊಂಡರೆ ಏನೂ ಸಾಧನೆಯಾಗಲ್ಲ.

ರಾಜ್ಯದ ಪರ ದನಿ ಎತ್ತಿ ಅನುದಾನ ಕೊಡಿಸಬೇಕು ಎಂದು ಆಗ್ರಹಿಸಿದರು.

ನಮ್ಮ ಮೆಟ್ರೊದ ಹಳದಿ ಮಾರ್ಗಕ್ಕೆ ರಾಜ್ಯದ ಪಾಲು ಶೇ. 80ರಷ್ಟಿದೆ. ಭೂಸ್ವಾಧೀನ ಎಲ್ಲವನ್ನು ನಾವೇ ಮಾಡಿಕೊಟ್ಟಿದ್ದೇವೆ. ಕೇಂದ್ರದ ಪಾಲು ಶೇ. 20 ರಷ್ಟು ಮಾತ್ರ. ನಿಜವಾಗಿ ಕೇಂದ್ರ ಶೇ. 50ರಷ್ಟು ಅನುದಾನ ಕೊಡಬೇಕಿತ್ತು. ಆದರೂ ಬಿಜೆಪಿಯವರು ಮೆಟ್ರೊ ನಮ್ಮದೇ ಎಂದು ಶೋ ಕೊಡುತ್ತಿದ್ದಾರೆ. ಪ್ರಧಾನಿ ಸ್ಥಾನಕ್ಕೆ ಗೌರವ ಕೊಟ್ಟು ಮೋದಿ ಅವರನ್ನು ಉದ್ಘಾಟನೆಗೆ ಕರೆದಿದ್ದೇವೆ ಎಂದರು.

ನಮ್ಮ ಮೆಟ್ರೊಗೆ ಶಂಕುಸ್ಥಾಪನೆ ಮಾಡಿದ್ದು ಆಗಿನ ಪ್ರಧಾನಿ ವಾಜಪೇಯಿ, ಆಗ ರಾಜ್ಯದಲ್ಲಿ ಎಸ್.ಎಂ ಕೃಷ್ಣ ಮುಖ್ಯಮಂತ್ರಿಯಾಗಿದ್ದರು ಎಂದರು.

# ಮೆಟ್ರೋ ಯಾವ ಪಕ್ಷದ ಸ್ವತ್ತಲ್ಲ



**ಬೆಂಗಳೂರು :** ಬೆಂಗಳೂರು ಮೆಟ್ರೊ ರೈಲು ಯೋಜನೆಯಲ್ಲಿ ರಾಜ್ಯಸರ್ಕಾರದ್ದೇ ದೊಡ್ಡ ಪಾಲಿದೆ. ಇಷ್ಟಾದರೂ ಬಿಜೆಪಿ ಮೆಟ್ರೊ ಕೇಂದ್ರ ಸರ್ಕಾರದ್ದು ಎಂದು ಪ್ರಚಾರ ಮಾಡುತ್ತಿದೆ. ಇದು ಸರಿಯಲ್ಲ, ಮೆಟ್ರೊ ಯಾವ ಪಕ್ಷದ ಸ್ವತ್ತಲ್ಲ, ಜನರ ಸ್ವತ್ತು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಕೆಪಿಸಿಸಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಳೆ ಮೆಟ್ರೊದ ಹಳದಿ ಮಾರ್ಗ ಉದ್ಘಾಟನೆಯಾಗುತ್ತಿದೆ ಮೆಟ್ರೊ ನಮ್ಮದೇ ಅಂತ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಸಂಸದ ತೇಜಸ್ವಿ ಸೂರ್ಯ ಹೇಳುತ್ತಿದ್ದಾರೆ.

ಬಿಜೆಪಿಯವರಿಗೆ ಮೆಟ್ರೊ ಇತಿಹಾಸವೇ ಗೊತ್ತಿಲ್ಲ. ಮೆಟ್ರೊ ಪ್ರಾರಂಭವಾದ್ದು ಮನಮೋಹನ್‌ಸಿಂಗ್ ಪ್ರಧಾನಿಯಾಗಿದ್ದಾಗ ಆಗ ನಾನು ಬೆಂಗಳೂರು ನಗರಾಭಿವೃದ್ಧಿ ಸಚಿವನಾಗಿದ್ದೆ. ಬಿಜೆಪಿಯವರಿಗೆ ಪ್ರಚಾರದ ಹುಚ್ಚು, ಮೆಟ್ರೊ ಮಾಡಿದ್ದು ನಾವೇ ಎಂದು ಹೇಳಿಕೊಳ್ಳುತ್ತಿದ್ದಾರೆ. ವಾಸ್ತವದಲ್ಲಿ ಮೆಟ್ರೊಗೆ ರಾಜ್ಯಸರ್ಕಾರದ ದೊಡ್ಡ ಪಾಲಿದೆ ಎಂದರು.

ಮೆಟ್ರೊ ಮೊದಲ ಹಂತಕ್ಕೆ ಭೂಮಿ ಸೇರಿ ರಾಜ್ಯಸರ್ಕಾರ ಶೇ. 30 ರಷ್ಟು ಹಣ ಕೊಟ್ಟಿದೆ. ಕೇಂದ್ರದ್ದು, ಶೇ. 25 ರಷ್ಟು ಮಾತ್ರ. ಉಳಿದ ಶೇ. 45 ಸಾಲದ ಮೂಲಕ ಪಡೆಯಲಾಗಿದೆ. ಹಾಗೆಯೇ ಮೆಟ್ರೊ 2ನೇ ಹಂತಕ್ಕೂ ರಾಜ್ಯಸರ್ಕಾರ ಶೇ. 30 ರಷ್ಟು ಹಣ ಒದಗಿಸಿದೆ. ಕೇಂದ್ರ ಸರ್ಕಾರ ಕೇವಲ 20 ರಷ್ಟು ಅನುದಾನ ನೀಡಿದೆ.


ಉಳಿದ 50ರಷ್ಟು ಹಣವನ್ನು ಸಾಲದ ಮೂಲಕ ಪಡೆದು ಮೆಟ್ರೊ ಪೂರ್ಣಗೊಳಿಸಲಾಗಿದೆ. ಹೀಗಿದ್ದರೂ ಕೇಂದ್ರದ ಸಚಿವರು, ಬಿಜೆಪಿ ಸಂಸದರು, ಕರ್ನಾಟಕಕ್ಕೆ ಮೆಟ್ರೊದ ಕ್ರೆಡಿಟ್ ಕೊಡದೆ ಇರುವುದು ಅಕ್ಷಮ್ಯ ಎಂದು ಬಿಜೆಪಿ ನಾಯಕರ ವಿರುದ್ಧ ಆಕ್ರೋಶ ಹೊರ ಹಾಕಿದರು.

# ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಇನ್ನೂ 6 ತಿಂಗಳ ಕಾಲ ವಿಸ್ತರಿಸಲು ಕೇಂದ್ರ ಸರ್ಕಾರ ಮುಂದು

## ರಾಜ್ಯಸಭೆಯಲ್ಲಿಂದು ನಿರ್ಣಯ ಮಂಡನೆ

**ಮಣಿಪುರ:** ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಇನ್ನೂ ಆರು ತಿಂಗಳ ಕಾಲ ವಿಸ್ತರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ರಾಜ್ಯಸಭೆಯಲ್ಲಿ ನಿರ್ಣಯ ಮಂಡಿಸಲಿದ್ದಾರೆ.

ರಾಜ್ಯಸಭೆಯು ಮಣಿಪುರ ವಿಚಾರ–ಕ್ಕೆ ಸಂಬಂಧಿಸಿದಂತೆ ಸಂವಿಧಾನದ 356 ನೇ ವಿಧಿಯ ಅಡಿಯಲ್ಲಿ ರಾಷ್ಟ್ರಪತಿಗಳು ಹೊರಡಿಸಿದ ಆದೇಶವನ್ನು ಮುಂದುವರೆಸಲು ಆಗಸ್ಟ್ 13, 2025 ರಿಂದ ಜಾರಿಗೆ ಬರುವಂತೆ ಆರು ತಿಂಗಳ ಅವಧಿಗೆ ನಿರ್ಣಯ ಅಂಗೀಕರಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿರ್ಣಯವು ಆಗಸ್ಟ್ 13ರಿಂದ



ಜಾರಿಗೆ ಬರಲಿದೆ.

ಫೆಬ್ರವರಿ 9 ರಂದು ಮುಖ್ಯಮಂತ್ರಿ ಸ್ಥಾನಕ್ಕೆ ಎನ್. ಬಿರೇನ್ ಸಿಂಗ್ ಅವರು ರಾಜೀನಾಮೆ ನೀಡಿದ ಬಳಿಕ ಮುಂದಿನ ಮುಖ್ಯಮಂತ್ರಿ ಕುರಿತು ಬಿಜೆಪಿಯಲ್ಲಿ ಒಮ್ಮತ ಮೂಡದ ಕಾರಣ ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಹೇರಲಾಯಿತು.

ಮೇ 2023 ರಲ್ಲಿ ಪ್ರಾರಂಭವಾದ ಹಿಂಸಾಚಾರದಲ್ಲಿ ಇಲ್ಲಿಯವರೆಗೆ 260 ಜನರು ಸಾವನ್ನಪ್ಪಿದ್ದು, ಶೇಕಡಾ 80 ರಷ್ಟು ಜನ ಹಿಂಸಾಚಾರ ಆರಂಭವಾದ ಒಂದೇ ತಿಂಗಳಲ್ಲಿ ಪ್ರಾಣ ಕಳೆದುಕೊಂಡಿದ್ದಾರೆಂದು ತಿಳಿದುಬಂದಿದೆ.

ಹಿಂಸಾಚಾರ ಹಿನ್ನೆಲೆಯಲ್ಲಿ ಬಿರೇನ್ ಸಿಂಗ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಕಳೆದ ಏಪ್ರಿಲ್ ತಿಂಗಳಿನಲ್ಲಿ ಮಣಿಪುರ ರಾಜ್ಯದ ಬಿಜೆಪಿ ಶಾಸಕರು ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದು, ಸರ್ಕಾರ ಆಡಳಿತ ನಡೆಸುವಂತೆ ಮಾಡಬೇಕೆಂದು ಒತ್ತಾಯಿಸಿದ್ದರು.

ಕೆಲ ಶಾಸಕರು ರಾಷ್ಟ್ರಪತಿ ಆಡಳಿತವನ್ನು ಸ್ವಾಗತಿಸಿದ್ದರೆ, ಇನ್ನೂ ಕೆಲ ಶಾಸಕರು, ಶಾಂತಿ ಸ್ಥಾಪಿಸುವಲ್ಲಿ ಯಾವುದೇ ಪ್ರಮುಖ ಕ್ರಮ ಕೈಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆಂದು ತಿಳಿದುಬಂದಿದೆ.

ಹಿಂಸಾಚಾರ ಮತ್ತೆ ಎದುರಾಗಬಹುದು ಎಂಬ ಆತಂಕ ಸ್ಥಳೀಯ ಜನರಲ್ಲಿದೆ. ರಾಷ್ಟ್ರಪತಿ ಆಡಳಿತ ಹೇರಿಕೆಗೆ ಹಲವಾರು ನಾಗರಿಕ ಸಮಾಜ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ. ಹೀಗಾಗಿ ಸರ್ಕಾರ ಆಡಳಿತ ನಡೆಸುವಂತೆ ಮಾಡಲು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

# ಮದ್ಯ ಸೇವಿಸಲು ಹಣ ನೀಡದ ಪತ್ನಿಯನ್ನು ಮಚ್ಚಿನಿಂದ ಕೊಚ್ಚಿ ಕೊಂದ ಪತಿ



**ಮೈಸೂರು, ಆ.18–** ಕುಡಿಯಲು ಹಣ ನೀಡದ ಪತ್ನಿಯನ್ನು ಮಚ್ಚಿನಿಂದ ಹಲ್ಲೆಗೈದು ಭೀಕರವಾಗಿ ಕೊಲೆ ಮಾಡಿರುವ ಘಟನೆ ವಿಜಯನಗರ ಪೊಲೀಸ್ ಠಾಣಾ ವ್ಯಾಪ್ತಿಯ ಮಹದೇಶ್ವರಿ ಬಡಾವಣೆಯಲ್ಲಿ ನಡೆದಿದೆ. ಗಾಯತ್ರಿ ಪತಿಯಿಂದ ಕೊಲೆಯಾದ ಪತ್ನಿ.

ಈ ಹಿಂದೆ ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದ ಪಾಪಣ್ಣ ಸಾಲಗಾರನಾಗಿದ್ದು, ಜೊತೆಗೆ ಕುಡಿತದ ದಾಸನಾಗಿದ್ದ. ಕೆಲಸವಿಲ್ಲದೆ ಅಲೆದಾಡುತ್ತಿದ್ದ ಪಾಪಣ್ಣ ಹಣಕ್ಕಾಗಿ ಪತ್ನಿ ಹಾಗೂ ಮಕ್ಕಳನ್ನು ಪೀಡಿಸುತ್ತಿದ್ದ. ಇದಕ್ಕೆ ಮಕ್ಕಳು ಹಾಗೂ ಪತ್ನಿ ಹಲವು ಬಾರಿ ಬುದ್ದಿವಾದ ಹೇಳಿದ್ದರು. ಈಗಲೇ ಮದುವೆಯ ಸಾಲವಿದೆ. ನಿನಗೆ ಕುಡಿಯಲು ಹಣ ಎಲ್ಲಿಂದ ಕೊಡಲು ಸಾಧ್ಯ ಎಂದಿದ್ದರು.

### ವಿಶ್ವವಿಖ್ಯಾತ ಜಂಬೂಸವಾರಿ

# ಸಕಲ ಸಿದ್ಧತೆಯಲ್ಲಿ ಸರ್ಕಾರ



**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾದ ಪ್ರಮುಖ ಆಕರ್ಷಣೆ ಜಂಬೂ ಸವಾರಿಗೆ ಕ್ಷಣಗಣನೆ ಆರಂಭವಾಗಿದ್ದು, ಸಕಲ ಸಿದ್ಧತೆ ಪೂರ್ಣಸಿದ್ಧತೆ ಪೂರ್ಣಗೊಂಡಿದೆ.

ಸತತ 6ನೇ ಬಾರಿಗೆ ಅಭಿಮನ್ಯು ಆನೆಯು ತಾಯಿ ಚಾಮುಂಡೇಶ್ವರಿ ವಿಗ್ರಹ ಇರುವ ಚಿನ್ನದ ಅಂಬಾರಿಯನ್ನು ಹೊರುತ್ತಿದ್ದು, ಸತತ 5 ಬಾರಿ 750 ಕೆ.ಜಿ. ಚಿನ್ನದ ಅಂಬಾರಿ ಹೊತ್ತಿರುವ ಅಭಿಮನ್ಯು ಆನೆ ಈಗ 4ನೇ ಬಾರಿಗೆ ಅಂಬಾರಿ ಹೊರಲು ಸರ್ವ ಸನ್ನದ್ಧವಾಗಿದೆ. ಈ ಬಾರಿ ಅಭಿಮನ್ಯು ಆನೆಯೊಂದಿಗೆ ಒಟ್ಟು 14 ಆನೆಗಳು ಜಂಬೂ ಸವಾರಿಯಲ್ಲಿ ಹೆಜ್ಜೆ ಹಾಕಲಿವೆ.

ಈ ಬಾರಿಯ ದಸರಾ ಮಹೋತ್ಸವಕ್ಕೆ 14 ಆನೆಗಳು ಆಯ್ಕೆಯಾಗಿದ್ದು, ಈ ಪೈಕಿ ಮೊದಲ ತಂಡದಲ್ಲಿ ಆಗಮಿಸಲಿರುವ 9 ಆನೆಗಳ ಪಟ್ಟಿಯನ್ನು ಅರಣ್ಯ ಇಲಾಖೆ ಗುರುವಾರ ಬಿಡುಗಡೆ ಗೊಳಿಸಿದೆ. ಮೊದಲ ತಂಡದಲ್ಲಿ 7 ಗಂಡಾನೆ ಹಾಗೂ 2 ಹೆಣ್ಣಾನೆಗಳಿವೆ.

ಮತ್ತಿಗೋಡು ಶಿಬಿರದಲ್ಲಿರುವ ಅಭಿಮನ್ಯು (59 ವರ್ಷ), ಮತ್ತಿಗೋಡು ಶಿಬಿರದ ಭೀಮ (25 ವರ್ಷ), ದುಬಾರೆ ಶಿಬಿರದ ಕಂಜನ್ (24), ಧನಂಜಯ (44), ಪ್ರಶಾಂತ್ (53), ಬಳ್ಳೆ ಶಿಬಿರದ ಮಹೇಂದ್ರ (42), ದೊಡ್ಡಹರವೆ ಶಿಬಿರದ ಏಕಲವ್ಯ (40), ದುಬಾರೆ ಶಿಬಿರದ ಕಾವೇರಿ (45/ಹೆಣ್ಣಾನೆ), ಬಳ್ಳೆಯ ಲಕ್ಷ್ಮೀ (53/ಹೆಣ್ಣಾನೆ) ಆನೆಗಳು ಮೈಸೂರಿಗೆ ಆಗಮಿಸಲಿವೆ.

ನಾಗರಹೊಳೆಯ ಮತ್ತಿಗೋಡು ಶಿಬಿರದಲ್ಲಿರುವ 59 ವರ್ಷ ವಯಸ್ಸಿನ ಅಭಿಮನ್ಯು ಈವರೆಗೆ 300ಕ್ಕೂ ಹೆಚ್ಚು ಆನೆ ಸೆರೆ ಕಾರ್ಯಾಚರಣೆ ಹಾಗೂ 80ಕ್ಕೂ ಹೆಚ್ಚು ಹುಲಿ ಸೆರೆ ಕಾರ್ಯಾಚರಣೆಯಲ್ಲಿಪಾಲ್ಗೊಂಡಿರುವ ಪ್ರಮುಖ ಕುಮ್ಕಿ ಆನೆ ಎಂದೇ ಖ್ಯಾತಿ ಪಡೆದಿದೆ. ಅಭಿಮನ್ಯು ಒಂಬತ್ತು ಅಡಿ ಎತ್ತರ ಮತ್ತು 4,920 ಕೆಜಿ ತೂಕವನ್ನು ಹೊಂದಿದ್ದಾನೆ, ತಲಾ 2.75 ಮೀಟರ್ ಗಾತ್ರದ ದಂತಗಳನ್ನು ಹೊಂದಿದ್ದಾನೆ.

ಎರಡನೇ ಹಂತದಲ್ಲಿ 5 ಆನೆಗಳನ್ನು ಕಾಡಿನಿಂದ ಮೈಸೂರಿಗೆ ತರಲಾಗುವುದು. ಕಾಡಿನಿಂದ ನಾಡಿಗೆ ಬರುವ ಈ ಆನೆಗಳಿಗೆ ಆ.4ರಂದು ಹುಣಸೂರು ಬಳಿಯ ವೀರನಹೊಸಳ್ಳಿಯಿಂದ ನಡೆಯುವ ಗಜಪಯಣದಲ್ಲಿ ವಿಧ್ಯುಕ್ತ ಮತ್ತು ಸಾಂಪ್ರದಾಯಿಕವಾಗಿ ಬೀಳ್ಕೊಡಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಎಸಿ ಭೇಟಿ: ಪರಿಶೀಲನೆ




**ದಾವಣಗೆರೆ :** ತಾಲ್ಲೂಕಿನಲ್ಲಿ ಯೂರಿಯಾ ರಸಗೊಬ್ಬರ ಕೊರತೆಯಿಂದ ರೈತರು ಆಕ್ರೋಶ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ, ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಮತ್ತು ತಹಶೀಲ್ದಾರ್ ಡಾ. ಅಶ್ವತ್ಥ್ ಎಂ.ಬಿ. ನೇತೃತ್ವದಲ್ಲಿ ಅಧಿಕಾರಿಗಳ ತಂಡವು ಗುರುವಾರ ನಗರ ಮತ್ತು ಆನಗೋಡು ಹೋಬಳಿಯ ವಿವಿಧ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ, ಯೂರಿಯಾ ರಸಗೊಬ್ಬರ ದಾಸ್ತಾನು ಪರಿಶೀಲನೆ ನಡೆಸಿತು.

ಜಿಲ್ಲಾಧಿಕಾರಿಗಳ ಸೂಚನೆಯಂತೆ, ಉಪವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರರು ಹಲವು ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ, ಪೂರೈಕೆಯಾಗಿರುವ ರಸಗೊಬ್ಬರದ ಪ್ರಮಾಣ, ಮಾರಾಟವಾದ ಪ್ರಮಾಣ ಮತ್ತು ಉಳಿದ ದಾಸ್ತಾನಿನ ಬಗ್ಗೆ ಮಾರಾಟಗಾರರನ್ನು ಪ್ರಶ್ನಿಸಿ ವಿವರವಾದ ಮಾಹಿತಿ ಸಂಗ್ರಹಿಸಿದರು. ತಾಲೂಕಿಗೆ ಪೂರೈಕೆಯಾಗಿರುವ ಯೂರಿಯಾ ರಸಗೊಬ್ಬರವನ್ನು ಜಿಲ್ಲೆಯಿಂದ ಹೊರಗಡೆಗೆ ಕಳುಹಿಸುತ್ತಿರುವುದು ಕಂಡುಬಂದಿದ್ದು, ಇದನ್ನು ತಕ್ಷಣ ನಿಲ್ಲಿಸುವಂತೆ ಸೂಚಿಸಲಾಯಿತು.

ಅಧಿಕಾರಿಗಳು ಜಿಲ್ಲೆಯ ರೈತರಿಗೆ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಜೊತೆಗೆ, ಹರಳು ರೂಪದ ಯೂರಿಯಾ ಬದಲಾಗಿ ನ್ಯಾನೋ ಯೂರಿಯಾದ ಬಳಕೆಯ ಪ್ರಯೋಜನಗಳ ಬಗ್ಗೆ ರೈತರಿಗೆ ಮನವರಿಕೆ ಮಾಡಿ, ಅದರ ಬಳಕೆಗೆ ಪ್ರೋತ್ಸಾಹಿಸುವಂತೆ ಮಾರಾಟಗಾರರಿಗೆ ತಿಳಿಸಿದರು. ಭೌತಿಕ ರಸಗೊಬ್ಬರ ದಾಸ್ತಾನು ಮತ್ತು ಪಿಓಎಸ್ (ಪಾಯಿಂಟ್ ಆಫ್ ಸೇಲ್) ದಾಸ್ತಾನಿನಲ್ಲಿ ಯಾವುದೇ ವ್ಯತ್ಯಾಸವಿರಬಾರದೆಂದು ಎಚ್ಚರಿಕೆ ನೀಡಿದರು.

ಈ ಭೇಟಿಯ ಸಂದರ್ಭದಲ್ಲಿ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಡಿ.ಎಂ., ಕೃಷಿ ಅಧಿಕಾರಿಗಳಾದ ಸಂಜೀವ್ ಕುಮಾರ್ ಆರ್., ಹುಣಸಿಹಳ್ಳಿ ಚಂದ್ರಪ್ಪ, ಶ್ರೀನಿವಾಸ ಆರ್. ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.


# ಸತ್ಯದ ಆಚರಣೆ ಮಾಡುವವರ ಬದುಕು ಎತ್ತರದಲ್ಲಿರುತ್ತದೆ

## ಹೊಳೆಸಿರಿಗೆರೆ : ಸತ್ಯನಾರಾಯಣ ಪೂಜೆಯ ಧಾರ್ಮಿಕ ಸಭೆಯಲ್ಲಿ ರಟ್ಟೀಹಳ್ಳಿ ಸ್ವಾಮೀಜಿ

**ಮಲೇಬೆನ್ನೂರು :** ಮಹಿಳೆ ಭೂಮಿ ಇದ್ದಂತೆ, ಭೂಮಿಯಂತೆ ಅವಳಿಗೂ ಎಲ್ಲವನ್ನು ಸಹಿಸುವ ಶಕ್ತಿ ಇದೆ. ಹಾಗಾಗಿಯೇ ಅವಳು ಉಪವಾಸ, ವ್ರತ, ಪೂಜೆ, ಆಚರಣೆಗಳ ಮೂಲಕ ನಮಗೆಲ್ಲಾ ಒಳ್ಳೆಯದನ್ನೇ ಬಯಸುತ್ತಾಳೆ ಎಂದು ರಟ್ಟೀಹಳ್ಳಿ ಕಬ್ಬಿಣಕಂತಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಹೊಳೆಸಿರಿಗೆರೆ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಬುಧವಾರ ಸಾಮೂಹಿಕ ಸತ್ಯನಾರಾಯಣ ಪೂಜೆ ಅಂಗವಾಗಿ ಹಮ್ಮಿಕೊಂಡಿದ್ದ ಧಾರ್ಮಿಕ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಆಷಾಢ ಮಾಸದಲ್ಲಿ ಪೂಜೆಗಳು ಮತ್ತು ಶ್ರಾವಣ ಮಾಸದಲ್ಲಿ ವ್ರತಾಚರಣೆಗಳು ಹೆಚ್ಚು ನಡೆಯಲಿದ್ದು ವಾರಕ್ಕೊಮ್ಮೆ ಉಪವಾಸ ವ್ರತ ಮಾಡುವುದರಿಂದ ಮನಸ್ಸಿಗೆ ಮತ್ತು ಶರೀರಕ್ಕೆ ರೋಗ ನಿರೋಧಕ ಶಕ್ತಿ ಹೆಚ್ಚಾಗಿ



ಆಯುಸ್ಸು ವೃದ್ಧಿಯಾಗಲಿದೆ. ವಿಷ್ಣುವಿನ ಸ್ವರೂಪ ಸತ್ಯನಾರಾಯಣನಾಗಿದ್ದು ಅವನ ಪೂಜೆಯಿಂದ ಹೆಚ್ಚು ಫಲ ಸಿಗಲಿದೆ. ಅದರಲ್ಲೂ ಸಾಮೂಹಿಕ ಸತ್ಯನಾರಾಯಣ ಪೂಜೆಯಿಂದ ಗ್ರಾಮದಲ್ಲಿ ಶಾಂತಿ, ಸಾಮರಸ್ಯ ನೆಲೆಸಲಿದೆ. ಸತ್ಯ ಎಲ್ಲಾ ಧರ್ಮಕ್ಕೂ ಮೂಲವಾಗಿದ್ದು, ಸತ್ಯದ ಮಹತ್ವ ಗೊತ್ತಿದ್ದರೂ ನಾವು ಸುಳ್ಳಿನ ಸರಮಾಲೆಯನ್ನು ಕಟ್ಟಿಕೊಂಡಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದ ಸ್ವಾಮೀಜಿ, ಸತ್ಯದ ಆಚರಣೆ ಮಾಡುವವರ ಬದುಕು ಬಹಳ ಎತ್ತರದಲ್ಲಿರುತ್ತದೆ ಎಂದು ಕಳ್ಳ ಮತ್ತು ರಾಜನ ಕಥೆ ಹೇಳಿ ಸಭೆಯ ಗಮನ ಸೆಳೆದರು. ಸತ್ಯವನ್ನು ಮಾತನಾಡಬೇಕಾದರೆ ಮೊದಲು ನಾವು ಮೌನವಾಗಿರುವುದನ್ನು ಕಲಿಯಬೇಕು. ಮೌನದಿಂದ ಶಕ್ತಿ, ಚೈತನ್ಯದ ಜೊತೆಗೆ ಉತ್ತಮ ಸಾಧನೆ ಕೂಡಾ ಸಾಧ್ಯ ಎಂದು ಪ್ರತಿಪಾದಿಸಿದರು.

ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ ಪ್ರಾಸ್ತಾವಿಕವಾಗಿ ಮಾತನಾಡಿ, ದುಡ್ಡು ಇಲ್ಲದವನು ಬಡವನಲ್ಲ, ಗುರಿ ಮತ್ತು ಕನಸು ಇಲ್ಲದವನು ನಿಜವಾದ ಬಡವ ಎಂಬ ವೀರೇಂದ್ರ ಹೆಗ್ಗಡೆ ಅವರ ಮಾತನ್ನು ಉಲ್ಲೇಖಿಸಿದರು. ದುಡಿಮೆ ಮತ್ತು ಉಳಿತಾಯದಿಂದ ಮಾತ್ರ ನಾವು ಅಭಿವೃದ್ಧಿ ಸಾಧಿಸಲು ಸಾಧ್ಯ ಎಂದರು.

ಅಧ್ಯಾತ್ಮಿಕ ಚಿಂತಕ ಡಿ.ಕೆ. ಸಿದ್ದೇಶ್, ಗ್ರಾಮದ ಮುಖಂಡ ಎಂ.ಜಿ. ಪರಮೇಶ್ವರ ಗೌಡ, ವಕೀಲ ಕೆ.ಎನ್. ಹಳ್ಳಿ ನಾಗನಗೌಡ, ಪ್ರಗತಿಪರ ಕೃಷಿಕ ಕುಂದೂರು ಮಂಜಪ್ಪ ಮಾತನಾಡಿದರು.

ಗ್ರಾಮದ ಹಿರಿಯ ಮುತ್ಸದ್ಧಿ ಎನ್.ಜಿ. ನಾಗನಗೌಡ್ರು ಸಮಾರಂಭವನ್ನು ಉದ್ಘಾಟಿಸಿದರು. ಗ್ರಾ.ಪಂ. ಅಧ್ಯಕ್ಷ ಬಂಡೇರ ಪ್ರಭು ಅಧ್ಯಕ್ಷತೆ ವಹಿಸಿದ್ದರು.

ಚಾಮರಾಜನಗರ ಶ್ರೀ ಶಿವಮೂರ್ತಿ ಸ್ವಾಮೀಜಿ, ಜಿಲ್ಲಾ ಜನ ಜಾಗೃತಿ ವೇದಿಕೆಯ ಉಪಾಧ್ಯಕ್ಷ ಕೊಮಾರನಹಳ್ಳಿಯ ಜಿ. ಮಂಜುನಾಥ್ ಪಟೇಲ್, ಸದಸ್ಯರಾದ ಜಿಗಳಿ ಪ್ರಕಾಶ್, ಕೊಕ್ಕನೂರಿನ ಹನುಮಂತರಾಯ, ಮಲೇಬೆನ್ನೂರಿನ ನಂದಿ ಬ್ಯಾಂಕ್ ಮಾಜಿ ಅಧ್ಯಕ್ಷ ಬಿ. ವೀರಯ್ಯ, ಗ್ರಾ.ಪಂ. ಸದಸ್ಯ ಹೊಸಳ್ಳಿ ನಾಗಪ್ಪ ಹಾ.ಉ. ಸಂಘದ ಅಧ್ಯಕ್ಷ ಬ್ಯಾಲದಹಳ್ಳಿ ಶಿವಕುಮಾರ್, ಮಾಜಿ ಯೋಧ ಪರಶುರಾಮ್, ಎನ್.ಜಿ. ಮಹಾಂತೇಶ್, ಕೆ.ಎನ್. ಹಳ್ಳಿಯ ಜಿ.ಕೆ. ಶಿವರಾಜ್, ಸಾಹಿತಿ ಪಾಳ್ಯದ ನಾಗೇಂದ್ರಪ್ಪ ಸೇರಿದಂತೆ ಹೊಳೆಸಿರಿಗೆರೆ ವಲಯದ ಒಕ್ಕೂಟ ಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಈ ವೇಳೆ ಗ್ರಾಮದ ಹಿರಿಯರಾದ ಮಾಗೋಡ್ ನಂಜುಂಡಪ್ಪ, ಮಹಾದೇವಮ್ಮ, ವಿದ್ಯಾರ್ಥಿ ಚಿರಂಜೀವಿ ಅವರನ್ನು ಗೌರವಿಸಲಾಯಿತು. ಕು. ವರ್ಷಿಣಿ ಯ. ಭರತ ನಾಟ್ಯ ಎಲ್ಲರ ಮನಸೂರೆಗೊಂಡಿತು.

ವಲಯ ಮೇಲ್ವಿಚಾರಕ ರಂಗಸ್ವಾಮಿ ಅವರು ವಲಯದ ಪ್ರಗತಿ ವರದಿಯನ್ನು ಓದಿ ತಿಳಿಸಿದರು.

ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿ ವಸಂತ್ ದೇವಾಡಿಗ ಸ್ವಾಗತಿಸಿದರು. ಗಂಗಾಧರ್ ಪೂಜಾರ್ ವಂದಿಸಿದರು.

# ನೆಮ್ಮದಿ ನೀಡದ ಕೃತಕ ಜೀವನದಿಂದ ಹೊರಬನ್ನಿ: ಡಿಸ್ಟ್ರಿಕ್ ಜಡ್ಜ್ ಡಿ.ಕೆ.ವೇಲಾ

**ದಾವಣಗೆರೆ:** ಭಾರತದ ಇತಿಹಾಸವನ್ನು ಇಂದಿನ ಯುವಪೀಳಿಗೆ ಅಧ್ಯಯನ ಮಾಡುವ ಮೂಲಕ ನೆಮ್ಮದಿ ನೀಡದ ಕೃತಕ ಜೀವನದಿಂದ ಹೊರಬಂದು ಜೀವನದ ಬಗ್ಗೆ ಪುನರಾಲೋಚಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ ಕರೆ ನೀಡಿದರು.

ನಗರದ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಜಿಲ್ಲಾ ವಕೀಲರ ಸಂಘ ಆಯೋಜಿಸಿದ್ದ 79ನೇ ಸ್ವಾತಂತ್ರ್ಯ ದಿನಾಚರಣೆ, ಹೆಚ್.ಸಿದ್ದವೀರಪ್ಪ ಭಾವಚಿತ್ರ ಅನಾವರಣ, ಪ್ರತಿಭಾ ಪುರಸ್ಕಾರ, ವಕೀಲರ ನೂತನ ಡೈರಕ್ಟರಿಯನ್ನು ಬಿಡುಗಡೆ ಮಾಡಿ, ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಸಂವಿಧಾನವನ್ನು ರಚಿಸುವ ಸಂದರ್ಭದಲ್ಲಿ ಸಭೆಯಲ್ಲಿದ್ದ ಗಣ್ಯಮಾನ್ಯ ಸದಸ್ಯರು ಪ್ರತಿಪದವನ್ನು ಅತ್ಯಂತ ಜಾಗರೂಕತೆ, ವಿವೇಚನೆಯಿಂದ ಬಳಸಿ ಸಂವಿಧಾನ ರಚಿಸಿದ್ದಾರೆ. ಜೀವಿಸುವ ಹಕ್ಕು, ಶುದ್ದ ಗಾಳಿ, ಒಳ್ಳೆಯ ಕುಡಿಯುವ ನೀರು, ನಿರ್ಮಲ ವಾತಾವರಣವನ್ನು ಸಹ ಒಳಗೊಳ್ಳುತ್ತದೆ ಎಂದು ಸುಪ್ರೀಂಕೋರ್ಟಿನ ಅರ್ಥವಿವರಣೆಯನ್ನು ನೀಡಿದೆ. ಆ ಮೂಲಕ ಈ ಹಕ್ಕಿನ ವ್ಯಾಪ್ತಿಯನ್ನು ವಿವರಿಸಿದರು.

ಮಕ್ಕಳ ಸ್ನೇಹಿ ನ್ಯಾಯಾಲಯದ ಜಿಲ್ಲಾ ನ್ಯಾಯಾಧೀಶರಾದ ಶ್ರೀರಾಮ ನಾರಾಯಣ ಹೆಗಡೆ ಮಾತನಾಡಿ, ಆರಂಭದಿಂದಲೂ ದೇಶದ ಬಗ್ಗೆ ಚಿಂತನೆ ಮಾಡಿದವರು ವಕೀಲರೇ, ಆದ್ದರಿಂದಲೇ ವಕೀಲರು ನಮ್ಮ ದೇಶದ ಸ್ವಾತಂತ್ರ್ಯ ಚಳುವಳಿಯಲ್ಲಿ ಮುಂಚೂಣಿಯಲ್ಲಿದ್ದರು. ಆದರೆ, ಸ್ವಾರ್ಥಿಗಳಿಂದ ಇಂದು ರಾಷ್ಟ್ರದ ಪ್ರಗತಿಗೆ ಅಡ್ಡಿ ಆಗುತ್ತಿದ್ದು, ರಾಷ್ಟ್ರದ ರಾಜಕೀಯ ಪ್ರಧಾನ ಭೂಮಿಕೆಯಲ್ಲಿ ವಕೀಲರು ಮತ್ತೆ ಮುಂದೆ ಬರಬೇಕಾಗಿದೆ ಎಂದು ಕರೆ ನೀಡಿದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್, ಭಾರತದ ಸಂವಿಧಾನ ರಚನಾ ಸಭೆಯಲ್ಲಿ ಒಟ್ಟು 99 ಜನ ವಕೀಲರಿದ್ದರು. ಅವರಲ್ಲಿ ನಮ್ಮ ವಕೀಲರ ಸಂಘದ ಸದಸ್ಯರಾಗಿದ್ದ ಹೆಚ್.ಸಿದ್ದವೀರಪ್ಪ ಸಹ ಒಬ್ಬರು ಎನ್ನುವುದು ಹೆಗ್ಗಳಿಕೆಯ ಸಂಗತಿ. ಸಿದ್ದವೀರಪ್ಪನವರು ಸರ್ವ ಜನರ ಪ್ರೀತಿಗೆ ಪಾತ್ರರಾಗಿದ್ದರು. ಕರ್ನಾಟಕ ಸರ್ಕಾರದಲ್ಲಿ ಗೃಹಖಾತೆ ಸೇರಿದಂತೆ ಹಲವಾರು ಮಹತ್ತರ ಖಾತೆಗಳನ್ನು ನಿರ್ವಹಿಸಿ, ಕಾನೂನು ಸಚಿವರಾದ ಸಂದರ್ಭದಲ್ಲಿ ಹಲವು ಮಹತ್ವದ ಮಸೂದೆಗಳನ್ನು ಮಂಡಿಸಿ ಶಾಸನಗಳನ್ನಾಗಿ ಮಾಡಿರುವುದು ಇತಿಹಾಸದ ಅವಲೋಕನ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ವಕೀಲರಾದ ಕೆ.ಎಂ.ಮಲ್ಲಿಕಾರ್ಜುನ್, ಕೆ.ಹೆಚ್. ಮಂಜಪ್ಪ, ಎನ್.ಎಂ.ಆಂಜನೇಯ, ಬಿ.ಎಂ. ಹನುಮಂತಪ್ಪ, ವಿನಯ್‌ಕುಮಾರ್, ರಜ್ವಿಖಾನ್ ಮಾತನಾಡಿದರು. ಈ ವೇಳೆ ವಕೀಲರಾದ ಕೆ.ಎಂ.ಜಯಪ್ರಕಾಶ್ ಅವರು, ಹೆಚ್.ಸಿದ್ದವೀರಪ್ಪನವರು ಸಂವಿಧಾನ ಸಭೆಯಲ್ಲಿ ಜಮೀನ್ದಾರಿ ಪದ್ಧತಿ ರದ್ದತಿ ಬಗ್ಗೆ ತಿದ್ದುಪಡಿ ಮಂಡಿಸಿ ಮಾಡಿದ ಭಾಷಣ ವಾಚಿಸಿದರು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿದ ವಕೀಲರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಸಿಜೆಎಂ ಆದ ಹೆಚ್.ಕೆ.ರೇಷ್ಮಾ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜ್, ಸಹಕಾರ್ಯದರ್ಶಿ ಎ.ಎಸ್.ಮಂಜುನಾಥ್ ವೇದಿಕೆಯಲ್ಲಿ ಇದ್ದರು.

# ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ



ಹಿಂದೂ ಧರ್ಮಿಯರಿಗೆ ಶ್ರಾವಣ ಮಾಸವು ಒಂದು ವಿಶೇಷವಾದ ಮಾಸವಾಗಿದ್ದು ನಾವುಗಳು ಉತ್ತಮ ವಿಚಾರಧಾರೆಗಳ ಚಿಂತನೆ ಮಾಡಬೇಕು ಎಂದು ಹಾಲಸ್ವಾಮಿ ವಿರಕ್ತ ಮಠದ ಡಾ. ಬಸವಜಯಚಂದ್ರ ಸ್ವಾಮಿಗಳು ಹೇಳಿದರು.


ಭಾನುವಾರ ಪಟ್ಟಣದ ಹಾಲಸ್ವಾಮಿ ವಿರಕ್ತ ಮಠದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರಾವಣ ಮಾಸದ ಒಂದು ತಿಂಗಳ ಪುರಾಣ ಪ್ರವಚನ ಮತ್ತು ಹಿರಿಯ ಶ್ರೀಗಳ ಸ್ಮರಣೆ ಕಾರ್ಯಕ್ರಮಗಳ ಅಂಗವಾಗಿ ಮಹಿಳೆಯರಿಗೆ ಊಡಿ ತುಂಬುವ ಕಾರ್ಯಕ್ರಮದ ಸಾನಿಧ್ಯವನ್ನು ವಹಿಸಿ ಮಾತನಾಡಿ ಶ್ರೀ ಮಠದ ವತಿಯಿಂದ ಕಳೆದ 5 ವರ್ಷಗಳಿಂದ ನಿರಂತರವಾಗಿ ಹೆಣ್ಣು ಮಕ್ಕಳಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ. ಶ್ರಾವಣ ಮಾಸದಲ್ಲಿ ಮನೆಯ ಹೆಣ್ಣು ಮಕ್ಕಳಿಗೆ ಬಾಗಿನ ಕೊಡುವ ಕಾರ್ಯವನ್ನು ಮಾಡುತ್ತಾರೆ. ಅದರಂತೆ ಮಠವು ಸಹ ಸಮಾಜದ ಎಲ್ಲಾ ಮಹಿಳೆಯರಿಗೆ ಒಂದೇ ವೇದಿಕೆಯಲ್ಲಿ ಕೂರಿಸುವ ಮೂಲಕ ವಿಶೇಷವಾಗಿ ಲಕ್ಷ್ಮಿ ಪೂಜೆಯನ್ನು ಮಾಡುವ ಮೂಲಕ ಸಾಮೂಹಿಕವಾಗಿ ಉಡಿ ತುಂಬುವ ಕಾರ್ಯವನ್ನು ಮಾಡಲಾಗುತ್ತಿದೆ. ಶ್ರೀ ಮಠವು ಒಂದು ಧರ್ಮ ಜಾತಿಗೆ ಸೀಮಿತವಾಗದೇ ಎಲ್ಲಾ ಧರ್ಮಿಯರನ್ನು ಭಾವನಾತ್ಮಕವಾಗಿ ಬೆಸೆಯುವ ಕಾರ್ಯವನ್ನು ಮಾಡುತ್ತಿದೆ ಇಂದು ಸುಮಾರು 800 ಜನಕ್ಕೂ ಹೆಚ್ಚು ಮಹಿಳೆಯರು ಈ ಕಾರ್ಯಕ್ರಮದಲ್ಲಿ ಬಾಗವಹಿಸಿದ್ದು 23 ರ ಶ್ರಾವಣ ಮಾಸದ ಶನಿವಾರದ ಕಾರ್ಯಕ್ರಮದ ಸಲುವಾಗಿ ಕೋಡಿಶ್ರೀಗಳು ಮಠಕ್ಕೆ ಆಗಮಿಸಲಿದ್ದು ಭಕ್ತಾದಿಗಳು ಶ್ರೀಗಳ ದರ್ಶನ ಪಡೆಯಬಹುದು ಎಂದರು.

ಶ್ರೀ ದೈವ ಸಂಸ್ಕೃತಿ ಪ್ರತಿಷ್ಠಾನದ ಅದ್ಯಕ್ಷರಾದ ಬೂದಿಸ್ವಾಮಿ ಮಾತನಾಡಿ ಮಠದಲ್ಲಿ ಪ್ರತಿ ವರ್ಷವು ಹಮ್ಮಿಕೊಳ್ಳುವ ಈ ಕಾರ್ಯಕ್ರಮವು ತಾಲೂಕಿನಲ್ಲಿ ಏಕೈಕ ಮಠದಲ್ಲಿ ಹಮ್ಮಿಕೊಳ್ಳುವ ಮಠವಾಗಿದೆ. ಮಹಿಳೆಯರಿಗೆ ತಾಯಿ ಮನೆಯಿಂದ ನೀಡುವಂತಹ ಬಾಗಿನವನ್ನು ನೀಡುವಂತಹ ಮಾತೃ ಹೃದಯವನ್ನು ಶ್ರೀಗಳು ಹೊಂದಿದ್ದಾರೆ ಎಂದರು.

ಕೋಡಿ ಮಠದಿಂದ ಆಗಮಿಸಿದ್ದ ಶಿವಾನಿ ಮಾತನಾಡಿ ಕೋಡಿ ಮಠದಲ್ಲಿ ಶ್ರೀಗಳು ಈ ಕಾರ್ಯಕ್ರಮವನ್ನು ನಡೆಸಿಕೊಂಡು ಬಂದಿದ್ದು ಉಡಿ ತುಂಬುವ ಕಾರ್ಯಕ್ರಮದ ಮಠ ಎರಡನೆಯದ್ದಾಗಿದೆ. ಮಠಗಳು ಮನುಷ್ಯರಲ್ಲಿ ಆದ್ಯಾತ್ಮಿಕ ಚಿಂತನೆಗಳು ಮತ್ತು ಸಂಸ್ಕಾರವನ್ನು ತುಂಬುವ ಪ್ರಯತ್ನ ಮಾಡುತ್ತಿವೆ ಎಂದರು.

ಬಿಜೆಪಿ ಮುಖಂಡ ನವೀನ್ ಮಾತನಾಡಿ ಮಠದಲ್ಲಿ ಹಮ್ಮಿಕೊಳ್ಳುವಂತಹ ಈ ಕಾರ್ಯಕ್ರಮದಲ್ಲಿ ನನಗೆ ಮಹಿಳಯರಿಗೆ ಊಡಿ ಕೊಡಿಸುವ ಅವಕಾಶವನ್ನು ಕಲ್ಪಿಸಿರುವುದು ನನ್ನ ಬಾಗ್ಯ ಅದರಂತೆ ಮುಂದಿನ ದಿನಗಳಲ್ಲಿಯೂ ಇಂತಹ ಆವಕಾಶ ಕಲ್ಪಿಸಿದರೆ ಸೇವೆಯನ್ನು ಮಾಡಲು ಸಿದ್ದ ಎಂದರು. ಕಾರ್ಯಕ್ರಮದಲ್ಲಿ ಡಾ. ಪವಿತ್ರಾ ಸಂತೋಷ್, ಅಖಿಲಭಾರತ ವೀರಶೈವ ಮಹಿಳಾ ಜಿಲ್ಲಾಧ್ಯಕ್ಷೆ ಶಶಿಕಲಾ ನಲ್ಕುದುರೆ, ಜ್ಯೋತಿ ಕೋರಿ, ಕಮಲಾ ಹರೀಶ್, ಜವಳಿ ಮಹೇಶ್, ಮಲ್ಲಿಕಾರ್ಜುನ್, ಕೆ.ಪಿ.ಎಂ. ಸ್ವಾಮಿ, ನಾಗೇಂದ್ರಯ್ಯ, ಸಂಗಯ್ಯ, ಉಮಾಪತಿ ಇತರರು ಹಾಜರಿದ್ದರು.

## ಶ್ರೀಕೃಷ್ಣನ ವೇಷದಾರಿಯಾಗಿ ರಜತ ದೊಡ್ಡಮನಿ



**ಗದಗ :** ಶ್ರೀಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ನಗರದ ನಿವಾಸಿ ನಾಗರಾಜ ದೊಡ್ಡಮನಿ ಅವರ ಮಗನಾದ ರಜತ ಶ್ರೀಕೃಷ್ಣನ ವೇಷದಾರಿಯಾಗಿ ಎಲ್ಲರ ಕಣ್ಮನ ಸೆಳೆದನು.

## ಯುವ ನಿಧಿ ಯೋಜನೆ

**ಗದಗ :** ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರೆಂಟಿ ಯೋಜನೆಗಳಲ್ಲಿ 05ನೇ ಗ್ಯಾರೆಂಟಿ ಯೋಜನೆ ಯವನಿಧಿ ಈ ಯೊ ಜನೆಯಲ್ಲಿ ಪದವಿದರರಿಗೆ 3000ರೂ. ಮತ್ತು ಡಿಪ್ಲೋಮದರರಿಗೆ 1500ರೂ. ಗಳನ್ನು ನಿರುದ್ಯೋಗಿ ಭತ್ಯಯಾಗಿ ನಿಡುತ್ತಿದ್ದು ಜನೇವರಿ-2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು ಹಾಗೂ ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವರ್ಷದಲ್ಲಿ 4 ಬಾರಿ ಸ್ವಯಂ ಘೋಷಣೆಯನ್ನು ನೀಡಬೇಕು. ಪ್ರತಿ ಮೂರು ತಿಂಗಳಿಗೊ ಮ್ಮೆ ದಿನಾಂಕಃ 25 ರೊಳಗಾಗಿ ಸ್ವಯಂ ಘೋಷಣೆಯನ್ನು ನೀಡಬೇಕು. ಮಾರ್ಚ್-2025, ಎಪ್ರೀಲ್-2025, ಮೇ-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಮೇ-2025ರ ಮಾಹೆಯಲ್ಲಿ ಸ್ವಯಂ ಘೋಷಣೆಯನ್ನು ನೀಡಬೇಕು. ಹಾಗೂ ಜುನ್-2025, ಜುಲೈ-2025 ವತ್ತು ಆಗಸ್ಟ್-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಆಗಸ್ಟ್-2025ರ ಮಾಹೆಯಲ್ಲಿ ನೀಡಬೇಕು, ಹಾಗೂ ಸೆಪ್ಟೆಂಬರ್-2025, ಅಕ್ಟೋಬರ್-2025 ವತ್ತು ನವೆಂಬರ್-2025ರ ಸ್ವಯಂ ಘೋಷಣೆಯನ್ನು ನವೆಂಬರ್-2025ರ ಮಾಹೆಯಲ್ಲಿ ನೀಡಬೇಕು ಮತ್ತು ಡಿಸೆಂಬರ್-2025, ಜನೇವರಿ-2026, ಫೆಬ್ರವರಿ-2026ರ ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಫೆಬ್ರವರಿ-2026ರ ಮಾಹೆಯಲ್ಲಿ ನೀಡಬೇಕು. ಮತ್ತು ಸೇವಾ ಸಿಂಧು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಃ 08372-220609. ಗೆ ಸಂಪರ್ಕಿಸಬಹುದಾಗಿದೆ.

## ಸರ್ಕಾರಿ ನೌಕರರು ಹೊಣೆಗಾರಿಕೆ ನಿರ್ವಹಿಸೋಣ ಡಿಸಿ ಸಿ ಎನ್ ಶ್ರೀಧರ್

**ಗದಗ :** ನಿರಂತರವಾಗಿ ಸಾರ್ವಜನಿಕರ ಸೇವೆ ನಿಷ್ಪಕ್ಷವಾಗಿ ಮಾಡುವ ಮೂಲಕ ನಮ್ಮ ಹೊಣೆಗಾರಿಕೆಯನ್ನು ಸಮರ್ಥವಾಗಿ ನಿರ್ವಹಿಸೋಣ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಕರೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ದೇಶದ ಹಲವು ಮಹನೀಯರ ತ್ಯಾಗ, ಬಲಿದಾನ, ಹೋರಾಟದ ಫಲವಾಗಿ ನಮಗೆ ಸ್ವಾತಂತ್ರ ದೊರೆತಿದೆ. ಅದನ್ನು ಸರಿಯಾಗಿ ಅನುಭವಿಸುವ ಮೂಲಕ ಸರ್ಕಾರಿ ನೌಕರರಾದ ನಾವೆಲ್ಲ ಸಾರ್ವಜನಿಕರ ಸೇವೆಗೆ ನಿರಂತರವಾಗಿ ಶ್ರಮಿಸೋಣ ಎಂದರು.

ಸಮ ಸಮಾಜ ನಿರ್ಮಾಣಕ್ಕಾಗಿ ಕಾರ್ಯನಿರ್ವಹಿಸುವ ಮೂಲಕ ಸರ್ಕಾರದ ಆಶಯ ಈಡೇರಿಸುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ. ಅದನ್ನು ಸರಿಯಾಗಿ ಕರ್ತವ್ಯ ಶ್ರದ್ಧೆಯ ಮೂಲಕ ನಿರ್ವಹಿಸುವ ಕಾರ್ಯವನ್ನು ನಾವೆಲ್ಲರೂ ನಿಭಾಯಿಸೋಣ ಎಂದು ತಿಳಿಸಿದರು.

ದೇಶದ ಸ್ವಾತಂತ್ರ ಕ್ಕಾಗಿ ಲಕ್ಷಾಂತರ ಮಹನೀಯರು ತಮ್ಮ ಪ್ರಾಣವನ್ನು ತ್ಯಾಗ ಮಾಡುವ ಮೂಲಕ ನಮಗೆ ಸ್ವಾತಂತ್ರ ದೊರಕಿಸಿಕೊಟ್ಟಿದ್ದಾರೆ. ಇದರಲ್ಲಿ ಗದಗ ಜಿಲ್ಲೆಯ ಹಲವಾರು ಮಹನೀಯರು ಪ್ರಾಣತ್ಯಾಗ ಮಾಡಿ ಸ್ವಾತಂತ್ರ ದೊರಕಿಸುವಲ್ಲಿ ಶ್ರಮಿಸಿದ್ದಾರೆ. ಅವರೆಲ್ಲರನ್ನೂ ನೆನೆಯುವ ಮೂಲಕ ದೊರೆತಿರುವ ಸ್ವಾತಂತ್ರ ವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಂಸ್ಕಾರಯುತ ಸಮಾಜ ಕಟ್ಟುವುದೇ ನಮ್ಮ ಗುರಿ

**ದಾವಣಗೆರೆ:** ಮತಾಂತರ ಮುಕ್ತ, ವ್ಯಸನ ಮುಕ್ತ ಸಮಾಜ ಆರೋಗ್ಯಯುತ ಜೀವನ ಹಾಗೂ ಸಂಸ್ಕಾರ ಹಾಗೂ ಶಿಕ್ಷಣಯುತ ಸಮಾಜ ಕಟ್ಟುವ ನಿಟ್ಟಿನಲ್ಲಿ ಮಾಚಿದೇವ ಜೋಳಿಗೆ ಎನ್ನುವ ಹೆಸರಿನಲ್ಲಿ ಪ್ರಮುಖವಾದ ಮೂರು ಉದ್ದೇಶಗಳನ್ನು ಇಟ್ಟುಕೊಂಡು ಮನೆಮನೆಗೆ ಮಾಚಿದೇವ ಎನ್ನುವ ಘೋಷಣೆಯೊಂದಿಗೆ ರಾಜಾದ್ಯಂತ ಪ್ರವಾಸ ಮಾಡಲಾಗುತ್ತಿದೆ ಎಂದು ಚಿತ್ರದುರ್ಗದ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಪೀಠಾಧಿಪತಿ ಡಾ.ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು ಹೇಳಿದರು.

ದಾವಣಗೆರೆಯ ವಿನೋಬಾ ನಗರದಲ್ಲಿರುವ ಶ್ರೀಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ದಾವಣಗೆರೆ ಜಿಲ್ಲಾ ಶ್ರೀ ಮಡಿವಾಳ ಮಾಚಿದೇವ ಸಂಘ, ಮಹಿಳಾ ಸಂಘ ಮತ್ತು ಮಡಿಕಟ್ಟೆ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಶ್ರೀಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ನಮ್ಮ ಸಮಾಜದ ಕಾಯಕ ಜೀವಿಗಳು ಆದರೆ ಅವರು ದುಡಿದ ಬಹುಪಾಲು ಹಣವನ್ನು ದುಶ್ಚಟಗಳಿಗೆ ಹಾಳು ಮಾಡುತ್ತಾರೆ. ಆದ್ದರಿಂದ ಮಡಿವಾಳ ಸಮುದಾಯವನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಮುಂದಿನ ಪೀಳಿಗೆಯನ್ನು ಸರಿದಾರಿಗೆ ತರುವ ಸಲುವಾಗಿ ಶ್ರೀಮಠವು ಹಲವಾರು ಕಾರ್ಯಕ್ರಮಮಗಳನ್ನು ಹಮ್ಮಿಕೊಂಡಿದೆ. ಸಮಾಜ ನಮಗೆ ಏನು ಮಾಡಿದೆ ಎಂದು ಕೇಳುವ ಪರಿಸ್ಥಿತಿ ಮುಂಬರುವ ದಿನಗಳಲ್ಲಿ ಎದುರಾಗಲಿದೆ ಎಂದು ಆತಂಕ ವ್ಯಕ್ತ ಪಡಿಸಿದರು.




ಪರಿಶ್ರಮ ನಮ್ಮನ್ನು ಬೆಳೆಸುತ್ತೇ ವಿನಹ ಇನ್ನಾವುದೇ ಕೆಲಸ ನಮಗೆ ಪ್ರತಿಫಲ ಕೊಡುವುದಿಲ್ಲ.

ಕಾರಣ ನಾವೆಲ್ಲಾ ಪ್ರಾಮಾಣಿಕ ಪರಿಶ್ರಮದ ಮೂಲಕ ನಮ್ಮ ಸಮುದಾಯ ಮುಂದೆಬರಬೇಕು. ಅದಕ್ಕೆ ನಮ್ಮ ಸಂಘಟನೆ ಸಂಘಟಿತ ಆಗಬೇಕು. ಇದಲ್ಲದೇ ನಮ್ಮ ಮಕ್ಕಳು ಇಂತಹದ್ದೇ ಪದವಿ ಪಡೆಯಬೇಕೆನ್ನುವ ಹಠ ಮಾಡಬಾರದು. ಮಕ್ಕಳನ್ನು ಸ್ವತಂತ್ರವಾಗಿ ಬೆಳೆಸಬೇಕು. ಆಗ ಮಾತ್ರ ಎಲ್ಲಾ ಹಂತಗಳಲ್ಲಿ ಸಮಾಜ ಬೆಳೆಯು ಸಾಧ್ಯ ಎಂದರು.

ಮಡಿವಾಳ ಮಾಚಿದೇವರೆಂದರೆ ಆಚಾರ,ವಿಚಾರ, ಸಂಸ್ಕೃತಿ, ಸಂಸ್ಕಾರಕ್ಕೆ ಹೆಸರಾದವರು. ಅಂತೆಯೇ ನಾವುಗಳು ಅವರಂತೆ ಎಲ್ಲವನ್ನೂ ಮೈಗೂಡಿಸಿಕೊಂಡಂತೆ ನಮ್ಮ ಜೀವನ ಸಾರ್ಥಕತೆ ಪಡೆಯುತ್ತದೆ. ಕತ್ತಲೆ, ಕಂದಾಚಾರದಲ್ಲಿ ಇರುವ ಸಮಾಜಕ್ಕೆ ಅರಿವಿನ ಬೆಳಕನ್ನು ನೀಡುವ ಮೂಲಕ ಸಮಾಜಕ್ಕೆ ಶ್ರೇಷ್ಠತೆ ನೀಡಿದ ಮಹನೀಯರು ನಮ್ಮ ಮಡಿವಾಳ ಮಾಚಿದೇವರು ಎಂದು ಸ್ಮರಿಸಿದರು.

ವಿನೋಬಾನಗರದ ಶ್ರೀ ಜಡೆಸಿದ್ದ ಶಿವಯೋಗಿಶ್ವರ ಮಠದ ಶ್ರೀಶಿವಾನಂದ ಸ್ವಾಮೀಜಿ ಮಾತನಾಡಿ, ಮಡಿವಾಳ ಸಮುದಾಯದ

ಆಚಾರ ವಿಚಾರಗಳು ಗೊತ್ತಿದ್ದರೂ ಅವುಗಳನ್ನು ಆಚರಣೆ ಮಾಡದಿರುವವರು ಮಹಾಮೂರ್ಖರು. ಆದರೆ ಇನ್ನೊಬ್ಬರನ್ನು ಅವರ ಅಚಾರ ವಿಚಾರಗಳನ್ನು ಪಾಲನೆ ಮಾಡುವುದಿಲ್ಲ ಅವರು ಮೂರ್ಖರು ಎನ್ನುವುದಕ್ಕಿಂತ ಮೊದಲು ನಮ್ಮ ಮೂರ್ಖತನವನ್ನು ನಾವು ಅರಿಯಬೇಕಿದೆ. ಅಲ್ಲದೇ ಎಲ್ಲದಕ್ಕಿಂತ ಶ್ರೇಷ್ಠವಾದ ಸಂಪತ್ತು ಹಣ. ಅಂತಹ ಸಂಪತ್ತನ್ನು ಕೊಡುವುದೇ ಶಿಕ್ಷಣ ಎನ್ನುವ ಆಯುಧ. ಕಾರಣ ಮಡಿವಾಳ ಸಮುದಾಯದವರು ಕಾಯಕದ ಜೊತೆ ಶಿಕ್ಷಣವಂತರಾಗಬೇಕೆಂದು ಸಲಹೆ ನೀಡಿದರು.ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಕಾಯಕದ ಮೂಲಕ ಶ್ರಮಜೀವಿಗಳಾದ ಮಡಿವಾಳ ಸಮುದಾಯದವರು ತಮ್ಮ ಕಾಯಕದ ಜತೆ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಉನ್ನತ ಹುದ್ದೆಗಳನ್ನು ಅಲಂಕರಿಸುವ ನಿಟ್ಟಿನಲ್ಲಿ ವಿದ್ಯಾಬ್ಯಾಸ ಕೊಡಿಸಬೇಕು ಎಂದು ಕರೆ ನೀಡಿದರು.

ಸಂಘದ ಜಿಲ್ಲಾಧ್ಯಕ್ಷ ಎಂ ನಾಗೇಂದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಹರಿಹರ ನಗರಸಭೆಯ ಪೌರಾಯುಕ್ತ ನಾಗಣ್ಣ ಮನೋಹರ್ ಪರಿಟ್, ಆಹಾರ ನಿರೀಕ್ಷಕ ಟಿ.ಮಂಜುನಾಥ್, ಪಾಲಿಕೆ ಮಾಜಿ ಸದಸ್ಯ ಎ.ನಾಗರಾಜ್, ಜೈನ್ ಇಂಜಿನಿಯರಿಂಗ್ ಕಾಲೇಜು ಸಹಾಯಕ ಪ್ರಾಧ್ಯಾಪಕ ಗಣೇಶ್ ಎನ್. ವೈ.ಪೂಜಾರಯ್ಯ, ಜಿಲ್ಲಾ ವರದಿಗಾರರು ಕೂಟದ ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ್, ಕಾರ್ಮಿಕ ಮುಖಂಡ ಆವರಗೆರೆ ಹೆಚ್.ಜಿ.ಉಮೇಶ್, ಆರ್. ಎನ್.ಧನಂಜಯ,

ಎನ್.ಓಂಕಾರಪ್ಪ, ಪಿ.ಮಂಜುನಾಥ್, ರವಿಚಿಕ್ಕಣ್ಣ, ಡೈಮಂಡ್ ಮಂಜುನಾಥ್, ಅಂಜಿನಪ್ಪ ಪೂಜಾರ್, ಜಿ.ವಿಜಯ್‌ಕುಮಾರ್, ದುಗ್ಗಪ್ಪ, ಸುಭಾಶ್, ಡಾ.ಎನ್.ಪರುಶರಾಮ್, ಅಜೇಯ, ಬಾತಿ ಶಂಕರ್, ಮಂಜುನಾಥ್ ಕಕ್ಕರಗೊಳ್ಳ, ಬಸವರಾಜ್ ಪೂಜಾರ್, ಪ್ರಕಾಶ್ ಮಡಿಕಟ್ಟೆಯ ಹನುಮಂತಪ್ಪ, ಹರಿಹರದ ಭೀಮಣ್ಣ, ಬಸವರಾಜಯ್ಯ, ಮಲ್ಲಪ್ಪ, ರೇವಣ್ಣ, ಹುಲಿಕಟ್ಟೆ ರಾಮಚಂದ್ರಪ್ಪ ಇತರರು ಇದ್ದರು.

# ಜಂಬೂ ಸವಾರಿ 11,600 ಆಸನ ಕಡಿತ



**ಮುಖ್ಯಾಂಶಗಳು**

2023ರಲ್ಲಿ 38 ಸಾವಿರ ಆಸನ ಹಾಕಲಾಗಿತ್ತು

ಹೋದ ವರ್ಷ 59,600 ಮಂದಿಗೆ ವ್ಯವಸ್ಥೆ

ಈ ಬಾರಿ ಎಸ್‌ಪಿ ಪಾಲನೆಗೆ ನಿರ್ಧಾರ

**ಮೈಸೂರು:** ಆರ್‌ಸಿಬಿ ವಿಜಯೋತ್ಸವ ವೇಳೆ ಬೆಂಗಳೂರಿನಲ್ಲಿ ಸಂಭವಿಸಿದ್ದ ಕಾಲ್ತುಳಿತ ಅವಘಡದ ಪರಿಣಾಮ ಈ ಬಾರಿ ಮೈಸೂರು ದಸರಾ ಮಹೋತ್ಸವದ ಮೇಲೂ ಬೀರಿದೆ. ಜಂಬೂಸವಾರಿ ದಿನ ಅರಮನೆ ಆವರಣದಲ್ಲಿ 11,600 ಆಸನಗಳು ಕಡಿತಗೊಳ್ಳಲಿವೆ.

2023ರಲ್ಲಿ 38 ಸಾವಿರ ಅಸನಗಳು, ಕಳೆದ ವರ್ಷ ದಾಖಲೆಯ 59,600ಕ್ಕೂ ಹೆಚ್ಚು ಅಸನಗಳ ವ್ಯವಸ್ಥೆಯನ್ನು

ಜಿಲ್ಲಾಡಳಿತ ಮಾಡಿತ್ತು. ಕಾಲ್ತುಳಿತ ಅವಘಡದ ಬಳಿಕ ಪೊಲೀಸ್ ಇಲಾಖೆ ರೂಪಿಸಿರುವ 'ಪ್ರಮಾಣೀಕೃತ ಕಾರ್ಯಾ ಚರಣೆ ವಿಧಾನ'ವನ್ನು (ಎಸ್‌ಒಪಿ) ಕಟ್ಟುನಿಟ್ಟಾಗಿ ಪಾಲಿಸಲು ಈ ಬಾರಿ ಕ್ರಮ ಕೈಗೊಳ್ಳಲಾಗುತ್ತಿದೆ. ಅಸನಗಳ ಸಂಖ್ಯೆ ಕಡಿತಗೊಳಿಸಲಾಗುತ್ತಿದೆ.

ಈ ಬಾರಿ ಅಸನಗಳ ಸಂಖ್ಯೆ ಕಡಿತಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಉನ್ನತಮಟ್ಟದ ಸಮಿತಿ ಸಭೆ ತೀರ್ಮಾನಿಸಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅಧ್ಯಕ್ಷತೆಯ ಜಿಲ್ಲಾ ಕಾರ್ಯಕಾರಿ ಸಮಿತಿ ಸಭೆಯಲ್ಲೂ

ಚರ್ಚೆಯಾಗಿದ್ದು, 48 ಸಾವಿರ ಆಸನ ವ್ಯವಸ್ಥೆ ಮಾಡಲು, ಅಷ್ಟೇ ಪ್ರಮಾಣದಲ್ಲಿ ಪಾಸ್, ಟಿಕೆಟ್,

**ಮೈಸೂರು ಅರಮನೆ ಆವರಣದಲ್ಲಿ ಜನಸಂದಣಿ ನಿಯಂತ್ರಿಸುವುದು, ಸುಗಮವಾಗಿ ಮೆರವಣಿಗೆ ವೀಕ್ಷಿಸುವಂತೆ ಅನುವು ಮಾಡಿಕೊಡಲು ಕ್ರಮ ಕೈಗೊಳ್ಳಲಾಗಿದೆ**

**– ಡಾ.ಎಚ್.ಸಿ.ಮಹದೇವಪ್ಪ ಜಿಲ್ಲಾ ಉಸ್ತುವಾರಿ ಸಚಿವ**

ಕಾರ್ಡ್ ನೀಡಲು ನಿರ್ಧರಿಸಲಾಗಿದೆ ಎಂದು ಮೂಲಗಳು


ತಿಳಿಸಿವೆ.

ಇದರಿಂದಾಗಿ, , ವಿಐಪಿಗಳಿಗೆ ಕೂಡ 1 ಸಾವಿರ ಆಸನ ಕಡಿತಗೊಳಿಸಲು ತೀರ್ಮಾನಿಸಲಾಗಿದೆ. ಪ್ರತಿ ವಿಭಾಗದಲ್ಲೂ (ಎನ್‌ಕ್ಲೋಸರ್) ತಲಾ ಸರಾಸರಿ 500ರಿಂದ ಸಾವಿರ ಅಸನಗಳು ಕಡಿಮೆಯಾಗಲಿವೆ.

ಮಾರ್ಗ ಬದಲಾವಣೆಯಾಗಿತ್ತು: ಕಳೆದ ವರ್ಷ ಅರಮನೆ ಆವರಣದೊಳಗೆ ಆನೆಗಳು ಬರುವ ಮಾರ್ಗ ಬದಲಾಯಿಸಲಾಗಿತ್ತು.

# ಶಿರಾಡಿಘಾಟ್‌ನಲ್ಲಿ ಮೇಘಸ್ಫೋಟ 2 ತಾಸಲ್ಲಿ 400 ಮಿ.ಮೀ ಮಳೆ

**ಹೊಳೆಯಂತಾದ ಹೆದ್ದಾರಿ-75, ಗುಡ್ಡ ಕುಸಿತ, ಸಂಚಾರ ಅಸ್ತವ್ಯಸ್ತ**



**ಬೆಂಗಳೂರು :** ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದಿಂದಾಗಿ ರಾಜ್ಯದ ವಿವಿಧೆಡೆ ಮಳೆ ಅರ್ಭಟ ತೀವ್ರಗೊಂಡಿದ್ದು, ಹಾಸನ ಜಿಲ್ಲೆ ಶನಿವಾರ ಸಕಲೇಶಪುರ ತಾಲೂಕಿನಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಸಂಜೆ ಮೇಘಸ್ಫೋಟ ಸಂಭವಿಸಿದ ಪರಿಣಾಮ 2 ಗಂಟೆ ಅವಧಿಯಲ್ಲಿ 400 ಮಿ.ಮೀಟರ್ ಮಳೆ ಸುರಿದಿದ್ದರಿಂದಾಗಿ ರಾಷ್ಟ್ರೀಯ ಹೆದ್ದಾರಿ 75ರ ಶಿರಾಡಿಘಾಟಿ ರಸ್ತೆ ಹೊಳೆಯಂತಾಗಿತ್ತು, ತೊರೆಗಳ ನೀರು ರಸ್ತೆಗೆ ಬೀಳುತ್ತಿದ್ದರಿಂದ ವಾಹನ ಸಂಚಾರದ ಮೇಲೆ ಪರಿಣಾಮವಾಗಿತ್ತು. ಮಳೆ ಆರ್ಭಟಕ್ಕೆ ಅಲ್ಲಲ್ಲಿ ಗುಡ್ಡಕುಸಿದ ಪರಿಣಾಮ ಹೆದ್ದಾರಿಯ ಎರಡೂ ಬದಿಗಳಲ್ಲಿ ಕಿ.ಮೀ.ಗಟ್ಟಲೆ ವಾಹನಗಳು ನಿಂತಿದ್ದವು. ಹೆದ್ದಾರಿ ಅಧಿಕಾರಿಗಳು ಜೆಸಿಬಿ ಬಳಸಿ ಮಣ್ಣು ತೆರವುಗೊಳಿಸಿದರೆ, ಅರಣ್ಯ ಇಲಾಖೆ ಸಿಬ್ಬಂದಿ ಮರಗಳನ್ನು ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಆದರೆ ಕೆಂಪಳ್ಳ ಹಾಗೂ ಮಾರ್ನಳ್ಳಿ ಪ್ರದೇಶದಲ್ಲಿ ಭಾನುವಾರ ಸಂಜೆಯೂ ಗುಡ್ಡ ಕುಸಿತ ಉಂಟಾಗಿ ಹೆದ್ದಾರಿ ಸಂಚಾರಕ್ಕೆ ಅಡ್ಡಿ ಎದುರಾಗಿದೆ.

**5 ಜಿಲ್ಲೆಗಳಲ್ಲಿ ರೆಡ್ ಅಲರ್ಟ್**

**ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗದಲ್ಲಿ ಆ.18 ಹಾಗೂ ಅ.19ರಂದು ಭಾರಿ ಮಳೆ ಸುರಿಯುವ ಸಾಧ್ಯತೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಗಂಟೆಗೆ 60 ಕಿಮೀ ವೇಗದಲ್ಲಿ ಬಿರುಗಾಳಿ ಬೀಸಲಿರುವ ಕಾರಣ ಸಮುದ್ರದಲ್ಲಿ ಮೀನುಗಾರಿಕೆ ನಡೆಸದಂತೆ ಮೀನುಗಾರರಿಗೆ ಎಚ್ಚರಿಕೆ ನೀಡಲಾಗಿದೆ.**

ಸುರಿಯುತ್ತಿರುವ ಭಾರಿ ಮಳೆಗೆ ಮಣ್ಣು ಮೆದುವಾಗಿ ಕುಸಿತ ಸಂಭವಿಸುತ್ತಿದೆ. ಸಕಲೇಶಪುರ ತಾಲೂಕಿನ ಹಾನುಬಾಳ್, ಕಸಬಾ ಹಾಗೂ ಹೆತ್ತೂರು ಹೋಬಳಿಯಲ್ಲಿ ಭತ್ತದ ಗದ್ದೆಗಳು ನದಿ ನೀರಿನಿಂದ ಆವೃತಗೊಂಡು ಕೆರೆಗಳಂತಾಗಿವೆ.

## ಕೃಷಿ ತ್ಯಾಜ್ಯದ ಮೌಲ್ಯವರ್ಧನೆ, ಮಾರುಕಟ್ಟೆಯ ಸೌಲಭ್ಯ ಕುರಿತು ಒಂದು ದಿನದ ವಿಚಾರ ಸಂಕಿರಣ

# ರೈತರ ಆದಾಯ ವೃದ್ಧಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಅವಶ್ಯ : ಡಾ.ಎ.ಬಿ.ಪಾಟೀಲ್



**ಚಿತ್ರದುರ್ಗ:** ರೈತರ ಆದಾಯ ವೃದ್ಧಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಅವಶ್ಯವಾಗಿ ಬೇಕಾಗಿದೆ ಎಂದು ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷರು ಹಾಗೂ ಕೃಷಿ ಸಚಿವರ ವಿಶೇಷ ಕರ್ತವ್ಯ ಅಧಿಕಾರಿಗಳಾದ ಡಾ.ಎ.ಬಿ.ಪಾಟೀಲ್ ಹೇಳಿದರು.

ನಗರದ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಕೃಷಿ ಇಲಾಖೆ, ಕೃಷಿ ತಂತ್ರಜ್ಞರ ಸಂಸ್ಥೆ ರಾಜ್ಯ ಮತ್ತು ಪ್ರಾದೇಶಿಕ ಘಟಕ ಹಾಗೂ ಸಮನ್ವಯ ಟ್ರಸ್ಟ್ ಸಹಯೋಗದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕೃಷಿ ತ್ಯಾಜ್ಯದ ಮೌಲ್ಯವರ್ಧನೆ ಹಾಗೂ ರೈತ ಉತ್ಪಾದಕ ಕಂಪನಿಗಳಿಗೆ ಮಾರುಕಟ್ಟೆಯ ಸೌಲಭ್ಯ ಕಲ್ಪಿಸುವ ಕುರಿತು ಒಂದು ದಿನದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ಪ್ರಾಥಮಿಕ ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ಆದಾಯ ಗಳಿಸುತ್ತಾರೆ. ಆದರೆ ಅಧಿಕ ಆದಾಯ ಗಳಿಸಬೇಕಾದರೆ ರೈತ-ರೈತೋದ್ಯಮಿ ಆಗಬೇಕಾದರೆ ರೈತರಿಗೆ, ರೈತ ಉತ್ಪಾದಕ ಸಂಸ್ಥೆಯು ಉತ್ತಮವಾಗಿ ಸೇವೆ ನೀಡಬೇಕು. ವಿಜ್ಞಾನ ಮತ್ತು ವಾಣಿಜ್ಯ ಸೇರಿದಾಗ ಮಾತ್ರ ಆದಾಯ ಹೆಚ್ಚಾಗಲಿದೆ. ಇದರ ಜೊತೆಗೆ ಮಾರುಕಟ್ಟೆ ಹಾಗೂ ಹೆಚ್ಚಿನ ಬೆಲೆ ಸಿಗುವುದು ಸಹ ಬಹಳ ಮುಖ್ಯವಾಗಿದ್ದು, ಮಾರುಕಟ್ಟೆ, ಮಾರಾಟಗಾರರು, ಖರೀದಿದಾರರನ್ನು, ಉತ್ಪಾದಕರನ್ನು ಹಾಗೂ ಉತ್ಪಾದಕ ಸಂಸ್ಥೆಗಳನ್ನು ಒಂದುಗೂಡಿಸಿ, ಸಮನ್ವಯತೆ ತಂದಿರುವ ಸಮನ್ವಯ ಟ್ರಸ್ಟ್‌ನ ಕಾರ್ಯ ಎಂದು ಶ್ಲಾಘನೀಯ ಎಂದರು.

ಕೃಷಿ, ತೋಟಗಾರಿಕೆ, ಹೈನುಗಾರಿಕೆ ಹಾಗೂ ಇತರೆ ಉಪ ಕಸುಬುಗಳನ್ನು ಅಳವಡಿಸಿಕೊಂಡರೆ ಆದಾಯ ವೃದ್ಧಿಯಾಗಲಿದ್ದು, ಕೃಷಿಯಿಂದ ಸಂಸ್ಕೃತಿ, ತೋಟಗಾರಿಕೆಯಿಂದ ಸಂಸ್ಕಾರ ಹಾಗೂ ಪಶುಸಂಗೋಪನೆಯಿಂದ ರೈತರಿಗೆ ಸಮ್ಮೋಹನ ಶಕ್ತಿ ಬರಲಿದೆ ಎಂದು ತಿಳಿಸಿದ ಅವರು, ಕೃಷಿ ಹಾಗೂ ಇತರೆ ಉಪಕಸುಬುಗಳಿಂದ 350 ದಶಲಕ್ಷ ಟನ್ ಕೃಷಿ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ಕಸದಿಂದ ರಸ ಮಾಡುವ ಸಾಕಷ್ಟು ವಿಧಾನ, ತಂತ್ರಜ್ಞಾನಗಳಿದ್ದು, ಕೃಷಿ ತ್ಯಾಜ್ಯದಿಂದ ಮೌಲ್ಯವರ್ಧಿತ ಪದಾರ್ಥ ಪಡೆಯುವುದು. ಕೇವಲ ಪ್ರಾಥಮಿಕ ಆಹಾರ ಪದಾರ್ಥಗಳನ್ನು ಸಂಸ್ಕರಣೆ ಮಾಡುವುದು ಮಾತ್ರವಲ್ಲದೇ ಕೃಷಿ ತ್ಯಾಜ್ಯ ವಸ್ತುಗಳನ್ನು ಸಹ ವಿಘಟನೆ, ಮೌಲ್ಯವರ್ಧನೆ, ಪ್ಯಾಕಿಂಗ್ ಹಾಗೂ ಮಾರಾಟ ಮಾಡಿ ಆದಾಯ ಪಡೆಯಲು ಸಾಧ್ಯವಿದೆ ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕ ಬಿ. ಮಂಜುನಾಥ್ ಮಾತನಾಡಿ, ಜಾಗತಿಕ ಮಟ್ಟದಲ್ಲಿ ಹಾಗೂ ನಮ್ಮ ದೇಶದಲ್ಲಿ ಕೃಷಿಯ ಬೆಳವಣಿಗೆ ಹೇಗಿದೆ? ನಮ್ಮ ದೇಶಿಯ ವ'ಾ ರ'ಂ ಕ ಟ್ಟೆ ಗ' ಳ' ಲ್ಲಿ ರ'ಂ ವ' ಸಾಧ್ಯತೆ, ಅವಕಾಶಗಳು, ವಿದೇಶಗಳಲ್ಲಿರುವ ಸಾಧ್ಯತೆ, ಅವಕಾಶಗಳನ್ನು ಅರ್ಥೈಸಿಕೊಂಡು ನಾವು ನಮ್ಮ ಕೃಷಿಯಲ್ಲಿ ತೆಗೆದುಕೊಳ್ಳಬೇಕಾದ ಬದಲಾವಣೆಗಳನ್ನು ಬಹಳಷ್ಟು ತ್ವರಿತಗತಿಯಲ್ಲಿ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರೈತ ಉತ್ಪಾದಕ ಸಂಸ್ಥೆಗಳನ್ನು ಹುಟ್ಟು ಹಾಕಿದೆ. ರೈತರ ಉತ್ಪಾದಕ ಸಂಸ್ಥೆಗಳು ಕೇವಲ ಕೃಷಿ ಪರಿಕರಗಳ ವಿತರಣೆ ಮಾಡುವುದು ಅಷ್ಟೇ ಅಲ್ಲದೇ ಕೃಷಿಯಲ್ಲಿ ಆಗಬೇಕಾದ ಬದಲಾವಣೆಗಳನ್ನು ಸಹ ತರುವ ದಿಕ್ಕಿನಲ್ಲಿ ಸಕ್ರಿಯವಾಗಿ ಭಾಗವಹಿಸಿ, ಬೇಸಾಯ ಪದ್ಧತಿ, ನವೀನ ಬೆಳೆ ಪದ್ಧತಿ, ತಳಿಗಳ ಬದಲಾವಣೆ, ಉತ್ಪಾದಕತೆ ಹೆಚ್ಚಳ ಮಾಡುವುದು, ಸಮಗ್ರ ಕೃಷಿ ಪದ್ಧತಿಗಳ ಅಳವಡಿಕೆ, ಕೃಷಿ ಸಂಸ್ಕರಣೆ, ಮೌಲ್ಯವರ್ಧನೆ, ಬ್ರಾಂಡಿಂಗ್, ಪ್ಯಾಕಿಂಗ್ ಸೇರಿದಂತೆ ಅಗತ್ಯ ಬದಲಾವಣೆ ತರುವ ಕೆಲಸಗಳನ್ನು ಮಾಡಬೇಕಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಹೆಚ್ಚು ಪುಷ್ಪ ಕೃಷಿಯನ್ನು ಮಾಡುತ್ತಿದ್ದು, ಹೂ ಬೆಳೆಗಾರರಿಗೆ ಮಧ್ಯವರ್ತಿಗಳ ಶೋಷಣೆ ತಪ್ಪಿಸುವ ನಿಟ್ಟಿನಲ್ಲಿ ದೇವಸ್ಥಾನಗಳಿಗೆ ನೇರವಾಗಿ ಸಂಪರ್ಕ ಕಲ್ಪಿಸಲು ಸಾಧ್ಯವಾದರೆ ರೈತ ಉತ್ಪಾದಕ ಸಂಸ್ಥೆಗಳ ಮೂಲಕ ದೇವಸ್ಥಾನಗಳಿಗೆ ತಲುಪಿಸುವ ಕೆಲಸ ಮಾಡೋಣ. ಈ ನಿಟ್ಟಿನಲ್ಲಿ ಸಂಪರ್ಕ ಕಲ್ಪಿಸಲು ಸಮನ್ವಯ ಟ್ರಸ್ಟ್ ಸಹಕಾರ ಅಗತ್ಯವಾಗಿದೆ ಎಂದರು.

ಸಮನ್ವಯ ಟ್ರಸ್ಟ್ ಸಂಸ್ಥಾಪಕರು ಹಾಗೂ ಮ್ಯಾನೇಜಿಂಗ್ ಟ್ರಸ್ಟಿ ಕೆ.ಹೆಚ್.ಸುಮಂಗಳ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಪ್ರಾದೇಶಿಕ ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷ ಕಟ್ಟಾ ಶ್ರೀನಿವಾಸ ರೆಡ್ಡಿ, ಕಾರ್ಯದರ್ಶಿ ಜಿ.ಟಿ.ವೀರಭದ್ರ ರೆಡ್ಡಿ, ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ.ತಿಪ್ಪೇಸ್ವಾಮಿ, ಕರ್ನಾಟಕ ಕೋಳಿ ಸಾಕಣೆದಾರರು ಮತ್ತು ತಳಿಗಾರರ ಸಂಘದ ನಿರ್ವಹಣಾ ಸಮಿತಿ ಸದಸ್ಯ ಎಸ್.ಜಿ.ವೀರಣ್ಣ, ರಾಜಸ್ಥಾನ್ ವಿಜ್ಞಾನಿ ಅನ್ಮೋಲ್ ಶರ್ಮಾ, ದೃಷ್ಠಿ ಇಂಟರ್ ನ್ಯಾಷನಲ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಸೆಹ್‌ವಾಲ್, ಸರ್ಕಲ್ ಇನ್ಸ್‌ಪೆಕ್ಟರ್ ಪ್ರಕಾಶ್ ಪಾಟೀಲ್ ಸೇರಿದಂತೆ ರೈತರು ಹಾಗೂ ರೈತ ಉತ್ಪಾದಕ ಕಂಪನಿಗಳ ಪದಾಧಿಕಾರಿಗಳು ಇದ್ದರು.

## ಮ್ಯಾಂಗ್ರೋವ್ ಪುನರುಜ್ಜೀವನ ಯೋಜನೆಗೆ ಚಾಲನೆ

**ಮಂಗಳೂರು:** ನೇತ್ರಾವತಿ ನದಿ ದಂಡೆಯಲ್ಲಿ ಮ್ಯಾಂಗ್ರೋವ್ ಪುನರುಜ್ಜೀವನ ಉಪಕ್ರಮವನ್ನು ಸಿಂಜೆನ್, ಅರಣ್ಯ ಇಲಾಖೆ, ಫಿಶರೀಶ್ ಕಾಲೇಜ್, ಸೆಂಟರ್ ಫಾರ್ ಅಡ್ವಾನ್ಸ್ ಲರ್ನಿಂಗ್ (ಸಿಎಫ್‌ಎಎಲ್) ಮತ್ತು ವನ ಚಾರಿಟೇಬಲ್ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಗುರುವಾರ ನಡೆದ ಯೋಜನೆಯ ಚಾಲನಾ ಸಮಾರಂಭದಲ್ಲಿ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ, ಡಿಎಫ್‌ಓ ಅಂಥೋನಿ ಮರಿಯಪ್ಪನ್, ಮಂಗಳೂರು ಮಹಾನಗರ ಪಾಲಿಕೆ ಆಯುಕ್ತ ರವಿಚಂದ್ರ ನಾಯಕ್, ಡಿಯುಡಿಸಿ ಯೋಜನಾ ನಿರ್ದೇಶಕ ಡಾ.ಜಿ.ಸಂತೋಷ್ ಕುಮಾರ್, ಫಿಶರೀಸ್ ಕಾಲೇಜಿನ ಡೀನ್ ಡಾ.ಎನ್. ಎಚ್.ಆಂಜನೇಯಪ್ಪ ಮತ್ತಿತರರು ಉಪಸ್ಥಿತರಿದ್ದರು.

ಶಿಥಿಲವಾಗಿರುವ ಮ್ಯಾಂಗ್ರೋವ್ ಪರಿಸರವನ್ನು ಪುನರ್ ನಿರ್ಮಾಣ ಮಾಡುವುದು, ಜೀವವೈವಿಧ್ಯವನ್ನು ವಿಸ್ತರಿಸುವುದು, ಇಂಗಾಲ ಹೀರಿಕೊಳ್ಳುವಿಕೆಯನ್ನು ಸುಧಾರಿಸುವುದು ಮತ್ತು ಕರಾವಳಿ ಸಂರಕ್ಷಣೆ ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಈ ಯೋಜನೆಯಡಿ ವಿದ್ಯಾರ್ಥಿಗಳು ಮತ್ತು ಮೀನುಗಾರರು ಸೇರಿದಂತೆ ಸಮುದಾಯ ಪಾಲ್ಗೊಳ್ಳುವಿಕೆಯಲ್ಲಿ ಮುಂದಿನ ಐದು ವರ್ಷಗಳಲ್ಲಿ 54 ಎಕರೆ ಮ್ಯಾಂಗ್ರೋವ್ ಅಭಿವೃದ್ಧಿಪಡಿಸಲಾಗುವುದು. ಅತ್ಯಾಧುನಿಕ ಜಿಐಎಸ್ ಮ್ಯಾಪಿಂಗ್, ಡ್ರೋಣ್ ಕಣ್ಗಾವಲು ಮತ್ತು ಜೀವವೈವಿಧ್ಯ ಟ್ರ್ಯಾಕಿಂಗ್‌ನಂಥ ವ್ಯವಸ್ಥೆಯನ್ನು ಈ ಉದ್ದೇಶಕ್ಕೆ ಬಳಸಿಕೊಳ್ಳಲಾಗುತ್ತದೆ ಎಂದು ಪ್ರಕಟಣೆ ಹೇಳಿದೆ.

## ತರಬೇತಿ ಕಾರ್ಯಾಗಾರ

**ಉಡುಪಿ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಉಡುಪಿ ಇವರ ಸಹಯೋಗದಲ್ಲಿ ಬಾಲ್ಯವಿವಾಹ ನಿಷೇಧ ಹಾಗೂ ಮಕ್ಕಳ ಸಂಬಂಧಿತ ಕಾನೂನುಗಳ ಬಗ್ಗೆ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೇನರ್ಸ್ ಇವರಿಗೆ ಎರಡು ದಿನದ ತರಬೇತಿ ಕಾರ್ಯಾಗಾರವು ಆಗಸ್ಟ್ 19 ಮತ್ತು 20 ರಂದು ನಗರದ ಮಣಿಪಾಲ ರಜತಾದ್ರಿಯ ಜಿಲ್ಲಾ ಪಂಚಾಯತ್ ಡಾ.ವಿ.ಎಸ್ ಆಚಾರ್ಯ ಸಭಾಂಗಣದಲ್ಲಿ ನಡೆಯಲಿದೆ.

ಆಗಸ್ಟ್ 19 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರತೀಕ್ ಬಾಯಲ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಯೋಗೀಶ್ ಪಿ.ಆರ್, ಪೊಲೀಸ್ ವರಿಷ್ಠಾಧಿಕಾರಿ ಹರಿರಾಮ್ ಶಂಕರ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಜೂಹಿ ದಾಮೋದರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ಯಾಮಲ ಸಿ.ಕೆ, ಹಾಗೂ ಮತ್ತಿತರರು ಭಾಗವಹಿಸಲಿದ್ದು, ಯುನಿಸೆಫ್ ಪ್ರಾದೇಶಿಕ ಸಂಯೋಜಕರಾದ ಡಾ. ಕೊಣಿಲ ರಾಘವೇಂದ್ರ ಹಾಗೂ ಹರೀಶ್ ಜೋಗಿ, ಉಡುಪಿ ಪೋಕ್ಸೋ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕ ವೈ.ಟಿ ರಾಘವೇಂದ್ರ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ, ಮಾಹಿತಿ ನೀಡಲಿದ್ದಾರೆ.

## ವಿದ್ಯುತ್ ನಿಲುಗಡೆ

**ಚಿಕ್ಕಮಗಳೂರು, ಆ.18:** ಮೆಸ್ಕಾಂನ ಆಲ್ದೂರು ಉಪವಿಭಾಗದ ಹೆಡದಾಳು ಹೊಸ ಫೀಡರ್ ಕಾಮಗಾರಿಯನ್ನು ನಿರ್ವಹಿಸಲಿರುವುದರಿಂದ ಸಾರಗೋಡು, ಗುಡ್ಡದೂರು, ಆಲ್ದೂರು ಟೌನ್, ಗುಲ್ಲನಪೇಟೆ, ಹಾಂದಿ ಕೆರೆಮಕ್ಕಿ ಮತ್ತು ಶಂಕರ್‌ಫಾಲ್ಸ್ ಫೀಡರ್‌ನಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಗ್ರಾಮಗಳಿಗೆ ಆಗಸ್ಟ್ 19 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿರುವುದಿಲ್ಲ. ಇದರಿಂದಾಗಿ ಹುಯಿಗೆರೆ, ಆಲ್ದೂರು, ಕೆಳಗೂರು, ಸತ್ತಿಹಳ್ಳಿ, ಬಸ್ಕಲ್, ದೊಡ್ಡಮಾಗರವಳ್ಳಿ, ಕೂದುವಳ್ಳಿ, ಆಣೂರು, ಬೈಗೂರು, ಬಸರವಳ್ಳಿ, ದೇವದಾನ ಸೇರಿದಂತೆ ಪಂಚಾಯಿತಿಯ ಎಲ್ಲಾ ಗ್ರಾಮಗಳು ಈ ವಿದ್ಯುತ್ ನಿಲುಗಡೆಗೆ ಒಳಗಾಗಲಿವೆ ಎಂದು ಮೆಸ್ಕಾಂ ಆಲ್ದೂರು ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಹಂನಿಂದ ಮೆರೆದವರಿಗೆ ಶನಿದೇವರು ಹೆಗಲೇರುತ್ತಾರೆ : ಶಾಸಕ ತಮ್ಮಯ್ಯ



**ಚಿಕ್ಕಮಗಳೂರು :** ಸಮಾಜದ ಒಳಿತಿಗಾಗಿ ಸತ್ಕಾರ್ಯ, ಸಾಮಾಜಿಕ ಕೆಲಸಗಳನ್ನು ಪೂ ರೈಸಿದರೆ ಶನೇಶ್ವರಸ್ವಾಮಿ ಆರೈಸುವರು. ನನ್ನಿಂದಲೇ ಎಲ್ಲವೂ ಮತ್ತು ಅಹಂನಿಂದ ಮರೆದವನಿಗೆ ಶನಿದೇವ ರು ಹೆಗಲೇರಿ ಬದುಕಿನಲ್ಲಿ ತಕ್ಕಪಾಠ ಕಲಿಸುತ್ತಾರೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ತಾಲ್ಲೂಕಿನ ಅಲ್ಲಂಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಶ್ರೀ ಶನೈಶ್ವರಸ್ವಾಮಿಯವರ ಭೂ ಪ್ರಾಧನ್ಯ ಗುದ್ದಲಿಪೂಜೆ ನೆರವೇರಿಸಿ ಭಾನುವಾರ ಅವರು ಮಾತನಾಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಸಾವಿರಾರು ದೇವತೆಗಳಿವೆ. ಅದರಲ್ಲಿ ಶ್ರೀ ಶನೇಶ್ವರಸ್ವಾಮಿಗೆ ಜನಸಾಮಾ ನ್ಯರು ಜೀವನದಲ್ಲಿ ಕಂಟಕ ಎದುರಾಗದಂತೆ ನೆಮ್ಮದಿಯಿಂದ ಬದುಕಲು ಮೊದಲು ಪೂಜೆ ಸಲ್ಲಿಸುವ ಗುಣ ವಿದೆ. ಹಾಗಾಗಿಯೇ ಶ್ರಾವಣ ಮಾಸದಲ್ಲಿ ಬಹುತೇಕ ಕುಟುಂಬಗಳು ಶನೇಶ್ವರ ಕಥೆ ಹೇಳಿಸುತ್ತಾರೆ ಎಂದರು.

ಇಂದಿನ ಯುವಜನತೆಗೆ ದೇಗುಲಗಳ ಅರಿವು ಮೂಡಿಸುವ ಜೊತೆಗೆ ಪಾಲಕರು ರಾಷ್ಟ್ರಪ್ರೇಮ, ದೇಶ ಭಕ್ತಿಯ ಪರಿಪಾಠವನ್ನು ಬೋಧಿಸಬೇಕು. ನಂತರ ಮನೆ, ವೈಯಕ್ತಿಕ ಜೀವನಕ್ಕೆ ಆದ್ಯತೆ ನೀಡುವುದು ಮುಖ್ಯ ವಾಗಿದೆ. ಸಮಾಜದಲ್ಲಿ ಉಳ್ಳವರು, ಬಡವರು ಎಲ್ಲರೂ ಜೀವಿಸುತ್ತಿದ್ದಾರೆ. ಆದರೆ ನಾನು ಎಂಬ ಅಹಂ ಎ ನ್ನುವವರಿಗೆ ಶನೇಶ್ವರಸ್ವಾಮಿಯ ವಕ್ರದೃಷ್ಟಿ ತಟ್ಟಲಿದೆ ಎಂದು ಹೇಳಿದರು.


ಹಲವಾರು ವರ್ಷಗಳಿಂದ ನೆಲೆಸಿದ್ಧ ಶ್ರೀ ಶನೇಶ್ವರಸ್ವಾಮಿ ಪುರಾತನ ದೇವಾಲಯವನ್ನು ಹೊಸದಾಗಿ ನಿರ್ಮಿಸಿ ಭಕ್ತಾಧಿಗಳಿಗೆ ಅನುಕೂಲಕ್ಕೆ ಮುಂದಾಗಿರುವ ಗ್ರಾಮಸ್ಥರು, ಸಮಿತಿಯ ಪದಾಧಿಕಾರಿಗಳ ಕಾರ್ಯ ಉತ್ತಮವಾಗಿದೆ. ಮುಂದೆಯು ಅಲ್ಲಂಪುರ ಗ್ರಾಮಸ್ಥರ ಶ್ರೇಯೋಭಿವೃದ್ಧಿ ಕಾರ್ಯಗಳಿಗೆ ಸದಾ ಕೈಜೋಡಿ ಸುತ್ತೇನೆ ಎಂದು ಭರವಸೆ ನೀಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯೆ ಎ.ವಿ.ಗಾಯಿತ್ರಿ ಶಾಂತೇಗೌಡ ಮಾತನಾಡಿ ಅಲ್ಲಂಪುರ ಭಾಗದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಅನೇಕ ಅಭಿವೃದ್ಧಿ ಕಾರ್ಯಗಳನ್ನ ಕೈಗೊಂಡಿದ್ದೇವೆ. ಹಾಗೂ ಪಂಚಗ್ಯಾರಂಟಿ ಯೋಜನೆಗಳು ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ಬಹಳಷ್ಟು ಶಕ್ತಿ ಕೊಟ್ಟಿದೆ ಎಂದು ತಿಳಿಸಿದರು.

ಬಿಜೆಪಿ ಮುಖಂಡ ಕೆ.ಆರ್.ಅನಿಲ್‌ಕುಮಾರ್ ಮಾತನಾಡಿ ದೇವಾಲಯ ಅಭಿವೃದ್ದಿಗೆ ಇದೀಗ ಚಾಲ ನೆ ನೀಡಲಾಗಿದ್ದು ಶಾಸಕರು ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರು ಸಮರ್ಪಕ ಅನುದಾನ ಒದ ಗಿಸಿಕೊಟ್ಟಲ್ಲಿ ದೇವಾಲಯ ನಿರ್ಮಾಣಕ್ಕೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಾಲಯ ಸಮಿತಿ ಅಧ್ಯಕ್ಷ ಎನ್.ಲೋಕೇಶ್, ದೇವಾಲಯ ಪ್ರಧಾನ ಅರ್ಚಕ ಎಂ.ಆರ್.ಅನಂತು, ದೇವಾಲಯ ಸಮಿತಿ ಪದಾಧಿಕಾರಿಗಳಾದ ನಾಗರಾಜ್, ಮೋಹನ್‌ಕುಮಾರ್, ತಿಮ್ಮಯ್ಯ, ಶಿವಕುಮಾರ್, ಮಂಜುನಾಥ್, ಅಮರನಾಥ್, ಬಸವರಾಜು, ರವಿಕುಮಾರ್, ಕೇಶವಮೂರ್ತಿ, ಲೋಕೇಶ್ ಪರಮೇಶ್, ಕುಮಾರ್ ಹಾಗೂ ಗ್ರಾ.ಪಂ. ಅಧ್ಯಕ್ಷರು, ಸದಸ್ಯರುಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ರಾಜ್ಯ ಹೆದ್ದಾರಿಯಲ್ಲಿ ಅಕ್ರಮವಾಗಿಜಾಗ ಒತ್ತುವರಿ : ಕ್ರಮಕ್ಕೆ ಮನವಿ



**ಚಿಕ್ಕಮಗಳೂರು:** ಸಖರಾಯಪಟ್ಟಣ ಮತ್ತು ಬಾಣಾವರ ರಾಜ್ಯ ಹೆದ್ದಾರಿಯ ರಸ್ತೆ ಬದಿಯಲ್ಲಿ ಅಕ್ರಮವಾಗಿ ಒತ್ತುವರಿ ಮಾಡಿರುವ ಜಾಗವನ್ನು ಖುಲ್ಲಾಗೊಳಿಸಬೇಕು ಎಂದು ಸಖರಾಯಪಟ್ಟಣ ವಿಶ್ವ ಹಿಂದೂ ಪರಿಷತ್ ಬಜರಂಗದಳದ ಮುಖಂಡರುಗಳು ಇಂದು ಗ್ರಾ.ಪಂ. ಆಡಳಿತ ಮಂಡಳಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಬಜರಂಗಳ ಸಂಯೋಜಕ ಎಸ್.ಜಿ.ಸಂಜಯ್ ಸಖರಾಯಪಟ್ಟಣದಿಂದ ಬಾಣಾವರ ಮಾರ್ಗದ ರಾಜ್ಯ ಹೆದ್ದಾರಿಯು ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿದೆ. ಆದರೆ ಕೆಲವರು ರಸ್ತೆ ಬದಿಯ ಗೋರಿಯ ಪಕ್ಕದಲ್ಲಿ ಗ್ರಾವಲ್ ಹಾಕಿ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಲು ಯತ್ನಿಸಲಾಗುತ್ತಿದೆ ಎಂದು ದೂರಿದರು. ಇದರಿಂದ ಪ್ರತಿನಿತ್ಯ ಈ ಮಾರ್ಗದಲ್ಲಿ ಸಂಚರಿಸುವ ಪಾದಚಾರಿಗಳು, ವಾಹನ ಸವಾರರಿಗೆ ತೀವ್ರ ತೊಂದ–ರೆಯಾಗುತ್ತಿದೆ. ಕೂಡಲೇ ಗ್ರಾಮ ಪಂಚಾಯಿತಿ ಆಡಳಿತವು ಈ ಒತ್ತುವರಿಯನ್ನು ಗಂಭೀರವಾಗಿ ಪರಿಗಣಿಸಬೇಕು. ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಅಕ್ರಮ ಒತ್ತುವರಿಯನ್ನು ಖುಲ್ಲಾಗೊಳಿಸಲು ಸಂಬಂಧಿಸಿದ ಇಲಾಖೆಯ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ಬಹುತೇಕ ಸಮ್ಮೇಳನ, ಘಟಕಗಳಿಗೆ ಜಿಲ್ಲೆ ಪ್ರಥಮ ಸ್ಥಾನ : ಶ್ರೀನಿವಾಸ್



**ಚಿಕ್ಕಮಗಳೂರು :** ಸಾಹಿತ್ಯವನ್ನು ಜಿಲ್ಲೆಯಾದ್ಯಂತ ಪರಿಚಯಿಸಲು ಹೊಸ ಹೊಸ ಆವಿ ಷ್ಕಾರಗಳು ಸೃಷ್ಟಿಯಾಗಿವೆ. ಮಹಿಳಾ, ಯುವ, ಜಾನಪದ ಸೇರಿದಂತೆ ಬಹುತೇಕ ಘಟಕ ಮತ್ತು ಗೋಷ್ಠಿಗಳಿ ಗೆ ಜಿಲ್ಲೆಯು ಪ್ರಥಮ ಹೆಜ್ಜೆಯನ್ನಿಟ್ಟಿದೆ ಎಂದು ಕಸಾಪ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ತಿಳಿಸಿದರು.

ತಾಲ್ಲೂಕಿನ ಹಿರೇಮಗಳೂರು ಗ್ರಾಮದ ದೊಡ್ಡ ಕಲ್ಯಾಣಿಯಲ್ಲಿ ಕಸಾಪ ತಾಲ್ಲೂಕು ಮಹಿಳಾ, ಕಸಬಾ ಹಾಗೂ ನಗರ ಘಟಕದಿಂದ ಶನಿವಾರ ಸಂಜೆ ಏರ್ಪಡಿಸಿದ್ದ 'ಕಲ್ಯಾಣಿಯಲ್ಲಿ ಶ್ರಾವಣ ಸಂಭ್ರಮ' ಕಾರ್ಯ ಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಿಷತ್ತಿನಿಂದ ಜಿಲ್ಲೆಯ ತಾಲ್ಲೂಕು, ಹೋಬಳಿ ಮಟ್ಟದ ಕಾರ್ಯಕ್ರಮವನ್ನು ಆಯೋಜಿಸಿ ಯುವಕವಿ ಗಳು, ಲೇಖಕರು, ಬರಹಗಾರರಿಗೆ ಪ್ರೋತ್ಸಾಹಿಸಲು ಮುಂದಾಗುತ್ತಿದೆ. ಸದ್ಯದಲ್ಲೇ ಮೂಡಿಗೆರೆ ತಾಲ್ಲೂಕಿನ ಲ್ಲಿ ಜಿಲ್ಲಾ ಮಟ್ಟದ ಸಮ್ಮೇಳನ ನಡೆಸಿ ಮಲೆನಾಡಿನ ಸಾಹಿತ್ಯಾಸಕ್ತರನ್ನು ಮುಂಚೂಣಿಗೆ ಕರೆ ತರುವ ಪ್ರಯತ್ನ ಮಾಡುತ್ತೇವೆ ಎಂದರು.

ಆಧುನಿಕತೆ ಜಗತ್ತಿನಲ್ಲಿ ಪೂರ್ವಿಕರ ಬಳಸುವ ಆಡುಭಾಷೆ, ಅಡುಗೆ ಕೋಣೆಯ ವಸ್ತುಗಳು, ಪದಾರ್ಥ ಗಳ ಹೆಸರು, ಜಾನಪದ ಭಾಷೆ, ಬೇಸಾಯದ ಕ್ರಮಗಳನ್ನು ಇಂದಿನ ಯುವಜನತೆಗೆ ತಿಳಿಸುವ ಮಹತ್ತರ ಅಭಿಯಾನವೊಂದು ಹಮ್ಮಿಕೊಂಡು ಹಿಂದಿನ ಸಂಸ್ಕೃತಿಯನ್ನು ಎಲ್ಲೆಡೆ ಹಬ್ಬಿಸಲು ತೀರ್ಮಾನಿಸಲಾಗಿದೆ ಎಂ ದು ಹೇಳಿದರು.

ಶಿಕ್ಷಕಿ ನಾಗಶ್ರೀ ತ್ಯಾಗರಾಜ್ ವಿಶೇಷ ಉಪನ್ಯಾಸ ನೀಡಿ ಮಾತನಾಡಿ ಕಲ್ಯಾಣಿ ಎಂದಾಕ್ಷಣ ಲಾವಣಿ ಗೀತೆಗಳು ನೆನಪಿಗೆ ಬರಲಿವೆ. ಹೀಗಾಗಿ ಕಸಾಪ ಮುಂದೆ ಲಾವಣಿ ಗೀತೆಗಳ ಗಾಯನದ ಕಾರ್ಯಕ್ರಮ ನಡೆಸಲಿ. ಡಿವಿಜಿಯವರು ಸಾಹಿತ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ. ಆದರೆ ಮಂಕುತಿಮ್ಮನ ಕಗ್ಗ ಹೊರತಾಗಿ ಬೇರೆ ಚರ್ಚೆಗಳಾಗುವುದಿಲ್ಲ ಎಂದು ಹೇಳಿದರು.

ಇಂದು ಶ್ರೀಕೃಷ್ಣ ಜಯಂತಿಯಂದು ಪರಿಸರದ ವಾತಾವರಣದಲ್ಲಿ ಶ್ರಾವಣ ಮಾಸವು ಜರುಗಿದೆ. ಕೃಷ್ಣ ಧನಕಾಯುವನು, ಕನಕ ಕುರಿಗಾಹಿ. ಒಬ್ಬರಲ್ಲಿ ಸುಮಧುರವಾದ ಕೊಳಲಿನ ನಾದವಿದೆ, ಮತ್ತೊಬ್ಬರಲ್ಲಿ ಅದ್ಭು ತ ಕಂಠದಿಂದ ಗೀತೆಗಳಿವೆ. ಇಬ್ಬರು ಒಂದಾಗಿ ಸಂಗೀತ ಲೋಕವೇ ಸೃಷ್ಟಿಸಿಯಾಗಲಿದೆ. ಆದರಿಂದು ಸಂ ತರನ್ನು ಒಂದು ಸಮಾಜಕ್ಕೆ ಸೀಮಿತಗೊಳಿಸಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಸಾಪ ತಾಲ್ಲೂಕು ಮಹಿಳಾ ಅಧ್ಯಕ್ಷೆ ವಿಜಯಲಕ್ಷ್ಮೀ ಮನೆಯಂಗಳದಿ ಸೀಮಿತವಾಗಿದ್ದ ಶ್ರಾವಣ ಮಾಸವು ಇಂದು ಪರಿಸರದೊಂದಿಗೆ ಆಚರಿಸುತ್ತಿರುವುದು ಖು ಷಿ ತಂದಿದೆ ಎಂದರು. ಈ ಸಂದರ್ಭದಲ್ಲಿ ಕಸಾಪ ಮಹಿಳಾ ಜಿಲ್ಲಾಧ್ಯಕ್ಷೆ ನಿರ್ಮಲ ಮಂಚೇಗೌಡ, ಕಸಾಪ ಹೋಬಳಿ ಅಧ್ಯಕ್ಷೆ ವೀಣಾ ಮಲ್ಲಿಕಾರ್ಜುನ್, ನಗರಾಧ್ಯಕ್ಷ ಸಚಿನ್‌ಸಿಂಗ್, ಸಾಹಿತಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ವಿದ್ಯಾರ್ಥಿಗಳು ಕನ್ನಡ ಭಾಷೆ ಬೆಳೆಸಲು ಮುಂದಾಗಬೇಕು : ಮಲ್ಲೇಶ್‌ಗೌಡ



**ಚಿಕ್ಕಮಗಳೂರು:** ನಾಡಿನಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ಮಹತ್ತರವಾದ ಹೊಣೆಗಾರಿಕೆ ವಿದ್ಯಾರ್ಥಿಗಳ ಮೇಲಿದೆ ಎಂದು ಸಾಹಿತಿ, ಜಾನಪದ ವಿದ್ವಾಂಸ ಡಾ. ಹೆಚ್.ಎಲ್. ಮಲ್ಲೇಶ್‌ಗೌಡ ಹೇಳಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ನಗರದ ಎಐಟಿ ಕಾಲೇಜಿನ ಸಭಾಂಗಣದಲ್ಲಿ ಇತ್ತೀಚಿಗೆ ಏರ್ಪಡಿಸಿದ್ದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ 100 ರಷ್ಟು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಗೌರವ ಡಾಕ್ಟರೇಟ್ ಪಡೆದ ಪರಿಷತ್ತಿನ ಪದಾಧಿಕಾರಿಗಳು ಮತ್ತು ಸಿಂಡಿಕೇಟ್ ಸದಸ್ಯರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಆಧುನಿಕತೆಯ ಗೀಳು ಮತ್ತು ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ವ್ಯಾಮೋಹದಿಂದಾಗಿ ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ಭಾಷೆ ನಾಡಿನಲ್ಲಿ ಕಣ್ಮರೆಯಾಗುತ್ತಿದೆ, ನೆಲದ ಸಂಸ್ಕೃತಿ ಮರೆಯಾಗುತ್ತಿದೆ ಎಂದು ವಿಷಾದಿಸಿದ ಅವರು, ಅದನ್ನು ಉಳಿಸಿ ಬೆಳೆಸುವುದು ಇಂದಿನ ಮಕ್ಕಳು ಮತ್ತು ವಿದ್ಯಾರ್ಥಿಗಳಿಂದ ಮಾತ್ರ ಸಾಧ್ಯ ಎಂದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಇಂಗ್ಲೀಷ್ ಕಲಿಕೆ ಅನಿವಾರ್ಯ, ಆದರೆ ಅದರ ನಡುವೆ ನಾವು ನಮ್ಮತನ ಮತ್ತು ಮಾತೃಭಾಷೆಯನ್ನು ಮರೆಯಬಾರದು, ದಿನನಿತ್ಯದ ಬದುಕಿನಲ್ಲಿ ಮಾತೃಭಾಷೆಯನ್ನು ಬಳಸುವ ಮೂಲಕ ಅದನ್ನು ಉಳಿಸಿ ಬೆಳೆಸಬೇಕು, ಮುಂದಿನ ಪೀಳಿಗೆಗೆ ಹಸ್ತಾಂತರಿಸಬೇಕು ಎಂದು ಕಿವಿ ಮಾತು ಹೇಳಿದರು. ಇಂದು ಪ್ರಶಂಸೆಗಳು ಜಾಸ್ತಿಯಾಗಿ ವಿಮರ್ಶೆಗಳು ಬಾಷಾ ಸಾಹಿತ್ಯದಲ್ಲಿ ಕಡಿಮೆಯಾಗುತ್ತಿವೆ ಎಂದು ವಿಷಾಧಿಸಿದ ಅವರು, ಭಾಷೆಯ ಬೆಳವಣಿಗೆಯ ದೃಷ್ಟಿಯಿಂದ ಪ್ರಶಂಸೆ ಮತ್ತು ವಿಮರ್ಶೆ ಒಟ್ಟಿಗೆ ಸಾಗಬೇಕು ಎಂದು ತಿಳಿಸಿದರು.

ಕನ್ನಡ ಭಾಷೆ ನಿರಂತರ ಚಲನಶೀಲವಾದದ್ದು, ಅದು ಇತ್ತೀಚೆಗೆ ಹಲವು ಕಾರಣಗಳಿಂದ ಗಟ್ಟಿತನವನ್ನು ಕಳೆದುಕೊಂಡು ಸೊರಗುತ್ತಿದೆ, ಭಾಷೆಗೆ ಹೊಸದಾಗಿ ಸೇರ್ಪಡೆಯಾಗುತ್ತಿರುವ ಹೊಸ ಹೊಸ ಪದಗಳು ಕನ್ನಡದ ಸೊಗಸನ್ನು ಹೆಚ್ಚಿಸಬೇಕೇ ಹೊರತು ಕುಂದಿಸಬಾರದು, ಭಾಷಾ ಸೌಂದರ್ಯವನ್ನು ಉಳಿಸುವ ಪ್ರಯತ್ನವಾಗಬೇಕು ಎಂದು ತಿಳಿಸಿದರು.

ಸಾಹಿತಿ ಡಾ. ಹೆಚ್.ಎಸ್. ಸತ್ಯನಾರಾಯಣ ಮಾತನಾಡಿ, ನಾಡಿನಲ್ಲಿ ಕನ್ನಡ ಉಳಿದರೆ ಮಾತ್ರ ನಮ್ಮತನ, ಈ ನೆಲದ ಸಂಸ್ಕೃತಿ, ಸಂಸ್ಕಾರ ಉಳಿಯುತ್ತವೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ್ ಮಾತನಾಡಿ, ನಾಡು ನುಡಿಯ ಸೇವೆಯನ್ನು ಜಿಲ್ಲಾ ಕಸಾಪ ನಿರಂತರವಾಗಿ ಮಾಡುತ್ತಿದೆ ಎಂದರು.

ಸಾಹಿತಿ ಡಿ.ಎಂ. ಮಂಜುನಾಥ ಸ್ವಾಮಿ ಮಾತನಾಡಿ, ಮಾತೃಭಾಷೆಯನ್ನು ಕಳೆದುಕೊಂಡರೆ ನಾವು ನಮ್ಮತನವನ್ನು ಕಳೆದುಕೊಂಡು ಅನಾಥರಂತಾಗುತ್ತೇವೆ ಎಂದು ಎಚ್ಚರಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ತಾಲೂಕು ಕಸಾಪ ಅಧ್ಯಕ್ಷ ಮಾವಿನಕೆರೆ ದಯಾನಂದ್ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದವರಿಗೆ ಕೃತಜ್ಞತೆ ಸಲ್ಲಿಸಿದರು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇಕಡ 100 ಅಂಕ ಗಳಿಸಿದ ವಿದ್ಯಾರ್ಥಿಗಳನ್ನು, ಗೌರವ ಡಾಕ್ಟರೇಟ್ ಪಡೆದ ಪರಿಷತ್ತಿನ ಪದಾಧಿಕಾರಿಗಳು ಮತ್ತು ಸಿಂಡಿಕೇಟ್ ಸದಸ್ಯರನ್ನು ಸಮಾರಂಭದಲ್ಲಿ ಗೌರವಿಸಲಾಯಿತು.

ಇದೇ ವೇಳೆ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಸಿ.ವಿ.ರಾಮನ್ ಅವರ ಸ್ಮರಣಾರ್ಥ ಆನ್ಲೈನ್‌ನಲ್ಲಿ ನಡೆಸಿದ ರಾಜ್ಯ ಮತ್ತು ಜಿಲ್ಲಾಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸಮಾರಂಭದಲ್ಲಿ ಬಹುಮಾನ ವಿತರಿಸಲಾಯಿತು.

ಆದಿಚುಂಚನಗಿರಿ ಮಹಾವಿದ್ಯಾಲಯದ ಕುಲಸಚಿವ ಡಾ.ಸಿ.ಕೆ. ಸುಬ್ಬರಾಯ, ಎಐಟಿ ಪ್ರಾಂಶುಪಾಲ ಡಾ. ಸಿ.ಟಿ. ಜಯದೇವ್, ಆಶಾಕಿರಣ ಅಂಧಮಕ್ಕಳ ಶಾಲೆಯ ಅಧ್ಯಕ್ಷ ಡಾ. ಜೆ.ಪಿ. ಕೃಷ್ಣೇಗೌಡ, ಕಲಾ ಸೇವಾ ಸಂಘದ ಅಧ್ಯಕ್ಷ ಕೆ.ಮೋಹನ್, ಡಾ. ಜಿ.ಡಿ. ನಾರಾಯಣ್, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಕೆ.ಮಂಜುಳ, ತಾಲೂಕು ಕಸಾಪ ಗೌರವ ಕಾರ್ಯದರ್ಶಿ ಟಿ. ಸಂದೀಪ್ ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**